ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 129
30–10–2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 129

## ಸಂಪಾದಕೀಯ.....

# ಭಾವನೆಗಳ ಜಗಳದಲ್ಲಿ ಜನರ ಹಕ್ಕುಗಳೇ ಸೋಲುತ್ತಿವೆ

ಮುಖ್ಯಮಂತ್ರಿ ಬದಲಾಗ್ತಾರಾ?, ಯಾರು ಅಧಿಕಾರ ಹಿಡಿಯುತ್ತಾರೆ?, ಆರ್‌ಎಸ್‌ಎಸ್ ಪಥಸಂಚಲನ, ಧರ್ಮ, ಜಾತಿ ಇಂಥ ಕೆಲಸಕ್ಕೆ ಬಾರದ ಮಾತುಗಳು ರಾಜಕೀಯ ಪಡಸಾಲೆಯಲ್ಲಿ ಚರ್ಚೆಯಾಗುತ್ತಿವೆ.



ಆದರೆ ಜನರ ಬದುಕನ್ನು ನೇರವಾಗಿ ಬದಲಿಸುವ ನಿಜವಾದ ಸಮಸ್ಯೆಗಳ ಬಗ್ಗೆ ಯಾರೂ ಮಾತನಾಡುತ್ತಿಲ್ಲ.

ಬ್ಯಾಂಕ್ ಖಾಸಗೀಕರಣದಿಂದ ಬಡವರು ಸಾಲ ಪಡೆಯಲು ಕಷ್ಟವಾಗುತ್ತದೆ. ಇದು ಲಕ್ಷಾಂತರ ಜನರ ಜೀವನದ ಮೇಲೆ ಪರಿಣಾಮ ಬೀರುತ್ತದೆ. ಈ ವಿಷಯಕ್ಕೆ ಚರ್ಚೆ ಎಲ್ಲಿದೆ?

ಮಹಿಳೆಯರು ಮತ್ತು ಮಕ್ಕಳ ನಾಪತ್ತೆ ಪ್ರಕರಣಗಳು ಹೆಚ್ಚುತ್ತಿರುವುದು ಇನ್ನೊಂದು ಕಳವಳಕಾರಿ ವಿಷಯ. 2019 ರಿಂದ 2021ರೊಳಗೆ ಭಾರತದಲ್ಲಿ 10 ಲಕ್ಷಕ್ಕೂ ಹೆಚ್ಚು ಮಹಿಳೆಯರು ಮತ್ತು 2.5 ಲಕ್ಷ ಮಕ್ಕಳ ನಾಪತ್ತೆಯಾಗಿದ್ದಾರೆ.

ರಸ್ತೆಗಳ ಗುಂಡಿಗಳು ಪ್ರತಿ ದಿನ ಜನರ ಜೀವ ಕಿತ್ತುಕೊಳ್ಳುತ್ತಿವೆ. 2021ರಲ್ಲಿ ಭಾರತದಲ್ಲಿ 1.5 ಲಕ್ಷಕ್ಕೂ ಹೆಚ್ಚು ಮಂದಿ ರಸ್ತೆ ಅಪಘಾತದಲ್ಲಿ ಸತ್ತು ಹೋಗಿದ್ದಾರೆ. ಅದರಲ್ಲೂ ಅನೇಕ ಪ್ರಕರಣಗಳು ಕೆಟ್ಟ ರಸ್ತೆ ಮತ್ತು ಗುಂಡಿಗಳ ಕಾರಣ. ಆದರೂ, ರಸ್ತೆ ಸುರಕ್ಷತೆ ಪ್ರಮುಖ ಚರ್ಚೆಯ ವಿಷಯವಲ್ಲ.

ಶಾಲೆಗಳ ಸ್ಥಿತಿ ನೋಡಿ, ಕಟ್ಟಡಗಳು ಕುಸಿಯುತ್ತಿವೆ, ಮಕ್ಕಳು ಅಪಾಯದಲ್ಲಿದ್ದಾರೆ. ಶಿಕ್ಷಕರ ಕೊರತೆ, ಸೌಲಭ್ಯಗಳ ಕೊರತೆ ಹೆಚ್ಚಾಗುತ್ತಲೇ ಇದೆ. ಆದರೆ ಶಿಕ್ಷಣದ ಬಗ್ಗೆ ಚರ್ಚೆ ಸುದ್ದಿಯ ಮುನ್ನಲೆಗೆ ಬರುತ್ತಿಲ್ಲ. ಪೋಷಕರ ಆತಂಕ ಮಾತ್ರ ಹೆಚ್ಚುತ್ತಿದೆ. ಮಹಿಳೆಯರ ಮೇಲೆ ಹಿಂಸೆ, ಕೊಲೆ, ಅತ್ಯಾಚಾರಗಳು ಒಂದು ದಿನದ ಸುದ್ದಿ ಆಗುತ್ತಿವೆ. ನಮ್ಮ ಸಮಾಜದಲ್ಲಿ ಈ ರೀತಿಯ ಅಪರಾಧಗಳ ಬಗ್ಗೆ ಗಂಭೀರ ಚರ್ಚೆಯೇ ನಡೆಯದಂತಾಗಿದೆ.

ಭ್ರಷ್ಟಾಚಾರ ಒಪ್ಪಿ ಕೊಂಡ ಮೌಲ್ಯ ಆಗುತ್ತಿದೆ. ಸರ್ಕಾರಿ ಯೋಜನೆಗಳು, ಗುತ್ತಿಗೆಗಳು, ನೇಮಕಾತಿಗಳಲ್ಲಿ ಪ್ರಾಮಾಣಿಕತೆ ಕಡಿಮೆಯಾಗುತ್ತಿದೆ. ಜನರು ಹಕ್ಕನ್ನು ಪಡೆಯಲು ದರಖಾಸ್ತಿ ಮಾಡಬೇಕು ಎನ್ನುವ ಪರಿಸ್ಥಿತಿ. ಇದರ ನಡುವೆ ರಾಜಕೀಯರು ಜನರ ಗಮನ ಬೇರೆಡೆ ಸೆಳೆಯುತ್ತಾರೆ. ಧರ್ಮದ ಹೆಸರು, ಜಾತಿಯ ಹೆಸರು, ಪರಂಪರೆಯ ಹೆಸರಿನಲ್ಲಿ ಜನರ ಭಾವನೆಗಳನ್ನು ಆಡಿಸುತ್ತಾರೆ. ಜನರೂ ಅದಕ್ಕೇ ಆದ್ಯತೆ ಕೊಟ್ಟು ತಮ್ಮ ಜೀವನದ ನಿಜವಾದ ಪ್ರಶ್ನೆಗಳನ್ನು ಮರೆತುಬಿಡುತ್ತಾರೆ.

**ಮಾಧ್ಯಮಗಳು ಜನರ ಧ್ವನಿಯಾಗಬೇಕಾದರೆ ?** : ಇಂದು ರಾಜಕೀಯದ ಮೆರವಣಿಗೆಯ ಪ್ರಸಾರ ಕೇಂದ್ರಗಳಾಗಿ ಪರಿಣಮಿಸಿವೆ.

ನಮ್ಮ ಗಮನವನ್ನು ಯಾವ ಕಡೆ ತಿರುಗಿಸಬೇಕು ಎಂಬುದನ್ನೇ ಇತರರು ನಿರ್ಧರಿಸುತ್ತಿರುವ ಸ್ಥಿತಿಯಲ್ಲಿದ್ದೇವೆ.

ನಮ್ಮ ಮನೆಗೆ ಬರುವ ಸಮಸ್ಯೆ ಯಾವುದು? ನಮ್ಮ ಮಕ್ಕಳ ಭವಿಷ್ಯಕ್ಕೆ ಅಪಾಯ ಯಾವುದು? ನಮ್ಮ ದೈನಂದಿನ ಬದುಕನ್ನು ತಾಕುವುದು ಯಾವುದು? ಪ್ರತಿ ನಾಗರಿಕನು ಈ ಪ್ರಶ್ನೆಗಳನ್ನು ಕೇಳಬೇಕು. ಜನರು ಕೇಳಿದಾಗ, ಬೇಡಿ–ಕೆ ಇಟ್ಟಾಗಲೇ ರಾಜಕೀಯ ಸರಿಯಾದ ದಿಕ್ಕಿಗೆ ಹೋಗುತ್ತದೆ.

ಬ್ಯಾಂಕ್ ಖಾಸಗೀಕರಣದ ಬಗ್ಗೆ, ಮಹಿಳಾ ಮತ್ತು ಮಕ್ಕಳ ಸುರಕ್ಷತೆ ಬಗ್ಗೆ, ರಸ್ತೆ ಗುಂಡಿಗಳಿಂದಾಗುವ ಸಾವುಗಳ ಬಗ್ಗೆ, ಶಾಲೆಗಳ ಗುಣಮಟ್ಟದ ಬಗ್ಗೆ, ಭ್ರಷ್ಟಾಚಾರದ ಬಗ್ಗೆ ನಾವು ಮಾತನಾಡಲೇಬೇಕು.

ನಿಜವಾದ ಅಭಿವೃದ್ಧಿ ಎಂದರೆ ಜನರ ಸುರಕ್ಷತೆ, ಶಿಕ್ಷಣ, ಆರೋಗ್ಯ, ಉದ್ಯೋಗ, ಭದ್ರತೆ. ಇವುಗಳನ್ನೇ ನಾವು ಕೇಳಬೇಕು. ಇವುಗಳನ್ನೇ ಸರ್ಕಾರ ನೀಡಬೇಕು.

ರಾಜಕೀಯ ಕುರ್ಚಿ ಬದಲಾದರೆ ನಮ್ಮ ಬದುಕು ಬದಲಾಗುವುದಿಲ್ಲ. ಆದರೆ ನಾವು ಕೇಳುವ ಪ್ರಶ್ನೆ ಬದಲಾದರೆ ರಾಜಕೀಯ ಬದಲಾಗುತ್ತದೆ. ನಮ್ಮ ರಾಜ್ಯ ಬದಲಾಗುತ್ತದೆ.

ಕರ್ನಾಟಕದ ಭವಿಷ್ಯ ನಮ್ಮ ಕೈಯಲ್ಲಿದೆ, ನಮ್ಮ ಧ್ವನಿಯಲ್ಲಿ ಇದೆ. ಆ ಧ್ವನಿ ನಿಜವಾದ ಸಮಸ್ಯೆಗಳಿಗಾಗಿ ಎದ್ದು ಬರಬೇಕಾಗಿದೆ.

**–ಮಲ್ಲಿಕಾರ್ಜುನ್ ಕಬ್ಬೂರು,**
ಸಂಪಾದಕರು

## ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ

# ಪರೀಕ್ಷಾ ಅಕ್ರಮಗಳ ಕುರಿತು ಜಾಗರೂಕರಾಗಿರಿ : ಜಿಲ್ಲಾಧಿಕಾರಿ



**ದಾವಣಗೆರೆ:** ಇದೇ ನವೆಂಬರ್ 2 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಹಾಯ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆಸೆಟ್) ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ. ಈ ಸಂದರ್ಭದಲ್ಲಿ ಖಜಾನೆ ಅಧಿಕಾರಿ, ಮಾರ್ಗಾಧಿಕಾರಿಗಳು, ಪರೀಕ್ಷಾ ಕೇಂದ್ರ ಮುಖ್ಯಸ್ಥರು ಹಾಗೂ ಕೊಠಡಿ ಮೇಲ್ವಿಚಾರಕರು ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್ ನಿರ್ವಹಣೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಹೇಳಿದರು.

ಈ ಕುರಿತು ಬುಧವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ 21 ಕೇಂದ್ರಗಳಲ್ಲಿ ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ ನಡೆಯಲಿದೆ. ಒಟ್ಟು 9710 ಅಭ್ಯರ್ಥಿಗಳು 19 ವಿವಿಧ ವಿಷಯಗಳಿಗೆ ಪರೀಕ್ಷೆ ಎದುರಿಸಲಿದ್ದಾರೆ. ಈ ವೇಳೆ ಯಾವುದೇ ಪರೀಕ್ಷಾ ಅಕ್ರಮಗಳು ನಡೆಯದಂತೆ ಜಾಗರೂಕತೆ ವಹಿಸಬೇಕು. ಪರೀಕ್ಷಾ ಕೇಂದ್ರ ಸುತ್ತ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಬೇಕು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹೊರಡಿಸಿರುವ ಪರೀಕ್ಷಾ ನಿಯಮಗಳನ್ನು ತಪ್ಪದೇ ಪಾಲಿಸಬೇಕು ಎಂದು ಹೇಳಿದರು.

ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ತೆರಳು ಮುಂಚೆ ಸೂಕ್ತವಾಗಿ ತಪಾಸಣೆ ನಡೆಸಬೇಕು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹೊರಡಿಸಿರುವ ವಸ್ತ್ರಸಹಿಂತೆಯನ್ನು ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸಬೇಕು. ಮೊಬೈಲ್ ಸೇರಿದಂತೆ ಯಾವುದೇ

ರೀತಿಯ ಎಲೆಕ್ಟ್ರಾನಿಕ್ ವಸ್ತುಗಳನ್ನು ಪರೀಕ್ಷಾ ಕೇಂದ್ರಕ್ಕೆ ತರುವಂತಿಲ್ಲ. ಹಾಗೆಯೇ ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಆರೋಗ್ಯ ಸಿಬ್ಬಂದಿಗಳನ್ನು ನೇಮಿಸುವಂತೆ ತಿಳಿಸಿದ ಅವರು, ಪರೀಕ್ಷಾ ಕೇಂದ್ರಗಳಲ್ಲಿ ಶೌಚಾಲಯ, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ತಾಕೀತು ಮಾಡಿದರು. ಪರೀಕ್ಷಾ ಕಾರ್ಯದಲ್ಲಿ ಲೋಪ ಕಂಡುಬಂದರೆ ಸಂಬಂಧಪಟ್ಟವರ ಮೇಲೆ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಚ್ಚರಿಕೆ ನೀಡಿದರು.


ಪರೀಕ್ಷಾ ಕಾರ್ಯಕ್ಕೆ ಈಗಾಗಲೇ ಸುಗಮ ರೀತಿಯಲ್ಲಿ ನಡೆಸುವ ಸಲುವಾಗಿ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಪರೀಕ್ಷಾ ಕಾರ್ಯಕ್ಕೆ 24 ಅಭ್ಯರ್ಥಿಗಳ ಕೊಠಡಿಗೆ ಒಬ್ಬರಂತೆ 21 ವೀಕ್ಷಣಗಾರ, ಹಾಗೂ ತಾಲೂಕು ಮಟ್ಟದ ಅಧಿಕಾರಿಗಳ ನೇತೃತ್ವದಲ್ಲಿ 6 ಮಾರ್ಗಾಧಿಕಾರಿಗಳ ತಂಡ ನೇಮಿಸಲಾಗಿದೆ. ಈಗಾಗಲೇ ಪರೀಕ್ಷಾ ಪ್ರವೇಶ ಪತ್ರದಲ್ಲಿ ಅಭ್ಯರ್ಥಿಗಳಿಗೆ ಪರೀಕ್ಷಾ ಕೇಂದ್ರಗಳ ವಿವಿರ ಹಾಗೂ ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ಅಂಧ ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ಅಗತ್ಯ ಸಾಧನ, ಸಲಕರಣೆ ಒದಗಿಸಲಾಗುವುದು ಎಂದು ಪದವಿ ಪೂರ್ವ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

**ಪರೀಕ್ಷಾ ಕೇಂದ್ರಗಳ ಸುತ್ತ 144 ಸೆಕ್ಷನ್ ಜಾರಿ:** ನವೆಂಬರ್ 2 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಕೆ–ಸೆಟ್ ಅರ್ಹತಾ ಪರೀಕ್ಷೆ ನಡೆಯಲಿದ್ದು, ಅಂದು ನಗರದ ಎಲ್ಲಾ ಪರೀಕ್ಷಾ ಕೇಂದ್ರಗಳ ಸುತ್ತಲೂ 200ಮೀ ಸಾರ್ವಜನಿಕ ನಿಷೇಧಿತ ಪ್ರದೇಶವೆಂದು ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಲೂ ಇರುವ ಜೆರಾಕ್ಸ್ ಅಂಗಡಿ ಹಾಗೂ ಸೈಬರ್ ಕೇಂದ್ರಗಳನ್ನು ಪರೀಕ್ಷಾ ಅವಧಿಯಲ್ಲಿ ತೆರೆಯುವಂತಿಲ್ಲ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಆದೇಶಿಸಿದ್ದಾರೆ.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೇರಿದಂತೆ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

# ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾಗಿ ಶಿವಾನಂದ ತಗಡೂರು ಪುನರಾಯ್ಕೆ

**ಬೆಂಗಳೂರು:** ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ(ಕೆಯುಡಬ್ಲ್ಯೂಜೆ) ರಾಜ್ಯ ಅಧ್ಯಕ್ಷರಾಗಿ ಶಿವಾನಂದ ತಗಡೂರು ಅವರು ಪುನಾರಾಯ್ಕೆಯಾಗಿದ್ದಾರೆ.



2025–28ನೇ ಸಾಲಿಗೆ ನಡೆಯುತ್ತಿರುವ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಒಂದೇ ನಾಮಪತ್ರ ಬಂದಿದ್ದರಿಂದ ಅವಿರೋಧ ಆಯ್ಕೆಯಾದಂತಾಗಿದ್ದು, ಈ ಬಗ್ಗೆ ಅಧಿಕೃತ ಘೋಷಣೆಯಷ್ಟೇ ಬಾಕಿ ಇದೆ.

ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲೂಕು ಕುಗ್ರಾಮ ತಗಡೂರು ಗ್ರಾಮದ ರೈತ ಕುಟುಂಬದ ಶ್ರೀಮತಿ ಕಮಲಮ್ಮ ಮತ್ತು ವೀರೇಗೌಡ ದಂಪತಿಗಳ ಪುತ್ರನಾಗಿ ಜನಿಸಿದ ಟಿ.ವಿ.ಶಿವಾನಂದ (ಆನಂದ) ಅವರು ತೊಂಬತ್ತರ ದಶಕದಲ್ಲಿ ಪತ್ರಿಕೋದ್ಯಮ ಪ್ರವೇಶಿಸಿದವರು.

ಬಾಗೂರು–ನವಿಲೆ ಸುರಂಗ ಸಂತ್ರಸ್ತರ ಪರವಾಗಿ ಹೋರಾಟ ಸಂಘಟಿಸಿದ್ದ ಅವರು, ಹಾಸನ ಜಿಲ್ಲಾ ನೀರಾವರಿ ಹೋರಾಟ ಸಮಿತಿಗಳ ಒಕ್ಕೂಟ, ರೈತ ಹಿತ ರಕ್ಷಣಾ ಸಮಿತಿ, ಹಾಸನ ಜಿಲ್ಲಾ ಸಾಕ್ಷರತಾ ಆಂದೋಲನ ಸಮಿತಿ ಸಂಚಾಲಕರಾಗಿ ದುಡಿದವರು. ಹಲವು ಜನಪರ ಚಳವಳಿಯಲ್ಲಿ ಮುಂದಾಳಾಗಿ ಗುರುತಿಸಿಕೊಳ್ಳುತ್ತಲೇ ಪತ್ರಕರ್ತರಾಗಿ ಮಾಗಿದವರು.

2004ರಲ್ಲಿ ಹಾಸನ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘ ಅಧ್ಯಕ್ಷರಾಗಿದ್ದಾಗ ಸುಸಜ್ಜಿತ ಪತ್ರಕರ್ತರ ಭವನವನ್ನು ನಿರ್ಮಾಣ ಮಾಡಿದ್ದು ಅವರ ಕ್ರೀಯಾಶೀಲತೆಗೆ ಸಾಕ್ಷಿ. 2018ರಲ್ಲಿ ಉಪಾಧ್ಯಕ್ಷರಾಗಿ ಆಯ್ಕೆಯಾಗುವ ಮೂಲಕ ಕೆಯುಡಬ್ಲ್ಯೂ?ಜೆಗೆ ಹೆಜ್ಜೆ ಇಟ್ಟ ತಗಡೂರು, ಅಧ್ಯಕ್ಷರೊಬ್ಬರ ರಾಜೀನಾಮೆ ತರುವಾಯ ಆ ಸಂಘಟನೆಯ ಚುಕ್ಕಾಣಿ ಹಿಡಿದವರು.

ಕೋವಿಡ್ ಸಂದರ್ಭದಲ್ಲಿ ಮೃತಪಟ್ಟ ಪತ್ರಕರ್ತರುಗಳ ಕುಟುಂಬಗಳಿಗೆ ತಲಾ 5 ಲಕ್ಷ ರೂ ನೆರವು ಕೊಡಿಸಿದ ಅವರ ಹೋರಾಟದ ಪರಿಯನ್ನು ಯಾರೂ ಮರೆಯುವಂತಿಲ್ಲ. ಬಹುರೂಪಿ ಪ್ರಕಾಶನ ಪ್ರಕಟಿಸಿರುವ ಕೋವಿಡ್ ಕಥೆಗಳು ಪುಸ್ತಕದಲ್ಲಿ ಪ್ರತಿ ಘಟನೆಗಳನ್ನು ತಗಡೂರು ದಾಖಲಿಸಿದ್ದಾರೆ.

75ನೇ ವರ್ಷದ ಸ್ವಾತಂತ್ರ್ಯೋತ್ಸವ ಸಂದರ್ಭದಲ್ಲಿ ಹಿರಿಯ ಪತ್ರಕರ್ತರ ಮನೆಯಂಗಳಕ್ಕೆ ಕೆಯುಡಬ್ಲ್ಯೂ?ಜೆ ಎನ್ನುವ ಹೊಸ ಕಲ್ಪನೆಯೊಂದಿಗೆ ಹಿರಿಯ ಪತ್ರಕರ್ತರನ್ನು ಅವರ ಮನೆ ಅಂಗಳದಲ್ಲಿಯೇ ಗೌರವಿಸಿ, ಅವರ ಅನುಭವಗಳನ್ನು ದಾಖಲೀಕರಣ ಮಾಡಿದ್ದು ವಿಶೇಷ. ಅಷ್ಟೇ ಅಲ್ಲ, ಈ ಬಗ್ಗೆ ಅಮೃತ ಬೀಜ ಎನ್ನುವ ಪುಸ್ತಕವನ್ನು ಹೊರ ತಂದಿದ್ದಾರೆ.

ರಾಜ್ಯ ಪತ್ರಕರ್ತರ ಸಮ್ಮೇಳನಗಳಿಗೆ ಹೊಸ ರೂಪ ನೀಡಿದ್ದಲ್ಲದೆ, ಪತ್ರಕರ್ತರ ಕ್ಷೇಮ ನಿಧಿಯನ್ನು ಒಂದು ಕೋಟಿಗೆ ಹೆಚ್ಚಿಸಿದ್ದು ಸಾಧನೆ. ಹತ್ತು ಹಲವು ಕಾರ್ಯಕ್ರಮದ ಮೂಲಕ ಕೆಯುಡಬ್ಲ್ಯೂ?ಜೆಗೆ ಹೊಸ ಆಯಾಮ ನೀಡಿದ ತಗಡೂರು ಅವರು ಸತತ ಎರಡು ಬಾರಿ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿರುವುದು ಅವರ ಸಾಧನೆಗೆ ಹಿಡಿದ ಕನ್ನಡಿ ಮತ್ತು ಅವರ ಸೇವೆಗೆ ಸಂದ ಗೌರವ.

ಇನ್ನೆರಡು ಸ್ಥಾನಕ್ಕೆ ಅವಿರೋಧ: ಅಧ್ಯಕ್ಷ, ಉಪಾಧ್ಯಕ್ಷ, ಕಾರ್ಯದರ್ಶಿ, ಖಜಾಂಚಿ ಸೇರಿದಂತೆ ಒಟ್ಟು ಒಂಬತ್ತು ಸ್ಥಾನಗಳಲ್ಲಿ ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ಜಿ.ಸಿ.ಲೋಕೇಶ್ ಮತ್ತು ಖಜಾಂಚಿ ಸ್ಥಾನಕ್ಕೆ ವಾಸುದೇವ ಹೊಳ್ಳ ಅವರುಗಳು ಅವಿರೋಧವಾಗಿ ಆಯ್ಕೆಯಾಗಿದ್ದು, ಈ ಬಗ್ಗೆ ಅಧಿಕೃತ ಘೋಣೆಯಷ್ಟೇ ಬಾಕಿ ಇದೆ.

## ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರದ ಸಭೆ

# 34 ಕೋಟಿ ರೂ ಕ್ರಿಯಾ ಯೋಜನೆಗೆ ಮಂಜೂರು

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆದ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರದ 13ನೇ ಸಭೆಯಲ್ಲಿ ಒಟ್ಟು 34 ಕೋಟಿ ಮೊತ್ತದ ಕ್ರಿಯಾ ಯೋಜನೆಗೆ ಮಂಜೂರಾತಿ ನೀಡಲಾಯಿತು.




ಪ್ರತಿ ವರ್ಷ ಕನಕ ಉತ್ಸವ ಕಾಗಿನೆಲೆಯಲ್ಲಿ ಪ್ರತಿ ವರ್ಷ ಕನಕ ಉತ್ಸವವನ್ನು ಆಚರಿಸಲು ಕ್ರಮ ಕೈಗೊಳ್ಳಲಾಗುವುದು. ಉತ್ಸವ ಸಂದರ್ಭದಲ್ಲಿ ಜಿಲ್ಲೆಯ ದಾರ್ಶನಿಕರ ಜೀವನಾದರ್ಶಗಳನ್ನು ಪ್ರತಿಬಿಂಬಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಹಾಗೂ ಕನಕ ಅಧ್ಯಯನ ಪೀಠ ಸಮನ್ವಯದಿಂದ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಬೇಕು ಎಂದು ಸಭೆಯಲ್ಲಿ ಸೂಚಿಸಲಾಯಿತು. ಪ್ರಾಧಿಕಾರದಲ್ಲಿ ಸಂಚಿತ ನಿಧಿಯನ್ನು ಸ್ಥಾಪಿಸಿ ಕಾರ್ಯಕ್ರಮಗಳನ್ನು ನಿರಂತರವಾಗಿ ಕೈಗೊಳ್ಳಲು ಕ್ರಮ ಕೈಗೊಳ್ಳಬೇಕು. ಪ್ರಾಧಿಕಾರದ ಆದಾಯ ಹೆಚ್ಚಳಕ್ಕೆ ಯೋಜನೆಗಳನ್ನು ರೂಪಿಸಬೇಕು. ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲೂಕಿನ ಕನಕದಾಸರ ಕರ್ಮಭೂಮಿ ಕಾಗಿನೆಲೆ ಮತ್ತು ಜನ್ಮಭೂಮಿ ಸ್ಥಳವಾದ ಬಾಡ ಗ್ರಾಮ ಹಾಗೂ ಸುತ್ತಮುತ್ತಲಿನ ಪರಂಪರೆಯ ತಾಣಗಳನ್ನು ಪ್ರವಾಸಿ ಕೇಂದ್ರವಾಗಿ ಅಭಿವೃದ್ಧಿಗೊಳಿಸುವ ಬಗ್ಗೆ ವಿವಿಧ ಯೋಜನೆಗಳ ಕ್ರಿಯಾ ಯೋಜನೆ ಅನುಮೋದನೆಗೆ ಸಲ್ಲಿಸಲಾಯಿತು.

ಪ್ರಾಧಿಕಾರದ ವ್ಯಾಪ್ತಿಯಲ್ಲಿ ಕಲಾಭವನ ನಿರ್ಮಾಣ, ಕನಕ ವಸ್ತು ಸಂಗ್ರಹಾಲಯದಲ್ಲಿ ಒಳವಸ್ತು ಶಿಲ್ಪ ಸಂಗ್ರಹಾಲಯ ನಿರ್ಮಾಣ, ಚೆನ್ನಕೇಶವ ದೇವಾಲಯ, ಮೆಟ್ಟಿಲು, ಗೋಪುರ, ಕಮಾನುಗಳ ನಿರ್ಮಾಣ, ಕದರಮಂಡಲಗಿ ವೆಂಕಟೇಶ್ವರ ದೇವಸ್ಥಾನ, ಸಮುದಾಯ ಭವನ ನಿರ್ಮಾಣ ಮಾಡಲು ತೀರ್ಮಾನಿಸಲಾಯಿತು.

ಪ್ರಾಧಿಕಾರದ ವ್ಯಾಪ್ತಿಯ ಉದ್ಯಾನಗಳ ವಾರ್ಷಿಕ ನಿರ್ವಹಣೆ ಗುತ್ತಿಗೆ ನೀಡುವ ಕುರಿತು ಹಾಗೂ ಕನಕ ಪರಿಸರ ಉದ್ಯಾನದಲ್ಲಿ ಖಾಲಿ ಇರುವ ಜಾಗದಲ್ಲಿ ಬಟಾನಿಕಲ್ ಗಾರ್ಡನ್ ನಿರ್ಮಿಸಲು

ನಿರ್ಧರಿಸಲಾಯಿತು. ಕಾಗಿನೆಲೆ ಗ್ರಾಮದ ವ್ಯಾಪ್ತಿಯಲ್ಲಿ ಇತರ ಅಭಿವೃದ್ಧಿ ಕಾಮಗಾರಿಗಳನ್ನು ಶೀಘ್ರ ಕೈಗೊಳ್ಳಲು ಚರ್ಚಿಸಲಾಯಿತು.

ವಿಧಾನ ಪರಿಷತ್ ಸದಸ್ಯರಾದ

ಸಲೀಂ ಅಹ್ಮದ್, ಸಚಿವರಾದ ಶಿವಾನಂದ ಪಾಟೀಲ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಎಚ್ ಎಂ ರೇವಣ್ಣ, ಪ್ರಾಧಿಕಾರದ ಅಧಿಕಾರಿಗಳು ಉಪಸ್ಥಿತರಿದ್ದರು.

# ಪಿಡಿಒ ಕಿರುಕುಳ ಆರೋಪ, ಲೈಬ್ರರಿಯನ್ ಆತ್ಮಹತ್ಯೆ

**ನೆಲಮಂಗಲ :** ತಾಲ್ಲೂಕಿನ ಕಳಲುಘಟ್ಟ ಗ್ರಾಮ ಪಂಚಾಯಿತಿ ಪಿಡಿಒ ಮಾನಸಿಕವಾಗಿ ಕಿರುಕುಳ ನೀಡುತ್ತಿದ್ದಾರೆಂದು ಆರೋಪಿಸಿ ಗೋವೇನಹಳ್ಳಿ ಗ್ರಾಮದ ಗ್ರಂಥಾಲಯದ ಅರೆಕಾಲಿಕ ನೌಕರ ವಿಷ ಸೇವಿಸಿ ಆತಹತ್ಯೆ ಮಾಡಿಕೊಂಡಿದ್ದಾರೆ.

ತಾಲ್ಲೂಕಿನ ಗೋವೇನಹಳ್ಳಿಯ ಗ್ರಂಥಾಲಯದ ಅರೆಕಾಲಿಕ ನೌಕರರಾಗಿ ಕಾರ್ಯನಿರ್ವಹಿಸುತ್ತಿದ್ದ ರಾಮಚಂದ್ರಯ್ಯ ಆತಹತ್ಯೆಗೆ ಶರಣಾದ ವ್ಯಕ್ತಿ. ಕಳೆದ 25 ವರ್ಷಗಳಿಂದ ಅರೆಕಾಲಿಕ ಗ್ರಂಥಾಲಯ ನೌಕರರಾಗಿ ಕಾರ್ಯ ನಿರ್ವಹಿಸುತ್ತಿದ್ದರು. ಇವರಿಗೆ ಕಳಲುಘಟ್ಟ ಪಿಡಿಒ ವಿನಾಕಾರಣ ಕಿರುಕುಳ ನೀಡುತ್ತಿದ್ದರು ಎಂಬ ಆರೋಪ ಕೇಳಿಬಂದಿದೆ.

ಕಳೆದ ಮೂರು ತಿಂಗಳಿನಿಂದ ಸಂಬಳ ಕೂಡ ನೀಡದೆ ಬಯೋಮೆಟ್ರಿಕ್ ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಿಸಿಕೊಳ್ಳದೆ ಇಲ್ಲಸಲ್ಲದ ಕಾರಣ ಹೇಳಿ ತೊಂದರೆ ನೀಡುತ್ತಿದ್ದರು ಎಂಬ ದೂರುಗಳು ಕೇಳಿಬಂದಿದ್ದವು.

ಇದರಿಂದ ಖಿನ್ನತೆಗೆ ಒಳಗಾಗಿದ್ದ ಗ್ರಂಥಾಲಯ ನೌಕರ ಗ್ರಾಮದ ರಾಮಚಂದ್ರಯ್ಯ ಎರಡು ದಿನಗಳ ಹಿಂದೆ ವಿಷ ಸೇವಿಸಿದ್ದರು. ದಾರಿಹೋಕರು ಗಮನಿಸಿ ಸ್ಥಳೀಯ ಆಸ್ಪತ್ರೆಗೆ ಸೇರಿಸಿದ್ದರು.

# ದಾವಣಗೆರೆ ಕನಿಪ ಜಿಲ್ಲಾ ಘಟಕ ಚುನಾವಣೆಗೆ ಸಲ್ಲಿಸಿದ 67 ನಾಮಪತ್ರ ಸ್ವೀಕೃತ

**ದಾವಣಗೆರೆ:** ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ ದಾವಣಗೆರೆ ಜಿಲ್ಲಾ ಘಟಕದ ಚುನಾವಣೆಗೆ ಸಲ್ಲಿಕೆಯಾಗಿದ್ದ ಎಲ್ಲ 67 ನಾಮಪತ್ರಗಳು ಸ್ವೀಕೃತವಾಗಿವೆ ಎಂದು ಜಿಲ್ಲಾ ಚುನಾವಣೆ ಅಧಿಕಾರಿ ಮಲ್ಲಿಕಾರ್ಜುನ ಕಬ್ಬೂರು ತಿಳಿಸಿದ್ದಾರೆ.

ನವೆಂಬರ್ 9, 2025 ರಂದು ಚುನಾವಣೆ ನಡಯಲಿದ್ದು, ಮಂಗಳವಾರ ನಾಮ ಪತ್ರ ಪರಿಶೀಲನೆ ಅಭ್ಯರ್ಥಿಗಳ ಸಮ್ಮುಖದಲ್ಲಿ ನಡೆಯಿತು.

ಅಧ್ಯಕ್ಷ –4, ಉಪಾಧ್ಯಕ್ಷ–10

ಪ್ರಧಾನ ಕಾರ್ಯದರ್ಶಿ– 3, ಕಾರ್ಯದರ್ಶಿ –7, ಖಜಾಂಚಿ –2, ರಾಜ್ಯ ಕಾರ್ಯಕಾರಿ ಸಮಿತಿ–4, ಜಿಲ್ಲಾ ಸಮಿತಿ ಸದಸ್ಯ –37 ಸೇರಿ ಒಟ್ಟು–67 ನಾಮ ಪತ್ರ ಸಲ್ಲಿಕೆಯಾಗಿದ್ದವು ಎಂದು ತಿಳಿಸಿದ್ದಾರೆ.

ಅಕ್ಟೋಬರ್ 30 ಮಧ್ಯಾಹ್ನ 3 ಗಂಟೆಯೊಳಗೆ ನಾಮಪತ್ರ ಹಿಂಪಡೆಯಲು ಕೊನೆ ದಿನವಾಗಿದೆ ಎಂದು ಮಾಹಿತಿ ನೀಡಿದ್ದಾರೆ.

# ಎಸ್.ಎಸ್.ಮಲ್ಲಿಕಾರ್ಜುನ್‌ಗೆ ಉಪಮುಖ್ಯಮಂತ್ರಿ ಸ್ಥಾನ ನೀಡಿ: ಅಭಿಮಾನಿ ಬಳಗದ ಒತ್ತಾಯ

**ದಾವಣಗೆರೆ,ಅ.29:** ಪ್ರಸ್ತುತ ರಾಜಕೀಯ ವಿದ್ಯಾಮಾನಗಳ ಪ್ರಕಾರ ಸಚಿವ ಸಂಪುಟ ಪುನರ್ ರಚನೆಯಾಗುವ ಲಕ್ಷಣಗಳು ತೋರುತ್ತಿದ್ದು, ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಒಪ್ಪಿಗೆ ದೊರೆತರೆ, ರಾಜ್ಯದ ಸಚಿವ ಸಂಪುಟ ಪುನರ್ ರಚನೆಯಾದರೆ ಮಧ್ಯೆ ಕರ್ನಾಟಕದ ಅತ್ಯಂತ ಜನಪ್ರಿಯ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್‌ರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಎಸ್.ಎಸ್.ಮಲ್ಲಿಕಾರ್ಜುನ್ ಅಭಿಮಾನಿಗಳ ಬಳಗ ಒತ್ತಾಯಿಸಿದೆ.

ಸುದ್ದಿಗೋಷ್ಠಿಯಲ್ಲಿ ಬಳಗದ ಮುಖಂಡ ನಾಗೇಂದ್ರ ಬಂಡಿಕಾರ್ ಮಾತನಾಡಿ, ದಾವಣಗೆರೆ ವಿಧಾನಸಭಾ ಕ್ಷೇತ್ರದಿಂದ ನಾಲ್ಕು ಬಾರಿ ಜನಮತ ಪಡೆದು ಶಾಸಕರಾಗಿ ಆಯ್ಕೆಯಾದ ಎಸ್.ಎಸ್. ಮಲ್ಲಿಕಾರ್ಜುನ್‌ರವರು, ಪ್ರಪ್ರಥಮವಾಗಿ ಯುವಜನ ಸೇವೆ ಹಾಗೂ ಕ್ರೀಡಾ ಸಚಿವರಾಗಿದ್ದ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾಗಿಯೂ ಕಾರ್ಯನಿರ್ವಹಿಸುವ ಮೂಲಕ ದಾವಣಗೆರೆಯನ್ನು ಮಾದರಿ ನಗರವನ್ನಾಗಿಸುವಲ್ಲಿ ಅತ್ಯಂತ ಪರಿಶ್ರಮ ವಹಿಸಿದ್ದಾರೆ. ಸೂರಿಲ್ಲದ ಜನರಿಗೆ ಸೂರು ಒದಗಿಸುವ ಮೂಲಕ ಜನಮನ್ನಣೆ ಪಡೆದವರಾಗಿದ್ದು, 1998ರ ಉಪಚುನಾವಣೆ ಹಾಗೂ 1999ರ ಸಾರ್ವತ್ರಿಕ ಚುನಾವಣೆಯಲ್ಲಿ ಏಷ್ಯಾದಲ್ಲಿಯೇ ಅತ್ಯಂತ ಸುಂದರವಾದ, ಆಕರ್ಷಕವಾದ ಗಾಜಿನ ಮನೆಯನ್ನು ನಿರ್ಮಾಣ ಮಾಡುವ ಮೂಲಕ ಪ್ರವಾಸಿ ತಾಣವನ್ನಾಗಿಸಿದ್ದಾರೆ ಎಂದು ಹೇಳಿದರು.

ದಾವಣಗೆರೆಯ ಎಲ್ಲಾ ರಸ್ತೆಗಳ ಸಿಮೆಂಟ್ ರಸ್ತೆಗಳನ್ನಾಗಿಸಿ ನಗರ ಸೌಂದರ್ಯೀಕರಣಕ್ಕೆ ಹೆಚ್ಚಿನ ಮಾನ್ಯತೆ ನೀಡಿ ತಮ್ಮ ಕ್ರಿಯಾಶೀಲ ನಡೆಯಿಂದ ದಾವಣಗೆರೆಯನ್ನು ಸುಂದರ ನಗರವನ್ನಾಗಿಸಿದ್ದಾರೆ. ಕುಂದುವಾಡ ಕೆರೆ ನಿರ್ಮಿಸಿ ಕುಡಿಯುವ ನೀರಿನ ಬವಣೆಯನ್ನು ನೀಗಿಸಿದ್ದಾರೆ. ಅತ್ಯಧಿಕ ಬಹುಮತಗಳಿಂದ ಜಯಗಳಿಸಿದ ಇವರನ್ನು 2013ರ ಮತ್ತು 2023ರ ಚುನಾವಣೆಯಲ್ಲಿ ಜನರು ಪ್ರೀತಿಯಿಂದ ಗೆಲ್ಲಿಸಿದ್ದು, ಎಸ್.ಎಸ್. ಮಲ್ಲಿಕಾರ್ಜುನ್‌ರವರಿಗೆ ಸರ್ವ ಧರ್ಮೀಯರು, ಎಲ್ಲಾ ಸಮುದಾಯಗಳ ನೇರ ಸಂಪರ್ಕ ಹಾಗೂ ಆತ್ಮೀಯತೆ ಇದ್ದು, ಇವರಿಗೆ ಅಭಿವೃದ್ಧಿಯ ಬಗ್ಗೆ ಚಿಂತನಾಶೀಲ ವ್ಯಕ್ತಿತ್ವ ಇದೆ ಎಂಬುದಕ್ಕೆ ಸಾಕ್ಷಿಯಾಗಿದೆ ಎಂದರು.

# ಸಮಾಜಕ್ಕೆ ಶಂಕರ ಭಗವತ್ಪಾದರ ಕೊಡುಗೆ ಮಹತ್ತರ

## ಎಡತೊರೆ ಶ್ರೀ ಯೋಗಾನಂದೇಶ್ವರ ಮಠದ ಶ್ರೀ ಶಂಕರ ಭಾರತಿ ಸ್ವಾಮೀಜಿ ಶ್ಲಾಘನೆ

**ದಾವಣಗೆರೆ:** ಸನಾತನ ಹಿಂದೂ ಧರ್ಮ ಪುನರುಜ್ಜೀವನಗೊಳಿಸುವುದು. ಅದ್ವೈತ ವೇದಾಂತ ತತ್ವಗಳನ್ನು ಬೋಧಿಸುವುದು. ದೇಶದ ಉದ್ದಗಲಕ್ಕೂ ಸಂಚರಿಸಿ, ಗೊಂದಲಗಳನ್ನು ನಿವಾರಿಸಿ ಹಿಂದೂ ಧರ್ಮದ ಏಕತೆಯನ್ನು ಬಲಪಡಿಸುವ ಜೊತೆಗೆ ಸಮಾಜಕ್ಕೆ ಮಹತ್ತರ ಕೊಡುಗೆ ನೀಡಿದವರು ಶಂಕರ ಭಗವತ್ಪಾದರು ಎಂದು ಯಡತೊರೆ ಶ್ರೀ ಯೋಗಾನಂದೀಶ್ವರ ಮಠದ ಶ್ರೀ ಶಂಕರ ಭಾರತಿ ಸ್ವಾಮೀಜಿ ಹೇಳಿದರು.



ನಗರದ ವರ್ತುಲ ರಸ್ತೆಯಲ್ಲಿರುವ ಶ್ರೀ ಶಾರದಾ ದೇವಸ್ಥಾನಕ್ಕೆ ಸೋಮವಾರ ಸಂಜೆ ಭೇಟಿ ನೀಡಿ, ಆಶೀರ್ವಚನ ನೀಡಿದ ಅವರು, ಶಂಕರ ಭಗವತ್ಪಾದರ ಅಧ್ಯಯನ ಅವಶ್ಯವಿದ್ದು, ಭಕ್ತರಿಗೆ ಶಂಕರಾಚಾರ್ಯರ ತತ್ವಗಳು, ಕೊಡುಗೆ ಬಗ್ಗೆ ತಿಳಿಸಿಕೊಡುವ ಕೆಲಸವನ್ನು ಎಲ್ಲರೂ ಮಾಡಬೇಕಾಗಿದೆ ಎಂದರು.

ಶಂಕರಾಚಾರ್ಯರ ಜೀವನ ಸಾಧನೆ, ಕೊಡುಗೆಗಳ ಬಗ್ಗೆ ದಾಖಲಿಸುವ ಕಾರ್ಯವನ್ನು ಮಾಡಲಾಗುತ್ತಿದ್ದು, ಶಂಕರ ಭಗವತ್ಪಾದರ ಅಧ್ಯಯನವು ಹಿಂದೂ ಧರ್ಮವನ್ನು ಆಳವಾಗಿ ಅರ್ಥ ಮಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಭಾರತೀಯ ಧರ್ಮ ಪ್ರಸಾರಕ್ಕಾಗಿ ದೇಶದ ನಾಲ್ಕು ದಿಕ್ಕುಗಳಲ್ಲಿ ಶಕ್ತಿ ಪೀಠಗಳನ್ನು (ಶೃಂಗೇರಿ, ಗೋವರ್ಧನ್, ಪುರಿ, ದ್ವಾರಕಾ) ಸ್ಥಾಪಿಸಿ, ಶಿಷ್ಯ ಪರಂಪರೆಯನ್ನು ಅನುಷ್ಠಾನಕ್ಕೆ ತಂದರು ಎಂದರು.

ವಿವಿಧ ಸಂಪ್ರದಾಯಗಳ ನಡುವಿನ ಸಂಘರ್ಷ ನಿವಾರಣೆಗೆ ಶಂಕರಾಚಾರ್ಯರು ಶಿವ, ವಿಷ್ಣು, ಶಕ್ತಿ, ಗಣಪತಿ, ಸೂರ್ಯ ಒಟ್ಟಾಗಿ ಆರಾಧಿಸುವ ಪಂಚಾಯತನ ಪೂಜಾ ವ್ಯವಸ್ಥೆಯನ್ನು ರೂಪಿಸಿದರು. ಶಂಕರ ಭಗವತ್ಪಾದರು ದೇಶಾದ್ಯಂತ ಸಂಚರಿಸಿ, ಜ್ಞಾನ ಮಾರ್ಗದ ಮೂಲಕ ಮೋಕ್ಷವನ್ನು ಪ್ರಪಂಚಕ್ಕೆ ಸಾರಿದರು ಎಂದು ಶಂಕರಚಾರ್ಯರ ಧಾರ್ಮಿಕ ಕಾರ್ಯಗಳನ್ನು ಸ್ಮರಿಸಿದರು.

ಶಂಕರಾಚಾರ್ಯರ ವಿಚಾರಗಳನ್ನು ನಿಖರವಾಗಿ ಅಧ್ಯಯನ ಮಾಡುವುದು ಅತ್ಯಂತ ಒಳಿತಾಗುತ್ತದೆ. ಸಮಾಜ ಗಣನೆಗೆ ಹೇಗೆ ಪ್ರಭಾವ ಬೀರಿದ್ದಾರೆ

## ರ್ಧ ಬರ್ಧ ರಸ್ತೆ ನಿರ್ಮಾಣ ಮಾಡಿದ ಪಾಲಿಕೆ: ಪ್ರಯಾಣಿಕರ ಪರದಾಟ

# ರಸ್ತೆ ಪೂರ್ಣಗೊಳಿಸದಿದ್ದರೆ ಕುಂದುವಾಡ ಕೆರೆ ನೀರು ಸರಬರಾಜು ಕೇಂದ್ರ ಬಂದ್ ಮಾಡಿ ಹೋರಾಟದ ಎಚ್ಚರಿಕೆ

**ದಾವಣಗೆರೆ:** ನಗರದ ಹಳೇ ಕುಂದುವಾಡ ಮುಖ್ಯ ರಸ್ತೆಯನ್ನ ಅರ್ಧ ಬರ್ಧ ನಿರ್ಮಿಸಿ ಬಿಟ್ಟಿದ್ದು, ರಸ್ತೆ ಪೂರ್ಣಗೊಳಿಸಿ ಸಂಚಾರಕ್ಕೆ ಅನುವು ಮಾಡಿಕೊಡದಿದ್ದರೆ ಕುಂದುವಾಡ ಕೆರೆ ನೀರು ಸರಬರಾಜು ಕೇಂದ್ರವನ್ನ ಬಂದ್ ಮಾಡಿ ಹೋರಾಟ ಮಾಡಲಾಗುವುದು ಎಂದು ಕುಂದುವಾಡ ಗ್ರಾಮಸ್ಥರು ಎಚ್ಚರಿಕೆ ನೀಡಿದರು..

ನಗರದ ಮಹಾನಗರ ಪಾಲಿಕೆ ಕಚೇರಿಯಲ್ಲಿ ಆಯುಕ್ತರಾದ ರೇಣುಕಾ ಅವರಿಗೆ ಮನವಿ ಸಲ್ಲಿಸಿದ ಗ್ರಾಮಸ್ಥರು, ಸಮೀಪದ ಕುಂದುವಾಡ ರಸ್ತೆ ನಿರ್ಮಾಣ ವಿಚಾರ ಮೂರಾಬಟ್ಟೆಯಾಗಿ ಹೋಗಿದೆ, ಈ ಮಾತು ಹೇಳಲು ವಾರ್ಡ್ ಸಾರ್ವಜನಿಕರಿಗೆ ನೋವ್ವಾಗುತ್ತಿದೆ, ಯಾಕೆಂದರೆ ವಿನೋಬನಗರದಿಂದ ಕುಂದುವಾಡಕ್ಕೆ ತಲುಪುವ ಏಕೈಕ ಮುಖ್ಯ ರಸ್ತೆಯನ್ನ ಐದಾರು ಭಾಗಗಳಾಗಿ ವಿಂಗಡಿಸಿ ಎಲ್ಲಾ ಕಾಮಗಾರಿಗಳನ್ನ ಅರ್ಧ ಬರ್ಧ ಮಾಡಿ ಬಿಡಲಾಗಿದೆ, ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದ–ರೆ ಆಗಿದೆ. ಕುಂದುವಾಡ ಗ್ರಾಮವನ್ನ ಯಾಕಾದರು ಮಹಾನಗರ ಪಾಲಿಕೆಗೆ ಸೇರ್ಪಡೆ ಮಾಡಿದ್ದಾರೆ ಎಂದು ಗ್ರಾಮಸ್ಥರು ಮರುಗುವ ಸ್ಥಿತಿ ನಿರ್ಮಾಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಯುವಕರು, ಗ್ರಾಮಸ್ಥರೆಲ್ಲರ ನಿರಂತರ ಹೋರಾಟದ ಮೇರೆಗೆ ನಿಂತೂ ಹೋಗಿದ್ದ ಬಿಂದಾಸ್ ಬಾರ್ ಮುಂಭಾಗದ ರಸ್ತೆ ನಿರ್ಮಾಣ ಮಾಡಲಾಯಿತು, ಆದರೆ ಅಲ್ಲಿಯೂ ಸಹ ರಸ್ತೆ ಮಧ್ಯೆ ಭಾಗ 40 ರಿಂದ 50 ಅಡಿಯಷ್ಟು ರಸ್ತೆ ನಿರ್ಮಾಣ ಮಾಡದೇ ಗುಂಡಿ ಅಗೆದು ಆಗೇ ಬಿಡಲಾಗಿದೆ, ಇನ್ನೊಂದು ಭಾಗ ಹಳೇ ಕುಂದುವಾಡ ಕೆರೆ ರಸ್ತೆ ಗುಂಡಿ ಮುಚ್ಚುತ್ತೇವೆ ಎಂದು ಹೇಳಿ ಕೆಲ ಗುಂಡಿಗಳನ್ನ ಮುಚ್ಚಿ ಉಳಿದ ಬಹುತೇಕ ಗುಂಡಿಗಳನ್ನ ಮುಚ್ಚದೇ ಎರಡೂ ಕಾಮಗಾರಿಯನ್ನ ಅಪೂರ್ಣ ಮಾಡಲಾಗಿದೆ, ಈಗಾಗಲೇ ಐದಾರು ಭಾರೀ ಮನವಿ ಮಾಡಿದ್ದರು, ಪೂರ್ಣಗೊಳಿಸುತ್ತೇವೆ, ಮಾಡುತ್ತೇವೆ, ನೋಡುತ್ತೇವೆ ಎಂದು ಹಾರಿಕೆ ಉತ್ತರವನ್ನ ಪಾಲಿಕೆ ನೀಡುತ್ತಲೇ ಬಂದಿದೆ, ಅವ್ಯವಸ್ಥೆಯಿಂದ ಕೂಡಿದ ರಸ್ತೆಯಿಂದ ತುಂಬಾ ತೊಂದರೆ ಆಗುತ್ತಿದ್ದು, ಪ್ರಯಾಣಿಕರು ಬಿದ್ದು ಗಾಯಗೊಂಡಿದ್ದಾರೆ. ಈ ಹಿನ್ನಲೆ ಮುಂದಿನ ದಿನಗಳಲ್ಲಿ ಅಪೂರ್ಣವಾಗಿರುವ ರಸ್ತೆಯನ್ನ ಗ್ರಾಮಸ್ಥರೇ ನಿರ್ಮಾಣ ಮಾಡಿ ಪಾಲಿಕೆಗೆ ತಕ್ಕ ಉತ್ತರ ನೀಡುತ್ತೇವೆ ಎಂದು ಈ ಮೂಲಕ ಎಚ್ಚರಿಕೆ ನೀಡಿದರು.. ಪ್ರಮುಖವಾಗಿ ಬಿಂದಾಸ್ ಬಾರ್ ಮುಂಭಾಗದ ರಸ್ತೆ ಪೂರ್ಣಗೊಳಿಸಬೇಕು, ಕೆರೆ ರಸ್ತೆ ಗುಂಡಿಗಳನ್ನ ತಾತ್ಕಾಲಿಕವಾಗಿ ಮುಚ್ಚಬೇಕು ಮತ್ತು ಟೆಂಡರ್ ಹಂತದಲ್ಲಿರುವ ಕೆರೆ ರಸ್ತೆಯನ್ನ ವ್ಯವಸ್ಥಿತವಾಗಿ ನಿರ್ಮಾಣ ಮಾಡಲು ಮುಂದಾಗಬೇಕು, ಕುಂದುವಾಡ ಕತ್ತಲೆಯಲ್ಲಿದ್ದು, ಬೀದಿ ದೀಪಗಳನ್ನ ಸರಿಪಡಿಸಬೇಕು ಇಲ್ಲದಿದ್ದಲ್ಲಿ ಕುಂದುವಾಡ ಕೆರೆ ನೀರು ಸರಬರಾಜು ಕೇಂದ್ರ ಬಂದ್ ಮಾಡಿ ಉಗ್ರ ಹೋರಾಟ ಮಾಡಲಾಗುವುದು ಎಂದು ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಮಾಜಿ ಮೇಯರ್ ಹೆಚ್ ಎನ್ ಗುರುನಾಥ್, ನವೀನ್, ಮಾರುತೇಶ್, ಹೊಸ ಕುಂದುವಾಡ ಅಣ್ಣಪ್ಪ, ಮಧುನಾಗರಾಜ್, ನಬಿ, ಮಂಜಪ್ಪ, ಗುಡ್ಡಪ್ಪ ಸೇರಿದಂತೆ ಮತ್ತಿತರರಿದ್ದರು

## ರಾಶಿ ಭವಿಷ್ಯ

### ಮೇಷ ರಾಶಿ

ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಸಹೋದರ-ಸಹೋದರಿಯರ ಸಹಾಯದಿಂದ ಇಂದು ನೀವು ಆರ್ಥಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ನಿಮಗೆ ಆಶ್ಚರ್ಯವಾಗುವ ಹಾಗೆ ನಿಮ್ಮ ಸಹೋದರ ನಿಮ್ಮನ್ನು ಪಾರು ಮಾಡುತ್ತಾರೆ. ನೀವು ಒಬ್ಬರೊಬ್ಬರನ್ನು ಸಂತೋಷವಾಗಿಡಲು ಒಟ್ಟೊಟ್ಟಿಗೆ ಕೆಲಸ ಮಾಡಬೇಕು.

### ವೃಷಭ ರಾಶಿ

ಇತ್ತೀಚಿಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ ಇಂದು ಸರಿಯಾದ ಆಲೋಚನೆಗಳು ಹಾಗೂ ಕಾರ್ಯಗಳು ನಿಮಗೆ ಅಗತ್ಯವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ಸಂಜೆ ಸಾಮಾಜಿಕ ಚಟುವಟಿಕೆ ನೀವು ನಿರೀಕ್ಷಿಸಿದ್ದಕ್ಕಿಂತ ಉತ್ತಮವಾಗಿರುತ್ತದೆ. ಮನ್ಮಥನು ನಿಮ್ಮ ಜೀವನದಲ್ಲಿ ಪ್ರೀತಿಯ ಮಳೆ ಸುರಿಸುತ್ತ ನಿಮ್ಮೆಡೆಗೆ ನುಗ್ಗುತ್ತಿದ್ದಾನೆ.

### ಮಿಥುನ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ನೀವು ಯಾರನ್ನಾದರೂ ಮರಳಿ ಎರವಲು ಕೇಳುತ್ತಿದ್ದರೆ ಮತ್ತು ಇಲ್ಲಿಯವರೆಗೆ ಅವರು ನಿಮ್ಮ ಮಾತನ್ನು ತಪ್ಪಿಸುತ್ತಿದ್ದರೆ, ಇಂದು ಅವರು ಮಾತನಾಡದೆ ಹಣವನ್ನು ನಿಮಗೆ ಹಿಂದಿರುಗಿಸಬಹುದು. ಮಕ್ಕಳು ಕ್ರೀಡೆ ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಹೆಚ್ಚು ಸಮಯ ಕಳೆಯುತ್ತಾರೆ.ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ. ಕೇವಲ ಈ ಆನಂದವನ್ನು ಆಸ್ವಾದಿಸಿ.

### ಕರ್ಕ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ. ಅನಿರೀಕ್ಷಿತ ಜವಾಬ್ದಾರಿಗಳು ನಿಮ್ಮ ದಿನದ ಯೋಜನೆಗಳಿಗೆ ಅಡ್ಡಿಪಡಿಸುತ್ತವೆ ನೀವು ಇತರರಿಗೆ ಹೆಚ್ಚು ಮತ್ತು ನಿಮಗಾಗಿ ಕಡಿಮೆ ಮಾಡಿಕೊಳ್ಳುತ್ತೀರಿ.

### ಸಿಂಹ ರಾಶಿ

ಸಾಧ್ಯವಾದರೆ ದೀರ್ಘ ಪ್ರಯಾಣವನ್ನು ತಪ್ಪಿಸಿ. ಏಕೆಂದರೆ ನೀವು ಪ್ರಯಾಣಿಸು ತುಂಬಾ ದುರ್ಬಲರಾಗಿದ್ದೀರಿ ಹಾಗೂ ಇದು ಮತ್ತಷ್ಟು ನಿಮ್ಮನ್ನು ದುರ್ಬಲಗೊಳಿಸುತ್ತದೆ. ನೀವು ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಇಂದು ಆರ್ಥಿಕ ನಷ್ಟದ ಸಾಧ್ಯತೆಯಿದೆ. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ.

### ಕನ್ಯಾ ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಇಂದು ಹಾಜರಾಗುವ ಸಮಾರಂಭದಲ್ಲಿ ಹೊಸ ಸ್ನೇಹ ಅಭಿವೃದ್ಧಿಯಾಗುತ್ತದೆ. ನಿಮ್ಮ ಪ್ರೀತಿ ಸಂಗಾತಿಯ ಒಂದು ಹೊಸ ಅದ್ಭುತ ಭಾಗವನ್ನು ನೀವಿಂದು ನೋಡಬಹುದು.

### ತುಲಾ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇ ಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ.

### ವೃಶ್ಚಿಕ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು- ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ಸಣ್ಣ ಮಕ್ಕಳು ನಿಮ್ಮನ್ನು ವ್ಯಸ್ತವಾಗಿರಿಸುತ್ತಾರೆ ಮತ್ತು ನಿಮಗೆ ಸಂತೋಷ ತರುತ್ತಾರೆ. ನಿಮ್ಮ ಪ್ರೀತಿ ಒಂದು ಹೊಸ ಎತ್ತರವನ್ನು ತಲುಪುತ್ತದೆ. ಈ ದಿನವು ನಿಮ್ಮ ಪ್ರೀತಿಪಾತ್ರರ ನಗುವಿನಿಂದ ಪ್ರಾರಂಭವಾಗುತ್ತದೆ, ಮತ್ತು ಪರಸ್ಪರರ ಕನಸಿನಲ್ಲಿ ಕೊನೆಗೊಳ್ಳುತ್ತಾದೆ.

### ಧನು ರಾಶಿ

ನೀವು ಇಂದು ಮಾಡುವ ಕೆಲವು ದೈಹಿಕ ಬದಲಾವಣೆಗಳು ಖಂಡಿತವಾಗಿಯೂ ನಿಮ್ಮ ನೋಟವನ್ನು ವರ್ಧಿಸುತ್ತವೆ. ಇಂದು ನಿಮ್ಮ ಯಾವುದೇ ಚಲಿಸಬಲ್ಲ ಆಸ್ತಿಯನ್ನು ಕದಿಯಬಹುದು ಆದ್ದರಿಂದ ಸಾಧ್ಯವಾದಷ್ಟು ಅದರ ಬಗ್ಗೆ ಗಮನ ಹರಿಸಿ. ನಿಮ್ಮ ಸಾಮಾಜಿಕ ಜೀವನವನ್ನು ನಿರ್ಲಕ್ಷಿಸಬೇಡಿ. ನಿಮ್ಮ ಬಿಡುವಿರದ ಕೆಲಸದಿಂದ ಸ್ವಲ್ಪ ಸಮಯ ತೆಗೆದುಕೊಳ್ಳಿ ಹಾಗೂ ನಿಮ್ಮ ಕುಟುಂಬದೊಂದಿಗೆ ಯಾವುದಾದರೂ ಪಾರ್ಟಿಗೆ ಹೋಗಿ.

### ಮಕರ ರಾಶಿ

ಒತ್ತಡ ತೊಡೆದುಹಾಕಲು ನಿಮ್ಮ ಮಕ್ಕಳ ಜೊತೆ ನಿಮ್ಮ ಅಮೂಲ್ಯ ಸಮಯ ಕಳೆಯಿರಿ ನೀವು ಮಗುವಿನ ಗುಣಪಡಿಸುವ ಶಕ್ತಿಯನ್ನು ಅನುಭವಿಸುತ್ತೀರಿ. ಅವರು ಭೂಮಿಯ ಮೇಲೆ ಅತ್ಯಂತ ಶಕ್ತಿಯುತ ಆಧ್ಯಾತ್ಮಿಕ ಮತ್ತು ಭಾವನಾತ್ಮಕ ವ್ಯಕ್ತಿತ್ವವಾಗಿರುತ್ತಾರೆ. ನೀವೇ ಮರುಚೈತನ್ಯ ಹೊಂದುತ್ತೀರಿ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು.

### ಕುಂಭ ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ-ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ.

### ಮೀನ ರಾಶಿ

ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ಮನೆಯಲ್ಲಿ ಸಮಸ್ಯೆಗಳು ಉದ್ಭವವಾಗುವಂತೆ ತೋರುತ್ತಿರುವುದರಿಂದ ನಿಮ್ಮ ಮಾತುಗಳ ಬಗ್ಗೆ ಎಚ್ಚರ ವಹಿಸಿ. ನಿಮ್ಮ ಕರೆಯನ್ನು ಮುಂದುವರಿಸುವ ಮೂಲಕ ನಿಮ್ಮ ಪ್ರಣಯದ ಸಂಗಾತಿಯನ್ನು ಚುಡಾಯಿಸುತ್ತೀರಿ.

# ಸರ್ಕಾರಿ ನೌಕರಿ ಅಧಿಕಾರ ಸಾಧಿಸುವ ವೇದಿಕೆ ಅಲ್ಲ



**ಶಿವಮೊಗ್ಗ:** ಸರ್ಕಾರಿ ನೌಕರಿ ಎಂದರೆ ಜನಸೇವೆ ಮಾಡಲು ಸಿಕ್ಕ ಅವಕಾಶವೇ ಹೊರತು ಅಧಿಕಾರ ಸಾಧಿಸುವ ವೇದಿಕೆ ಅಲ್ಲ. ಈ ನಿಟ್ಟಿನಲ್ಲಿ ಸರ್ಕಾರಿ ನೌಕರರ ಮನೋಭಾವ ಬದಲಾಗಬೇಕು. ಆಗ ಮಾತ್ರ ಸರ್ಕಾರಿ ಇಲಾಖೆಗಳಲ್ಲಿ ಶೇ.50 ರಷ್ಟಾದರು ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಲು ಸಾಧ್ಯವಾಗುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಮಂಜುನಾಥ ನಾಯಕ್ ರವರು ಹೇಳಿದರು.

ಅವರು ಇಂದು ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ಲೋಕಾಯುಕ್ತ ಇವರ ಸಂಯುಕ್ತಾಶ್ರಯದಲ್ಲಿ ಜಿ.ಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಿದ್ದ "ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ-2025" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬಡತನ, ನಿರುದ್ಯೋಗ ಹಾಗೂ ಭ್ರಷ್ಟಾಚಾರದ ಅಂಶಗಳು ನಮ್ಮ ದೇಶದ ಅಭಿವೃದ್ದಿಗೆ ಕಂಟಕವಾಗಿದೆ. ದೇಶದಲ್ಲಿ ಜನಸಂಖ್ಯೆ ಹೆಚ್ಚಾದಂತೆ ಅದರ ಅನುಗುಣವಾಗಿ ಉದ್ಯೋಗದ ಅವಕಾಶ ಹಾಗೂ ಅದಕ್ಕೆ ಬೇಕಾದ ಸಂಪನ್ಮೂಲಗಳ ಕೊರತೆಯು ಉಂಟಾಗುತ್ತಿದ್ದು, ಅದಕ್ಕಾಗಿ ಪೈಪೋಟಿ ನಡೆಯುತ್ತಿದೆ. ಈ ಕಾರಣದಿಂದಲೇ ಅಧಿಕಾರಿಗಳಲ್ಲಿ ಭ್ರಷ್ಟಾಚಾರದಲ್ಲಿ ತೊಡಗುತ್ತಾರೆ ಎಂದರು.

ಭ್ರಷ್ಟಾಚಾರ ನಿಗ್ರಹ ಕಾನೂನುಗಳಲ್ಲೆ ಬಹಳಷ್ಟು ಲೋಪಗಳಿದ್ದು, ಕಾನೂನು ಮೂಲಕ ಭ್ರಷ್ಟಾಚಾರವನ್ನು ತಡೆಯಲು ಸಾಧ್ಯವಾಗುತ್ತಿಲ್ಲ. ಇದರ ಉಪಯೋಗವನ್ನು ಭ್ರಷ್ಟಾಚಾರದಲ್ಲಿ ತೊಡಗಿರುವವರೇ ಹೆಚ್ಚಾಗಿ ಪಡೆಯುತ್ತಿದ್ದಾರೆ. ನಮ್ಮ ದೇಶದಲ್ಲಿ ಶೇ.90 ರಷ್ಟು ಸರ್ಕಾರ ಮತ್ತು ಸರ್ಕಾರಿ ಅಧಿಕಾರಿಗಳು ಪಕ್ಷಗಾರರಾಗಿದ್ದು, ಭ್ರಷ್ಟಾಚಾರಕ್ಕೆ ಇದು ಕೂಡ ಕಾರಣವಾಗಿದೆ. ಹಾಗಾಗಿ ಇದರ ಸಂಪೂರ್ಣ ನಿರ್ಮೂಲನೆ ಅಸಾಧ್ಯವಾಗಿದೆ. ಆದರಿಂದ ಸರ್ಕಾರಿ ನೌಕರರಿಗೆ ಭ್ರಷ್ಟಾಚಾರ ಕುರಿತು ಜಾಗೃತಿ ಮೂಡಿಸುವುದು ಮುಖ್ಯವಾಗಿದೆ ಎಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ್.ಎಂ.ಎಸ್ ಮಾತನಾಡಿ, ಸರ್ಕಾರಿ ನೌಕರರ ನಗದು ವ್ಯವಹಾರ ಪ್ರಶ್ನಾರ್ಥವಾಗಿದೆ. ಹಾಗಾಗಿ ಸರ್ಕಾರಿ ನೌಕರರು 20 ಸಾವಿರಕ್ಕಿಂತ ಅಧಿಕವಾಗಿ ಖರ್ಚು ಮಾಡುವುದಾದರೆ ಅದನ್ನು ಬ್ಯಾಂಕ್ ಮೂಲಕ ಮಾಡಬೇಕು. ಇತ್ತೀಚೆಗೆ ಸರ್ವೋಚ್ಚ ನ್ಯಾಯಾಲಯವು ಕೂಡ ಸರ್ಕಾರಿ ನೌಕರರು 20 ಸಾವಿರಕ್ಕಿಂತ ಅಧಿಕ ನಗದು ವ್ಯವಹಾರ ಮಾಡಿದರೆ ಅದನ್ನು ಆದಾಯ ತೆರಿಗೆ ಇಲಾಖೆಯ ತನಿಖೆ ಒಳಪಡಿಸಬೇಕೆಂದು ತಿಳಿಸಿದೆ ಎಂದರು.

ಸರ್ಕಾರಿ ನೌಕರರು ತಮ್ಮ ಹೆಂಡತಿ, ಮಕ್ಕಳ ಆದಾಯ ಇದ್ದರೆ ಅದನ್ನು ವರದಿ ಮಾಡಿ. ಹೊಸದಾಗಿ ಅಧಿಕಾರ ವಹಿಸಿಕೊಳ್ಳುವ ಇಲಾಖೆಯಲ್ಲಿ ಹಿಂದಿನ ಅಧಿಕಾರದ ಅವಧಿಯಲ್ಲಿ ಮಾಡಿದ ಲೋಪದ ಬಗ್ಗೆ ಲೋಕಾಯುಕ್ತರು ನಿಮ್ಮನ್ನು ಪ್ರಶ್ನಿಸಿದರೆ ಅದಕ್ಕೆ ಹಾರಿಕೆ ಉತ್ತರ ನೀಡದೆ ಹಿಂದಿನ ಅಧಿಕಾರದಲ್ಲಿದ್ದ ಅಧಿಕಾರಿಯ ಸಂಕ್ಷಿಪ್ತ ಮಾಹಿತಿಯನ್ನು ಲೋಕಾಯುಕ್ತರಿಗೆ ಒದಗಿಸಿ ಹಾಗೂ ನೀವು ಯಾವಾಗ ಅಧಿಕಾರ ವಹಿಸಿಕೊಂಡಿದ್ದಿರಾ ಎಂಬ ಮಾಹಿತಿಯನ್ನು ಕೂಡ ನೀಡಿ ಎಂದು ಹೇಳಿದರು.

ಅಧಿಕಾರಿಗಳು ತಮ್ಮ ಖಾಸಗಿ ಜೀವನದಲ್ಲಿ ಬೇರೆ ಇಲಾಖೆಯ ಬಗ್ಗೆ ನಕರಾತ್ಮಕವಾಗಿ ಮಾತನಾಡಬಾರದು. ಇದರಿಂದ ಸರ್ಕಾರಿ ಅಧಿಕಾರಿಗಳ ಬಗ್ಗೆ ಕೆಟ್ಟ ಅಭಿಪ್ರಾಯ ಮೂಡುತ್ತದೆ. ಅಧಿಕಾರಿಗಳು ತಮ್ಮ ಖಾಸಗಿ ಜೀವನದಲ್ಲಿ ಹಾಗೂ ಸಾರ್ವಜನಿಕ ಕ್ಷೇತ್ರದಲ್ಲಿ ಪಾರದರ್ಶಕವಾಗಿ ಸೇವೆ ಸಲ್ಲಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಗುರುದತ್ತ ಹೆಗಡೆರವರ ಅಧ್ಯಕ್ಷ ಭಾಷಣದಲ್ಲಿ ಭ್ರಷ್ಟಾಚಾರದ ನಿರ್ಮೂಲನೆ ಆರಂಭವಾಗಬೇಕಿರುವುದು ಉನ್ನತ ಅಧಿಕಾರಿಗಳ ಖರ್ಚಿಯಿಂದ. ಸರ್ಕಾರಿ ವ್ಯವಸ್ಥೆ ಹಾಗೂ ಸರ್ಕಾರಿ ನೌಕರರ ತಮ್ಮ ಖರ್ಚಿಯನ್ನು ಶುದ್ಧವಾಗಿಕೊಟ್ಟುಕೊಳ್ಳಬೇಕು. ಆಗ ಮಾತ್ರ ಭ್ರಷ್ಟಾಚಾರ ನಿರ್ಮೂಲನೆ ಮಾಡಲು ಸಾಧ್ಯವಾಗುತ್ತದೆ. ಅಧಿಕಾರಿಗಳು ಶುದ್ದವಾಗಿದ್ದರೆ ವ್ಯವಸ್ಥೆಯು ಶುದ್ದವಾಗಿರುತ್ತದೆ ಎಂದು ಸಲಹೆ ನೀಡಿದರು.

ಹಣ ಹಾಗೂ ಅಧಿಕಾರದ ಪ್ರಭಾವದಿಂದ ಭ್ರಷ್ಟಾಚಾರ ಆರಂಭವಾಗುತ್ತದೆ. ಇದರಿಂದ ಬಡವರಿಗೆ ಹಾಗೂ ದುರ್ಬಲರಿಗೆ ಅನ್ಯಾಯವಾಗುತ್ತದೆ. ಹಾಗಾಗಿ ಅಧಿಕಾರಿಗಳು ಯಾರ ಪ್ರಭಾವಕ್ಕೆ ಒಳಗಾಗದೆ ಕಾನೂನು ಹಾಗೂ ಕಾಯ್ದೆಯ ಅಡಿಯಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದು ಸೂಚಿಸಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಸಿಇಓ ಹೇಮಂತ್.ಎನ್. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಾ.ಹನುಮಂತಪ್ಪ ಕೆ.ಟಿ, ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಮಂಜುನಾಥ ಚೌದರಿ ಎಂ.ಹೆಚ್, ಹಾಗೂ ಉಪಾಧೀಕ್ಷರಾದ ಬಿ.ಪಿ.ಚಂದ್ರಶೇಖರ್, ಪೊಲೀಸ್ ಅಧೀಕ್ಷಕ ಜಿ.ಕೆ.ಮಿಥುನ್ ಕುಮಾರ್, ಲೋಕಾಯುಕ್ತ ಪೊಲೀಸ್ ನಿರೀಕ್ಷಕ ರುದ್ರೇಶ್.ಕೆ.ಪಿ. ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಮಾಧ್ಯಮ ಅಕಾಡೆಮಿಯಲ್ಲಿ ಟಿಜೆಎಸ್ ಜಾರ್ಜ್ ದತ್ತಿ ರಾಷ್ಟ್ರೀಯ ಪ್ರಶಸ್ತಿ ಸ್ಥಾಪನೆ: ಶಿವಕುಮಾರ್ ಘೋಷಣೆ



**ಬೆಂಗಳೂರು:** ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ಹಿರಿಯ ಪತ್ರಕರ್ತ ಟಿ.ಜೆ. ಎಸ್. ಜಾರ್ಜ್ ಅವರ ಹೆಸರಿನಲ್ಲಿ ರಾಷ್ಟ್ರೀಯ ಮಟ್ಟದಲ್ಲಿ ಮಾಧ್ಯಮ ಸಂಸ್ಥೆಗಳ ಸಂಪಾದಕರಿಗೆ ದತ್ತಿ ಪ್ರಶಸ್ತಿ ಸ್ಥಾಪಿಸಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಕೆ.ಶಿವಕುಮಾರ್ ಅವರು ಘೋಷಿಸಿದರು.

ಅವರು ಇಂದು ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ತಾವು ಈಗಾಗಲೇ ಸಾಮಾಜಿಕ ನ್ಯಾಯದ ಕುರಿತು ಬರೆಯುವ ಅಂಕಣಕಾರರಿಗೆ "ಮೂಕನಾಯಕ ಡಾ. ಬಿ.ಆರ್. ಅಂಬೇಡ್ಕರ್ ದತ್ತಿ ಪ್ರಶಸ್ತಿಯನ್ನು ಸ್ಥಾಪಿಸಿದ್ದು, ಇತ್ತೀಚೆಗೆ ನಿಧನರಾದ ಹಿರಿಯ ಪತ್ರಕರ್ತ ಟಿ.ಜೆ.ಎಸ್. ಜಾರ್ಜ್ ಅವರು ನಿಷ್ಪಕ್ಷಪಾತಿ ಪತ್ರಕರ್ತರಾಗಿದ್ದರು. ಅವರು ಸ್ವತಃ ಪತ್ರಕರ್ತರ ವರದಿಗಳನ್ನು ತಿದ್ದಿ , ಮಾರ್ಗದರ್ಶನ ನೀಡುತ್ತಿದ್ದರು ಎಂದು ಸ್ಮರಿಸಿದರು. ಅವರ ಹೆಸರಿನಲ್ಲಿ ರಾಷ್ಟ್ರಮಟ್ಟದಲ್ಲಿ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸುವ ಪತ್ರಕರ್ತರನ್ನು ಗುರುತಿಸುವ ಸಲುವಾಗಿ 1.5 ಲಕ್ಷ ರೂ.ಗಳ ದತ್ತಿನಿಧಿ ಸ್ಥಾಪಿಸುವುದಾಗಿ ತಿಳಿಸಿದರು.ತಾವು ಇನ್ನೂ ಪತ್ರಿಕೋದ್ಯಮದಿಂದ ಹೊರ ಬಂದಿಲ್ಲ.

ಸದನದಲ್ಲಿಯೂ ಪತ್ರಕರ್ತರು ಹಾಗೂ ಪತ್ರಿಕೋದ್ಯಮ ಕ್ಷೇತ್ರದ ಕುರಿತು ದನಿ ಎತ್ತುವುದಾಗಿ

ಅವರು ತಿಳಿಸಿದರು. ತಮ್ಮ ಪತ್ರಕರ್ತ ವೃತ್ತಿ ಜೀವನ ಹಾಗೂ ಅಕಾಡೆಮಿಯ ಸದಸ್ಯರಾಗಿ ಕಾರ್ಯನಿರ್ವಹಣೆಯ ಸಂದರ್ಭಗಳನ್ನು ಮೆಲುಕು ಹಾಕಿದ ಶಿವಕುಮಾರ್ ಅವರು ಅಕಾಡೆಮಿಯ ಚಟುವಟಿಕೆಗಳಿಗೆ ಸದಾ ಬೆಂಬಲ ನೀಡುವುದಾಗಿ ತಿಳಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಆಯೇಶಾ ಖಾನಂ ಅವರು, ಶಿವಕುಮಾರ್ ಅವರು ಮೂರು ದಶಕಗಳಿಂದ ಪತ್ರಕರ್ತರಾಗಿ ಕಾರ್ಯನಿರ್ವಹಿಸಿದ್ದು, ತಮ್ಮ ನಿಷ್ಠುರ ವರದಿಗಳಿಗಾಗಿ ಹೆಸರುವಾಸಿಯಾಗಿದ್ದಾರೆ. ಅವರು

ಇಂದು ವಿಧಾನ ಪರಿಷತ್ತಿನ ಸದಸ್ಯರಾಗಿ ಆಯ್ಕೆಯಾಗಿರುವುದು ಪತ್ರಕರ್ತರಿಗೆಲ್ಲ ಹೆಮ್ಮೆಯ ವಿಷಯ. ಅವರು ಅಕಾಡೆಮಿಯೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದು, ಅವರ ಬೆಂಬಲ ಪತ್ರಕರ್ತರಿಗೆ ಸದಾ ಇರುವುದೆಂಬ ವಿಶ್ವಾಸ ವ್ಯಕ್ತಪಡಿಸಿದರು.

ಸದಸ್ಯರಾದ ಕೆ. ನಿಂಗಜ್ಜ, ಕೆ.ವೆಂಕಟೇಶ್, ಶಿವಾನಂದ ತಗಡೂರು, ಅಬ್ಬಾಸ್ ಮುಲ್ಲಾ ಮೊದಲಾದವರು ಶಿವಕುಮಾರ್ ಅವರ ಕುರಿತು ಮಾತನಾಡಿದರು.

# ನಗರದಲ್ಲಿ ಪರವಾನಗಿ ಪಡೆಯದೆ ಅನಧಿಕೃತವಾಗಿ ನಡೆಸುತ್ತಿದ್ದ ಅಂಗಡಿಗಳ ಬಂದ್ ಮಾಡಿಸಿದ ನಗರಸಭೆ



ಚಿಕ್ಕಮಗಳೂರು: ನಗರಸಭೆಯಿಂದ ನಗರದಲ್ಲಿ ಉದ್ದಿಮೆ ಪರವಾನಗಿ ಪಡೆಯದೆ ಅನಧಿಕೃತವಾಗಿ ನಡೆಸುತ್ತಿದ್ದ ಅಂಗಡಿಗಳನ್ನು ಇಂದು ಭೇಟಿನೀಡಿ ಪರಿಶೀಲಿಸಿದ ಪೌರಾಯುಕ್ತರು ಹಾಗೂ ಸಿಬ್ಬಂದಿ ಬಂದ್ ಮಾಡಿಸಿ ಬೀಗ ಹಾಕಿದ ಘಟನೆ ನಡೆಯಿತು.

ನಂತರ ಮಾತನಾಡಿದ ಪೌರಾಯುಕ್ತ ಬಿ.ಸಿ ಬಸವರಾಜು, ನಗರಸಭೆಯಲ್ಲಿ ಉದ್ದಿಮೆ ಪರವಾನಗಿ ಪಡೆಯದೆ ಇರುವ ಬಗ್ಗೆ ಅನೇಕ ಬಾರಿ ಅಂಗಡಿ ಮಾಲಿಕರಿಗೆ ಸೂಚನೆ ನೀಡಿದ್ದರು ಮತ್ತು ಮೌಖಿಕವಾಗಿ ಹೇಳುವ ಮೂಲಕ ಎಚ್ಚರಿಕೆ ನೀಡಿದ್ದರೂ ಅಕ್ರಮವಾಗಿ ಉದ್ದಿಮೆ ನಡೆಸುತ್ತಿದ್ದರು ಎಂದು ತಿಳಿಸಿದರು.

ನಗರಸಭೆಯಿಂದ ಅಧಿಕೃತ ಉದ್ದಿಮೆ ಪರವಾನಗಿಯನ್ನು ಕಳೆದ ನಾಲ್ಕೈದು ವರ್ಷಗಳಿಂದ ಪಡೆಯದೆ ಮತ್ತು ನಗರಸಭೆ ಸೂಚನೆಗಳನ್ನು ಪಾಲಿಸದೇ ಇರುವ ಹಿನ್ನೆಲೆಯಲ್ಲಿ ಸಿಬ್ಬಂದಿ ಎಚ್ಚರಿಕೆ ನೀಡಿದರೂ ಸ್ಪಂದಿಸದೇ ಇರುವ ಕಾರಣ ಇಂದು ಅಂಗಡಿ ಬಂದ್ ಮಾಡಿಸಲಾಗಿದೆ ಎಂದರು.

ಅನಧಿಕೃತವಾಗಿ ನಡೆಸುತ್ತಿದ್ದ ನಗರದ ಅಂಬೇಡ್ಕರ್ ರಸ್ತೆಯಲ್ಲಿ 2 ಹಾಗೂ ಎಂಜಿ ರಸ್ತೆಯಲ್ಲಿರುವ ಮಹಾವೀರ್ ಫ್ಯಾನ್ಸಿಸ್ಟೋರ್, ಮಾತೇಶ್ವರಿ ಟೆಕ್ಸ್‌ಟೈಲ್, ವಿನಾಯಕ ಬ್ಯಾಗ್ ಪ್ಯಾಲೇಸ್ ಈ ಅಂಗಡಿಗಳನ್ನು ಬಂದ್ ಮಾಡಿಸಿ ಬೀಗ ಹಾಕಿದ್ದೇವೆ ಎಂದು ಹೇಳಿದರು.

ಉದ್ದಿಮೆದಾರರು ನಗರಸಭೆಯಿಂದ ಅಧಿಕೃತ ಉದ್ದಿಮೆ ಪರವಾನಗಿ ಪಡೆದುಕೊಳ್ಳಬೇಕು, ಇಲ್ಲದಿದ್ದಲ್ಲಿ ನಗರಸಭೆಯಿಂದ ಅಧಿಕಾರಿಗಳನ್ನೊಳಗೊಂಡ ಐದು ತಂಡಗಳನ್ನು ರಚಿಸಿದ್ದು, ಪ್ರತಿದಿನ ಅಂಗಡಿಗಳಿಗೆ ಭೇಟಿನೀಡಿ ಪರಿಶೀಲಿಸಿ ಶಿಸ್ತುಕ್ರಮ ಕೈಗೊಳ್ಳಲಿದ್ದಾರೆಂದು ಎಚ್ಚರಿಸಿದರು.

ನಗರದಲ್ಲಿ 8 ಸಾವಿರ ವಿವಿಧ ರೀತಿಯ ಅಂಗಡಿಗಳಿದ್ದು, ವಾರ್ಷಿಕ 1.50 ಕೋಟಿ ರೂ ಉದ್ದಿಮೆ ಪರವಾನಗಿ ಶುಲ್ಕ ನಗರಸಭೆಗೆ ಪಾವತಿಯಾಗಬೇಕು. ಕಳೆದ ನಾಲ್ಕೈದು ವರ್ಷಗಳಿಂದ ಉದ್ದಿಮೆ ಪರವಾನಗಿ ಪಡೆದುಕೊಂಡಿಲ್ಲದ ಕಾರಣದಿಂದ 3.50 ಕೋಟಿ ರೂ ಬಾಕಿ ಇದೆ ಎಂದು ಅಂದಾಜಿಸಲಾಗಿದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಕಂದಾಯ ಅಧಿಕಾರಿ ದೀಪಕ್, ಸಹಾಯಕ ಕಾರ್ಯ ಪಾಲಕ ಅಭಿಯಂತರರಾದ ಲೋಕೇಶ್, ಆರೋಗ್ಯ ನಿರೀಕ್ಷಕರಾದ ರಂಗಪ್ಪ, ನಾಗಪ್ಪ, ಪರಿಸರ ಅಭಿಯಂತರರಾದ ವೆಂಕಟೇಶ್ ಉಪಸ್ಥಿತರಿದ್ದರು.

# ರಾಜ್ಯ ಮಟ್ಟದ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿ

**ರಾಮನಗರ:** ಬೆಂಗಳೂರಿನ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಬೆಂಗಳೂರು ದಕ್ಷಿಣ ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ದಿ ರೂರಲ್ ಎಜುಕೇಷನ್ ಸೊಸೈಟಿ (ರಿ), ಕನಕಪುರದ ರೂರಲ್ ಪದವಿ ಪೂರ್ವ ಕಾಲೇಜು ಹಾಗೂ ಸಾತನೂರಿನ ಗ್ರಾಮಾಂತರ ಪದವಿ ಪೂರ್ವ ಕಾಲೇಜಿನ ಸಹಯೋಗದೊಂದಿಗೆ 2025-26ನೇ ಶೈಕ್ಷಣಿಕ ಸಾಲಿನ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ರಾಜ್ಯಮಟ್ಟದ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯನ್ನು ಅ.31ರ ಶುಕ್ರವಾರ ಮತ್ತು ನವೆಂಬರ್ 1ರ ಶನಿವಾರ ಬೆಳಿಗ್ಗೆ 10.30ಕ್ಕೆ ಕನಕಪುರ ತಾಲ್ಲೂಕಿನ ರೂರಲ್ ಪದವಿ ಪೂರ್ವ ಕಾಲೇಜು ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. ರಾಜ್ಯದ ಉಪಮುಖ್ಯಮಂತ್ರಿಗಳು, ಜಲಸಂಪನ್ಮೂಲ, ಬೆಂಗಳೂರು ನಗರಾಭಿವೃದ್ಧಿ ಸಚಿವರು ಮತ್ತು ಬೆಂಗಳೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ್ ಅವರು ಧ್ವಜಾರೋಹಣ ನೆರವೇರಿಸುವರು. ಬೆಂಗಳೂರು ಹಾಲು ಒಕ್ಕೂಟ (ಬಮೂಲ್)ದ ಅಧ್ಯಕ್ಷರು ಹಾಗೂ ಕನಕಪುರ ತಾಲ್ಲೂಕು ಶಿಕ್ಷಣ ಸುಧಾರಣಾ ಸಮಿತಿ ಅಧ್ಯಕ್ಷರಾದ ಡಿ.ಕೆ. ಸುರೇಶ್ ಅವರು ಕ್ರೀಡಾ ತಂಡಗಳ ಪರಿಚಯ, ಕನಕಪುರ ದಿ ರೂರಲ್ ಎಜುಕೇಶನ್ ಸೊಸೈಟಿಯ ಕಾರ್ಯದರ್ಶಿಗಳಾದ ಪುಟ್ಟಸ್ವಾಮಿ ಅವರು ಕ್ರೀಡಾ ಜ್ಯೋತಿ ಸ್ವೀಕರಿಸುವರು.ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್, ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ್, ವಿಧಾನ ಪರಿಷತ್ ಸದಸ್ಯರಾದ ಎಸ್. ರವಿ, ಪುಟ್ಟಣ್ಣ, ಎಚ್.ಪಿ. ಸುಧಾಮ್ ದಾಸ್ ಹಾಗೂ ರಾಮೋಜಿ ಗೌಡ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸವರು.

# ಎಲ್ಲಾ ಚಿತ್ರಮಂದಿರಗಳಲ್ಲಿ ಒಂದು ವಾರಗಳ ಕಾಲ ಕನ್ನಡ ಚಿತ್ರಗಳ ಪ್ರದರ್ಶನ

**ಬಳ್ಳಾರಿ:** ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲೆಯ ಎಲ್ಲಾ ಖಾಯಂ, ಅರೆ ಖಾಯಂ, ತಾತ್ಕಾಲಿಕ ಚಿತ್ರಮಂದಿರಗಳಲ್ಲಿ ಮತ್ತು ವಿಡೀಯೋ ಚಿತ್ರಮಂದಿರಗಳಲ್ಲಿ ಕಡ್ಡಾಯವಾಗಿ ನ.01 ರಿಂದ 07 ರ ವರೆಗೆ ಒಂದು ವಾರಗಳ ಕಾಲ ಕನ್ನಡ ಚಲನಚಿತ್ರಗಳನ್ನು ಜಿಲ್ಲೆಯ ಎಲ್ಲಾ ಚಲನಚಿತ್ರ ಮಂದಿರಗಳ ಮಾಲೀಕರು ಪ್ರದರ್ಶಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ತಿಳಿಸಿದ್ದಾರೆ.

ಒಂದು ವೇಳೆ ಕನ್ನಡ ಚಲನಚಿತ್ರಗಳನ್ನು ಪ್ರದರ್ಶಿಸದೇ ಇದ್ದಲ್ಲಿ ಚಲನಚಿತ್ರ ಮಂದಿರಗಳ ಪರವಾನಿಗೆಯನ್ನು ನವೀಕರಿಸುವುದಿಲ್ಲ. ಅ.31 ಮತ್ತು ನ.01 ರಂದು ಚಿತ್ರಮಂದಿರಗಳ ಮೇಲೆ ಕಡ್ಡಾಯವಾಗಿ ದೀಪಾಂಲಕಾರ ಮಾಡಬೇಕು ಎಂದು ಅವರು ತಿಳಿಸಿದ್ದಾರೆ.

# ಸಿರುಗುಪ್ಪ: ಅ.30 ರಂದು ಸಾಮಾನ್ಯ ಸಭೆ

**ಬಳ್ಳಾರಿ:** ಸಿರುಗುಪ್ಪ ನಗರಸಭೆಯ ಸಾಮಾನ್ಯ ಸಭೆಯನ್ನು ಅ.30 ರಂದು ಬೆಳಿಗ್ಗೆ 11 ಗಂಟೆಗೆ ಸಿರುಗುಪ್ಪ ನಗರಸಭೆ ಅಧ್ಯಕ್ಷರಾದ ಬಿ.ರೇಣುಕಮ್ಮ ಅವರ ಅಧ್ಯಕ್ಷತೆಯಲ್ಲಿ ನಗರಸಭೆಯ ಸಭಾಭವನದಲ್ಲಿ ಆಯೋಜಿಸಲಾಗಿದೆ ಎಂದು ಸಿರುಗುಪ್ಪ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

# ಸಂಪರ್ಕ ಸಭೆ

**ಶಿವಮೊಗ್ಗ:** ಭದ್ರಾವತಿ ಮೆಸ್ಕಾಂ ನಗರ ಉಪವಿಭಾಗ ಕಛೇರಿಯಲ್ಲಿ ಅ. 30 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನ ಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.
ಸಂಪರ್ಕಿಸಬಹುದಾದ ದೂ.ಸಂ.; 9448289454.

## ಮಾನ್ಯ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಹಾಗೂ ಎಂ.ಎ.ಸಿ.ಟಿ., ದಾವಣಗೆರೆ

**ಎಂ.ಎ.ಸಿ.ನಂ : 171/2023**

**ಅರ್ಜಿದಾರರು** : ಭರತೇಶ್

**ವಿರುದ್ಧ**

**ಎದುರುದಾರ:** ವೀರಸ್ವಾಮಿ ಮತ್ತು ಇನ್ನೊಬ್ಬರು
**ಎದುರುದಾರ ನಂ.1/** ನೋಟೀಸ್‌ದಾರರು: ಕೆ.ವೀರಸ್ವಾಮಿ ಬಿನ್ ಕರುಪ್ಪಸ್ವಾಮಿ ವಯಸ್ಕರು, ವಾಸ # ನಂ.6368, ರಶ್ಮಿ ನಿಲಯ, ಗೋವಿಂದಪ್ಪ ಲೇ ಔಟ್, ಸುಭಾಷ್ ನಗರ, ನೆಲಮಂಗಲ, ಬೆಂಗಳೂರು ಗ್ರಾಮಾಂತರ, (ಕೆಎ-52/4620 ನೇ ವಾಹನದ ಮಾಲೀಕರು)

### ಸಿ.ಪಿ.ಸಿ ಆದೇಶ 5 ನಿಯಮ 20 ರ ಅಡಿಯಲ್ಲಿ 1ನೇ ಎದುರುದಾರರ ವಿರುದ್ಧ ನೀಡಲಾದ ಪ್ರಕಟಣಾ ನೋಟೀಸು

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರು ಎದುರುದಾರರ ವಿರುದ್ಧ ವಾಹನ ಅಪಘಾತದಲ್ಲಿ ಗಾಯಗೊಂಡಿದ್ದಕ್ಕಾಗಿ ಪರಿಹಾರ ಕೋರಿ ಮಾನ್ಯ ಘನ ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಸದರಿ ಪ್ರಕರಣದಲ್ಲಿ ನೀವು 1ನೇ ಎದುರುದಾರರಾಗಿದ್ದು, ನ್ಯಾಯಾಲಯವು ನಿಮ್ಮ ವಿರುದ್ಧ ನ್ಯಾಯಾಲಯದಿಂದ ಸಮನ್ಸ್ ಅನ್ನು ನೋಂದಾಯಿತ ಅಂಚೆಯ ಮೂಲಕ 'ಕಳಿಸಿದ್ದರೂ ಸಹಾ ಅವು ನಿಮಗೆ ಜಾರಿಯಾಗಿರುವುದಿಲ್ಲ. ಕಾರಣ ನಿಮ್ಮ ಹಾಜರಾತಿಗಾಗಿ ದಿನಾಂಕ: 12.11 2025 ರಂದು ಬೆಳಗ್ಗೆ 11-00 ಗಂಟೆಗೆ ಮುದ್ದತ್ತು ನಿಗಧಿಯಾಗಿದ್ದು, ಆ ದಿನ ನೀವು ಖುದ್ದಾಗಿಯಾಗಲೀ ಅಥವಾ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು, ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ನಿಮ್ಮ ವಿರುದ್ಧ ಏಕಪಕ್ಷಿಯ ತೀರ್ಮಾನ ತೆಗೆದುಕೊಳ್ಳಲಾಗುವುದು ತಿಳಿಯಿರಿ.

ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ, ದಿನಾಂಕ : 27/10/25 ರಂದು ಕೊಡಲ್ಪಟ್ಟಿದೆ.

ನ್ಯಾಯಾಲಯದ ಆದೇಶದ ಮೇರೆಗೆ,

ಸಹಿ/-
ಅರ್ಜಿದಾರರ ಪರ ವಕೀಲರು
(ದಿನೇಶ್ ಹೆಚ್.ಪಾಟೇಲ್)
ದಾವಣಗೆರೆ

ಸಹಿ/-
ಶಿರಸ್ತೇದಾರರು
ಮಾನ್ಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಹಾಗೂ ಎಂ.ಎ.ಟಿ.ಸಿ
ನ್ಯಾಯಾಲಯ,ದಾವಣಗೆರೆ.

ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮ

# ಭ್ರಷ್ಟಾಚಾರ ಪ್ರಜಾಪ್ರಭುತ್ವದ ಶತ್ರು ಜಿಲ್ಲಾ ನ್ಯಾಯಾಧೀಶೆ ಡಿ.ಕೆ.ವೇಲಾ

**ದಾವಣಗೆರೆ :** ಭ್ರಷ್ಟಾಚಾರ ಪ್ರಜಾಪ್ರಭುತ್ವದ ಶತ್ರು, ಇದು ಸಂಸ್ಥೆಗಳ ಶಕ್ತಿಯನ್ನು ಕುಗ್ಗಿಸುವ ಜೊತೆಗೆ ಜನರ ವಿಶ್ವಾಸವನ್ನು ಹಾಳುಮಾಡುವುದು ಮತ್ತು ನ್ಯಾಯದ ತತ್ವವನ್ನ ದುರ್ಬಲಗೊಳಿಸುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ವೇಲಾ ಡಿ.ಕೆ ಹೇಳಿದರು.

ಜಿಲ್ಲಾಡಳಿತ, ಕಾನೂನು ಸೇವಾ ಪ್ರಾಧಿಕಾರ ಮತ್ತು ಲೋಕಯುಕ್ತಾ ಘಟಕ ದಾವಣಗೆರೆ ಇವರ ಸಹಯೋಗದಲ್ಲಿ ಮಂಗಳವಾರ ಜಿಲ್ಲಾಡಳಿತ ಕಚೇರಿಯ ತುಂಗಭದ್ರ ಸಭಾಂಗಣಲ್ಲಿ ಏರ್ಪಡಿಸಲಾದ ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮ ಕೇವಲ ಭ್ರಷ್ಟಾಚಾರ ವಿರೋಧ ಕ್ರಮಗಳ ವಿಷಯವಲ್ಲ, ಅದು ಪ್ರತಿಯೊಬ್ಬ ಅಧಿಕಾರಿಯ ನೈತಿಕ ಬದ್ಧತೆಯ ವಿಷಯವಾಗಿದೆ. ಗ್ರಾಮ ಪಂಚಾಯತಿ ಮಟ್ಟದಿಂದ ಆರಂಭವಾದ ಭ್ರಷ್ಟಾಚಾರ ತಹಶೀಲ್ದಾರ್ ಕಚೇರಿ, ಪೊಲೀಸ್ ಇಲಾಖೆ ಹೀಗೆ ವಿವಿಧ ಇಲಾಖೆಗಳ ಕಚೇರಿಗಳಿಂದ

ಹಿಡಿದು ಉಪ ಆಯುಕ್ತರ ಕಚೇರಿವರೆಗೂ ತಲುಪಬಹುದು. ಯಾವುದೇ ಒಬ್ಬ ಅಧಿಕಾರಿ ಒಂದು ಸಣ್ಣ ಪ್ರಮಾಣದ ಕರ್ತವ್ಯವನ್ನು ಸರಿಯಾದ ರೀತಿಯಲ್ಲಿ ಮಾಡದಿದ್ದಲ್ಲಿ, ಅಂತಹ ಕೃತ್ಯವು ಜನರ ಮನಸಲ್ಲಿ ಬಹುದೊಡ್ಡ ಪರಿಣಾಮ ಉಂಟು ಮಾಡುವ ಸಾಧ್ಯತೆ ಹೆಚ್ಚಾಗಿರುತ್ತದೆ. ಪ್ರತಿ ನಾಗರಿಕನಿಗೂ ಸತ್ಯ, ನಿಷ್ಠೆ, ಪ್ರಾಮಾಣಿಕತೆಯಿಂದ ವಿಳಂಬ ಮಾಡದೇ, ಅಕ್ರಮವಾದ ಬೇಡಿಕೆಗಳಿಲ್ಲದೇ ಸೇವೆ ಪಡೆಯುವ ಹಕ್ಕಿದೆ. ಆದ್ದರಿಂದ ಅಧಿಕಾರಿಗಳು ತಮ್ಮ ಹಕ್ಕುಗಳನ್ನು ಮಾರಿಕೊಂಡು ಅವರಿಗೆ ತೊಂದರೆಯಾಗದ ರೀತಿಯಲ್ಲಿ ಪ್ರಾಮಾಣಿಕತೆಯಿಂದ ಕೆಲಸ ಮಾಡಬೇಕು ಎಂದರು.

ಸರ್ಕಾರಿ ಕಚೇರಿಗಳಲ್ಲಿ ವಿವಿಧ ಕಾರಣಗಳಿಂದ ಸಾರ್ವಜನಿಕರಿಗೆ ಸಿಗಬೇಕಾದ ಸೌಲಭ್ಯ, ಕೆಲಸಗಳು ಸಕಾಲದಲ್ಲಿ ದೊರೆಯದೇ ವಿಳಂಬವಾಗುತ್ತಿವೆ. ಅಧಿಕಾರಿಗಳು ಜನರ ವಿಶ್ವಾಸ, ಜನರನ್ನು ರಕ್ಷಿಸುವ ಕಾರ್ಯ ಮಾಡಬೇಕು. ಸಾರ್ವಜನಿಕರು ಕಚೇರಿಗಳಿಗೆ ಕಡತ, ದಾಖಲೆಗಳು ಇನ್ನಿತರೆ ಸೇವೆಗಾಗಿ ಅರಸಿ ಬಂದಾಗ ವಿಳಂಬ ಮಾಡದೇ ಜವಾಬ್ದಾರಿಯುತ ವ್ಯಕ್ತಿಗಳಾಗಿ ಸೇವೆ ನೀಡಬೇಕು. ಆಗ ಮಾತ್ರ ಸಮ ಸಮಾಜ ನಿರ್ಮಾಣ ಸಾಧ್ಯ. ಈ ನಿಟ್ಟಿನಲ್ಲಿ ನಾವೆಲ್ಲರೂ ಭ್ರಷ್ಟಾಚಾರ ಮುಕ್ತ ಜಿಲ್ಲೆಯನ್ನಾಗಿಸಲು ಪಣತೊಡೋಣ ಎಂದರು.

ಸಾರ್ವಜನಿಕರು ಕಚೇರಿಗಳಿಗೆ ಬಂದಾಗ ಆರಿಕೆಯ ಉತ್ತರ ನೀಡುವ ಮೂಲಕ ಸರ್ವಾಧಿಕಾರಿಗಳಂತೆ ವರ್ತಿಸಬಾರದು. ಅವರೊಂದಿಗೆ ಸೌಮ್ಯಯುತ ಹಾಗೂ ಸೌಜನ್ಯದಿಂದ ವರ್ತಿಸಬೇಕು.

ಇಲ್ಲಿ ಜನಪ್ರತಿನಿಧಿಗಳು, ಸಚಿವರು, ಶಾಸಕರು ಹಾಗೂ ಅಧಿಕಾರಿಗಳು ಹೀಗೆ ಎಲ್ಲರನ್ನೂ ಒಳಗೊಂಡ ಪ್ರಜಾಪ್ರಭುತ್ವವೇ ಆಡಳಿತ. ಎಲ್ಲರೊಂದಿಗೆ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿದಲ್ಲಿ ಯಾವುದೇ ತಪ್ಪುಗಳು ಆಗುವುದಿಲ್ಲ. ಈ ನೆಲೆಗಟ್ಟಿನಲ್ಲಿ ಕಾರ್ಯನಿರ್ವಹಿಸಿದಾಗ ಮಾತ್ರ ಕಾರ್ಯಕ್ರಮಕ್ಕೆ ಅರ್ಥ ಸಿಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಂ.ಎಸ್.ಕೌಲಾಪುರೆ ಪ್ರತಿಜ್ಞಾವಿಧಿ ಬೋಧಿಸಿದರು. ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿ.ಪಂ. ಸಿಇಓ ಗಿತ್ತೆ ಮಾಧವ ವಿಠಲ ರಾವ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಲಯ ಮಹಾವೀರ ಮ.ಕರೆಣ್ಣವರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮುಂದುವರಿದ ತಂತ್ರಜ್ಞಾನ ಯುಗದಲ್ಲಿ ಯಾರೂ ಕರೆದು ಅವಕಾಶ ಕೊಡಲ್ಲ, ನಾವೇ ಸೃಷ್ಟಿಸಿಕೊಳ್ಳಬೇಕು

**ದಾವಣಗೆರೆ:** ಭಾರತ ದೇಶದಲ್ಲಿ ಯಾರೂ ಕರೆದು ನಮಗೆ ಅವಕಾಶ ಕೊಡುವುದಿಲ್ಲ. ಜ್ಞಾನ ಬೆಳೆಸಿಕೊಳ್ಳುವ ಮೂಲಕ ನಾವೇ ಅವಕಾಶಗಳನ್ನು ಸೃಷ್ಟಿಸಿಕೊಂಡಾಗ ಜೀವನದಲ್ಲಿ ಯಶಸ್ಸು ಸಾಧ್ಯವಾಗುತ್ತದೆ ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್ ಕುಮಾರ್ ಅವರು ಕರೆ ನೀಡಿದರು.

ನಗರದ ಶ್ರೀಶೈಲ ಶಿಕ್ಷಣ ಟ್ರಸ್ಟ್, ಜಿಎಂ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿನ ಜಿ.ಎಂ. ಅಲ್ಲಮ ಸಭಾಂಗಣದಲ್ಲಿ ಏರ್ಪಡಿಸಿದ್ದ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ವಿಭಾಗ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ಎಲ್ಲವನ್ನೂ ವಿಶ್ವವಿದ್ಯಾಲಯ, ಕಾಲೇಜುಗಳಿಂದ ಮಾತ್ರ ಹೇಳಿಕೊಡಲು ಸಾಧ್ಯವಿಲ್ಲ. ತಂತ್ರಜ್ಞಾನದಲ್ಲಿ ಉನ್ನತ ಸಾಧನೆ ಮಾಡಬೇಕಾದರೆ ಜ್ಞಾನ ಅತ್ಯವಶ್ಯಕ ಎಂದು ಪ್ರತಿಪಾದಿಸಿದರು.

ಪ್ರಸ್ತುತ ದೇಶ ವಿದೇಶಗಳಲ್ಲಿ ಕೃತಕ ಬುದ್ಧಿಮತ್ತೆಯಿಂದ ಸಾಕಷ್ಟು ಅವಕಾಶಗಳು ಸಿಗುತ್ತವೆ. ಆದರೆ, ಅದೇ ರೀತಿಯಲ್ಲಿ ಉದ್ಯೋಗ ಸೇರಿದಂತೆ ಇತರೆ ಕ್ಷೇತ್ರಗಳಲ್ಲಿ ಗಂಭೀರ ಪರಿಣಾಮ ಬೀರುತ್ತದೆ. ಇನ್ನು 30ರಿಂದ 40 ವರ್ಷಗಳಲ್ಲಿ ಏನೆಲ್ಲಾ ಬದಲಾವಣೆ ಆಗಬಹುದು ಎಂಬುದನ್ನು ಈಗಿನಿಂದಲೇ ಊಹಿಸಲು ಅಸಾಧ್ಯ. ಹಾಗಾಗಿ, ಭಾಷಾ ಪ್ರೌಢಿಮ್ಯ, ಕೌಶಲ್ಯ, ಪುಸ್ತಕ, ಪಠ್ಯೇತರ ಚಟುವಟಿಕೆ ಜ್ಞಾನ, ದೇಶ



ಮತ್ತು ವಿದೇಶಗಳಲ್ಲಿನ ಆಗು ಹೋಗುಗಳ ಬಗ್ಗೆ ಪ್ರತಿನಿತ್ಯವೂ ತಿಳಿದುಕೊಳ್ಳುತ್ತಿರಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕೃಷಿ, ಕೈಗಾರಿಕೆ, ಶೈಕ್ಷಣಿಕ ಕ್ಷೇತ್ರಗಳ ಮೇಲೆ ಕೃತಕ ಬುದ್ಧಿಮತ್ತೆ ಭಾರೀ ಪರಿಣಾಮ ಬೀರಲಿದೆ. ತಂತ್ರಜ್ಞಾನ ಬೆಳೆದಂತೆ ಕೌತುಕವೂ ಹೆಚ್ಚಾಗಬೇಕು. ವಿದ್ಯಾರ್ಥಿಗಳು ತಂತ್ರಜ್ಞಾನದ ಬಗ್ಗೆ ಅರಿಯುವ, ಮಾಹಿತಿ ಪಡೆಯುವ ಅವಶ್ಯಕತೆ ತುಂಬಾನೇ ಇದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಸಜ್ಜಾಗಬೇಕು ಎಂದು ಹೇಳಿದರು.

ದಾವಣಗೆರೆಯಿಂದ 8 ಕಿಲೋಮೀಟರ್ ದೂರದಲ್ಲಿರುವ ಕಕ್ಕರಗೊಳ್ಳ ಗ್ರಾಮದಲ್ಲಿ ನಾನು ಹುಟ್ಟಿ ಬೆಳೆದಿದ್ದು. ನನ್ನ ತಂದೆ ಸಿರಿಗೆರೆ ಮಠದಲ್ಲಿ ಓದಿದ್ದರು. ಅಲ್ಲಿಂದಲೇ ಸಂಸ್ಕಾರ, ಪುಸ್ತಕ ಹವ್ಯಾಸ ಓದುವ ಬೆಳೆಸಿಕೊಂಡಿದ್ದರು. ಇದನ್ನು ನಮಗೂ ಚಿಕ್ಕಂದಿನಿಂದಲೇ ರೂಢಿಸಿಕೊಳ್ಳುವಂತೆ ಪ್ರೇರೇಪಿಸಿದವರು. ಚಿಕ್ಕವರಿದ್ದಾಗ ಪುಟ್ಟದಾಗಿ ಮನೆಯಲ್ಲಿಟ್ಟಿದ್ದ ಪುಸ್ತಕಗಳನ್ನು ಇಲಿಗಳು ತಿಂದು ಹಾಕುತ್ತಿದ್ದವು. ತಂದೆ ಮನೆಗೆ ಬಂದು ನೋಡಿದಾಗ ಪುಸ್ತಕಗಳು ಹಾಳಾಗಿರುತ್ತಿದ್ದವು. ಆಗ ನಮಗೆ ಪುಸ್ತಕಗಳ ಮಹತ್ವ ಮತ್ತು ಜ್ಞಾನದ ಬಗ್ಗೆ ಅರಿವು ಮೂಡಿಸಿದರು. ಇದರಿಂದ ನಾನೂ ಪುಸ್ತಕ ಓದುವ ಹವ್ಯಾಸ ರೂಢಿಸಿಕೊಂಡೆ. ಇದರಿಂದ ಜ್ಞಾನ ಮತ್ತು ವ್ಯಕ್ತಿತ್ವ ಬೆಳೆಸಿಕೊಳ್ಳಲು ಸಾಧ್ಯವಾಯಿತು. ಸ್ವಲ್ಪ ಮಟ್ಟಿಗೆ ಸಾಧನೆ ಮಾಡಿದ್ದೇನೆಂದರೆ ಅದಕ್ಕೆ ಕಾರಣ ಪುಸ್ತಕ, ಕಾದಂಬರಿ, ಮಹನೀಯರ ಸಾಧನೆ ಬಗ್ಗೆ ಓದುವ ಮೂಲಕ ತಿಳಿದುಕೊಂಡಿದ್ದರಿಂದ. ಹಾಗಾಗಿ, ಎಲ್ಲರೂ ಪುಸ್ತಕ ಓದುವ, ನಿರ್ಭೀತಿಯಿಂದ ಮುನ್ನಡೆಯುವ, ಸಾಧಿಸುತ್ತೇವೆಂಬ ಛಲ ಬೆಳೆಸಿಕೊಳ್ಳಬೇಕು. ಆಗ ಮಾತ್ರ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಜಿ. ಬಿ. ವಿನಯ್ ಕುಮಾರ್ ಅವರು ಅಭಿಪ್ರಾಯಪಟ್ಟರು.

ಐದನೇ ತರಗತಿಯಲ್ಲಿ ನಾನು ಪರೀಕ್ಷೆ ಬರೆದು ಉತ್ತೀರ್ಣನಾಗಿ ಜವಾಹರ ನವೋದಯ ಶಾಲೆಗೆ ಸೇರಿಕೊಂಡೆ. ಹಳ್ಳಿಯಿಂದ ಬಂದರೂ ನಾನು ಅಲ್ಲಿಗೆ ಹೋದಾಗ ಗ್ರಂಥಾಲಯದಲ್ಲಿನ ಎಲ್ಲಾ ಪುಸ್ತಕಗಳನ್ನು ಓದಬೇಕು. ಎಲ್ಲಾ ಕ್ರೀಡೆಗಳಲ್ಲಿಯೂ ಪಾಲ್ಗೊಳ್ಳಬೇಕು ಎಂಬ ನಿರ್ಧಾರ ಮಾಡಿದೆ. ಅದರಂತೆ ದಿನಚರಿ ರೂಢಿಸಿಕೊಂಡೆ. ಇದು ತುಂಬಾನೇ ಸಹಕಾರಿಯಾಯಿತು. ಮೆಡಿಕಲ್, ಐಎಎಸ್ ಪಾಸ್ ಮಾಡಬೇಕೆಂಬ ಕನಸು ಕಂಡಿದ್ದೆ. ಬಡತನ ಇದ್ದ ಕಾರಣ ಸಾಧ್ಯವಾಗಲಿಲ್ಲ. ಹಾಗೆಂದು ಸುಮ್ಮನೆ ಕೂರಲಿಲ್ಲ. ಇನ್ ಸೈಟ್ಸ್ ಎಂಬ ಸಂಸ್ಥೆ ಸ್ಥಾಪಿಸಿ ಸಾವಿರಾರು ವಿದ್ಯಾರ್ಥಿಗಳು ಇಂದು ಐಎಎಸ್, ಐಪಿಎಸ್ ಅಧಿಕಾರಿಗಳಾಗುವಂತೆ ಮಾಡಿದ್ದೇನೆ. ಇದೆಲ್ಲಾ ಸಾಧ್ಯವಾಗಿದ್ದು ಪುಸ್ತಕದಿಂದ ಬಂದ ಜ್ಞಾನದಿಂದ ಎಂದು ತಿಳಿಸಿದರು.

ಜಿಎಂಐಟಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಸಂಜಯ್ ಪಾಂಡೆ ಎಂ.ಬಿ. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ವಿಭಾಗದ ಅಧ್ಯಕ್ಷೆ, ಸಹಾಯಕ ಪ್ರಾಧ್ಯಾಪಕಿ ಡಾ. ಆಶಾ, ಎಂಎಲ್ ವಿಭಾಗದ ನಿರ್ದೇಶಕರು ಮತ್ತು ಸಹಾಯಕ ಪ್ರಾಧ್ಯಾಪಕರಾದ ಕೀರ್ತಿ ಪ್ರಸಾದ್, ಫೋರಂ ಸಂಯೋಜಕರು ಮತ್ತು ಸಹಾಯಕ ಪ್ರಾಧ್ಯಾಪಕಿ ಮುಕ್ತಾ ಪೂಜಾರ್,ಕಾಲೇಜಿನ ಬೋಧಕ, ಬೋಧಕೇತರ ವರ್ಗದವರು, ವಿದ್ಯಾರ್ಥಿಗಳು ಹಾಜರಿದ್ದರು.

## ಜಿಲ್ಲಾಡಳಿತ ಕೂಡಲೇ ಮೆಕ್ಕೆಜೋಳ ಖರೀದಿ ಕೇಂದ್ರ ಪ್ರಾರಂಭಿಸದಿದ್ದರೆ ಜಿಲ್ಲೆಯಾದ್ಯಂತ ಹೋರಾಟ: ಹುಚ್ಚವ್ವನಹಳ್ಳಿ ಮಂಜುನಾಥ

**ದಾವಣಗೆರೆ:** ಸರ್ಕಾರ ಬೆಂಬಲ ಬೆಲೆ ಕಾನೂನು ಜಾರಿಗೊಳಿಸುವಂತೆ ಒತ್ತಾಯಿಸಿ ಅ.29ರಿಂದ ಜಿಲ್ಲಾದ್ಯಂತ ತೀವ್ರ ಸ್ವರೂಪದ ಹೋರಾಟ ಕೈಗೊಳ್ಳಲಾಗುವುದು ಎಂದು ರೈತ ಸಂಘ ಮತ್ತು ಹಸಿರುಸೇನೆ ರಾಜ್ಯಾಧ್ಯಕ್ಷ ಹುಚ್ಚವ್ವನಹಳ್ಳಿ ಮಂಜುನಾಥ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ನಾಮಕಾವಸ್ತೆ ಘೋಷಣೆ ಮಾಡುವ ಬೆಂಬಲ ಬೆಲೆಗೆ ಕಾನೂನಿನ ಮಾನ್ಯತೆ ಇಲ್ಲ. ಹೀಗಾಗಿ ಪ್ರತ್ಯೇಕ ಕಾನೂನು ಜಾರಿಗೆ ತರಬೇಕು. ಬೆಂಬಲ ಬೆಲೆಗಿಂತ ಕಡಿಮೆ ದರಕ್ಕೆ ಖರೀದಿಸುವ ವರ್ತಕರಿಗೆ ಕನಿಷ್ಠ 1 ವರ್ಷ ಜೈಲು ಶಿಕ್ಷೆ ಜೊತೆಗೆ ಖರೀದಿದಾರರ ಪರವಾನಿಗೆ ರದ್ದುಪಡಿಸಬೇಕು. ಕ್ವಿಂಟಾಲ್ ಗೆ 50 ಕಡಿಮೆ ಬೆಲೆಗೆ ಖರೀದಿಸಿದರೂ ಶೇ.5ರಷ್ಟು ದಂಡ ವಸೂಲು ಮಾಡಿ, ರೈತನ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡುವಂತಾಗಬೇಕು ಎಂದು ಒತ್ತಾಯಿಸಿದರು.

ಬೆಂಬಲ ಬೆಲೆ ಕಾಯ್ದೆ ಜಾರಿಗೆ ಈಗಾಗಲೇ ಅನೇಕ ಬಾರಿ ಹೋರಾಟ ನಡೆಸಲಾಗಿದೆ. ಆದರೂ ದಪ್ಪ ಚರ್ಮದ ಸರ್ಕಾರಗಳಿಂದಾಗಿ ಬೇಡಿಕೆ ಈಡೇರಿಲ್ಲ. ಕಠಿಣ ಕಾನೂನು ಜಾರಿಗೆ ತಂದರೆ ಮಾತ್ರ ಕೇಂದ್ರ ಸರ್ಕಾರ ಘೋಷಿಸುವ ಬೆಂಬಲ ಬೆಲೆಗೆ ಅರ್ಥ ಇರುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರ, ಜಿಲ್ಲಾಡಳಿತ ಮಧ್ಯ ಪ್ರವೇಶಿಸಿ, ರೈತರಿಗೆ ಬೆಲೆ ಖಾತ್ರಿಗೊಳಿಸಬೇಕು. ಈ ದಿಸೆಯಲ್ಲಿ ಜಿಲ್ಲೆ, ತಾಲೂಕು ಹಾಗೂ ಹೋಬಳಿ ಕೇಂದ್ರಗಳಲ್ಲಿ ನಿರಂತರ ಹೋರಾಟ ನಡೆಸಲಾಗುವುದು ಎಂದು ಅವರು ತಿಳಿಸಿದರು.

2014ರಿಂದ ಈವರೆಗೂ ಜಿಲ್ಲೆಯಲ್ಲಿ ಮೆಕ್ಕೆಜೋಳದ ಖರೀದಿ ಕೇಂದ್ರ ತೆರೆದಿಲ್ಲ. ಹೀಗಾಗಿ ಕೇಂದ್ರ ಸರ್ಕಾರದ ಬೆಂಬಲ ಬೆಲೆಯಿಂದ ರೈತರಿಗೆ ಪ್ರಯೋಜನ ಇಲ್ಲದಂತಾಗಿದೆ. ರಾಜ್ಯ ಸರ್ಕಾರ ಕೂಡ ಖರೀದಿ ಕೇಂದ್ರ ತೆಗೆದು, ಆವರ್ತ ನಿಧಿಯಲ್ಲಿ ಖರೀದಿಸಲು ಮುಂದಾಗುತ್ತಿಲ್ಲ. ವರ್ಷದಿಂದ ವರ್ಷಕ್ಕೆ ಮೆಕ್ಕೆಜೋಳ ಬೆಳೆಯುವ ಪ್ರದೇಶ ಕಡಿಮೆಯಾಗುತ್ತಿದೆ. ಅಲ್ಲದೆ, ಈ ವರ್ಷ ಅಕಾಲಿಕ ಮಳೆಯಿಂದಾಗಿ ಮೆಕ್ಕೆಜೋಳದ ಇಳುವರಿ ಕೂಡ ಕುಂಠಿತವಾಗಿದೆ. ಇಂತಹ ಸಂದರ್ಭದಲ್ಲಿ ಮಾರುಕಟ್ಟೆಗೆ ಮೆಕ್ಕೆಜೋಳ ಪೂರೈಕೆ ಕಡಿಮೆಯಾಗುವುದರಿಂದ ಸಹಜವಾಗಿಯೇ ಬೆಲೆ ಏರಿಕೆಯಾಗಬೇಕಿತ್ತು. ಆದರೂ ಬೆಲೆ ಕುಸಿದಿರುವುದನ್ನು ನೋಡಿದರೆ, ಇದರ ಹಿಂದೆ ವರ್ತಕರ ಕೈವಾಡವಿರುವ ಅನುಮಾನವಿದೆ ಎಂದು ಅವರು ಸಂಶಯ ವ್ಯಕ್ತಪಡಿಸಿದರು.

ಸಂಘಟನೆ ಮುಖಂಡರಾದ ಹೂವಿನಮಡು ನಾಗರಾಜ್, ಕಾರಿಗನೂರು ಕ್ರಾಸ್ ಶಿವಕುಮಾರ್, ಗುಮ್ಮನೂರು ರಾಜೇಶ್, ಹೊಸಹಳ್ಳಿ ಮೋಹನನಾಯ್ಕ, ಪಾಮೇನಹಳ್ಳಿ ಗೌಡ್ರು ಶೇಖರಪ್ಪ, ಭೀಮಾನಾಯ್ಕ, ಕುರ್ಕಿ ಹನುಮಂತ, ಭೀಮೇಶ್ ಗುಮ್ಮನೂರು, ಆಲೂರು ಪರಶುರಾಮ ಸುದ್ದಿಗೋಷ್ಠಿಯಲ್ಲಿದ್ದರು.

## ಪದವೀಧರರ ಬಹುವರ್ಷಗಳ ಸಮಸ್ಯೆ ಪರಿಹಾರಕ್ಕಾಗಿ ನನ್ನನ್ನು ಬೆಂಬಲಿಸಿ: ಅಭ್ಯರ್ಥಿ ಡಾ.ಕೆ.ನಾಗರಾಜ

**ದಾವಣಗೆರೆ:** ಪದವೀಧರರ ಬಹುವರ್ಷಗಳ ಸಮಸ್ಯೆ ಪರಿಹಾರಕ್ಕಾಗಿ ವಿಧಾನ ಪರಿಷತ್ ಆಗ್ನೇಯ ಪದವೀಧರರ ಕ್ಷೇತ್ರದ ಮತದಾರರು ತಮ್ಮನ್ನು ಬೆಂಬಲಿಸುವಂತೆ ಜನತಾದಳ(ಸಂಯುಕ್ತ) ಅಭ್ಯರ್ಥಿ ಡಾ.ಕೆ.ನಾಗರಾಜ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪದವೀಧರ ಕ್ಷೇತ್ರದಿಂದ ನಾನು ಆಯ್ಕೆಯಾದಲ್ಲಿ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿಗಾಗಿ ಸರ್ಕಾರಕ್ಕೆ ಒತ್ತಾಯಿಸುತ್ತೇನೆ. ಹೊಸ ಪಿಂಚಣಿ ಯೋಜನೆ ರದ್ದುಗೊಳಿಸಿ, ಹಳೆಯ ಪಿಂಚಣಿ ಜಾರಿಗೊಳಿಸಲು ಧ್ವನಿ ಎತ್ತುತ್ತೇನೆ. ಅತಿಥಿ ಉಪನ್ಯಾಸಕರು ಮತ್ತು ಶಿಕ್ಷಕರಿಗೆ ಸೇವಾ ಭದ್ರತೆ, ಎಲ್ಲರಿಗೂ ಜ್ಯೋತಿ ಸಂಜೀವಿನಿ ಯೋಜನೆ ಜಾರಿ, ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ಉಚಿತ ಐ.ಎ.ಎಸ್ ಹಾಗೂ ಕೆ.ಎ.ಎಸ್ ಕೋಚಿಂಗ್ ಕೇಂದ್ರಗಳ ಸ್ಥಾಪನೆ, ಗ್ರಾಮೀಣ ಭಾಗದ ಪದವೀಧರರಿಗೆ ಸ್ವಯಂ ಉದ್ಯೋಗಕ್ಕೆ ಆದ್ಯತೆ ಸೇರಿದಂತೆ ಅನೇಕ ಯೋಜನೆಗಳನ್ನು ಹಾಕಿಕೊಂಡಿದ್ದೇನೆ ಎಂದರು.ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳನ್ನು ಒಳಗೊಳ್ಳುವ ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಪ್ರಜಾಸತ್ತಾತ್ಮಕ ಆಡಳಿತ ನೀಡುವ ಉದ್ದೇಶದಿಂದ ಜೆಡಿಯು ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದೇನೆ. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಜೊತೆಗೆ ಸಮಸ್ಯೆ ಪರಿಹಾರಿಸಲಾಗುವುದು. ಈ ನಿಟ್ಟಿನಲ್ಲಿ ಪ್ರತಿ ಜಿಲ್ಲೆ, ತಾಲ್ಲೂಕು ಮತ್ತು ಹೋಬಳಿ ಮಟ್ಟದಲ್ಲಿ ಪ್ರವಾಸ ಕೈಗೊಂಡಿದ್ದೇನೆ. ಉತ್ತಮ ರಾಜ್ಯ ನಿರ್ಮಾಣಕ್ಕೆ ಪದವೀಧರ ಬಂಧುಗಳು ಕೈಜೋಡಿಸಬೇಕೆಂದು ಅವರು ವಿನಂತಿಸಿದರು.

ಜೆಡಿಯು ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ, ಮುಖಂಡರಾದ ಪ್ರಭು, ನೀಲಗಿರಿಯಪ್ಪ, ಶ್ರೀನಿವಾಸ, ಕುಮಾರಸ್ವಾಮಿ, ವೀರೇಶ, ಪ್ರದೀಪ ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

# ಸ್ವಚ್ಛ ಪರಿಸರ ನಮ್ಮೆಲ್ಲರ ನಿಜವಾದ ಆಸ್ತಿ

**ಹಾಸನ :** ಸ್ವಚ್ಛ ಪರಿಸರ ನಮ್ಮೆಲ್ಲರ ನಿಜವಾದ ಆಸ್ತಿ ಈ ನಿಟ್ಟಿನಲ್ಲಿಪರಿಸರಸಂರಕ್ಷಣೆಗಾಗಿ ಪ್ರಾಮಾಣಿಕ ಪ್ರಯತ್ನದ ಮೂಲಕ ಸುಸ್ಥಿರ ಸಮಾಜಉಳಿವಿಗೆ ಪಣತೋಡೋಣಎಂದುಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿಅವರು ತಿಳಿಸಿದ್ದಾರೆ.

ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡು 50 ವರ್ಷಗಳಾದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲೆ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿ ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲೆಯು ಸಹಯೋಗದಲ್ಲಿಂದು ಹಾಸನದ ಸ ರ್ಕಾ ರಿ ಇಂ ಜಿ ನಿ ಯ ರಿಂ ಗ್ ಕಾ ಲೇ ಜು ವ ್ ು ದ ಾ ನ ್ ದ ್ ಲ್ಲಿ ನಡೆದಆಯೋಜಿಸಲಾಗಿದ್ದ ಸುವರ್ಣ ಮಹೋತ್ಸವಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಅವರು ಕರೋನ ಸ ಂ ದ ರ್ಭ ದ ಲ್ಲಿ ಆ ಮ್ಲ ಜ ನ ಕ ದ ಪ್ರಾ ಮು ಖ್ಯ ತೆ ಜ ನ ರಿ ಗೆ ಅ ರಿ ವಾ ಗಿ ದೆ, ಆದಾಗ್ಯೂಜನರು ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಅಪಾಯಕಟ್ಟಿಟ್ಟಬುತ್ತಿ,



ಕಾರ್ಖಾನೆಗಳು,ಕೈಗಾರಿಕೆಗಳು ಕಲುಷಿತ ನೀರನ್ನು ನದಿಗಳಿಗೆ ಬಿಡುವುದರಿಂದಲೂಆಗುತ್ತಿರುವ ಜಲ ಮಾಲಿನ್ಯದ ಬಗ್ಗೆ ಎಲ್ಲರೂಎಚ್ಚರ ವಹಿಸಬೇಕುಎಂದರು.

ಶಾಸಕರಾದ ಸಿಮೆಂಟ್ ಮಂಜುಅವರು ಮಾತನಾಡಿ ವಿದ್ಯಾರ್ಥಿಗಳಿಗೆ ಪರಿಸರದ ಸಂರಕ್ಷಣೆ ಬಗ್ಗೆ ಅರಿವು ಮೂಡಿಸುವುದುಅಗತ್ಯವಿದೆಎಂದಅವರು ಪ್ಲಾಸ್ಟಿಕ್ ಬಹಳ ಕಡಿಮೆ ಮಾಡಬೇಕು ಕೈ ಚೀಲ ಬಳಕೆಯನ್ನು ಚಾಲ್ತಿಗೆ ತರಬೇಕುಎಂದರು.

ವಿದ್ಯಾರ್ಥಿಗಳು ಈ ದೇಶದ ಭವಿಷ್ಯದ ಸಂಪತ್ತು ನೀವು ಒಗ್ಗಟ್ಟಾಗಿಮನಸ್ಸುಮಾಡಿದರೇ ಪರಿಸರ ಉಳಿಸಿ ಮುಂದಿನ ಪೀಳಿಗೆಗೆ ಉತ್ತಮ ಪರಿಸರಕೊಡುಗೆ ನೀಡಬಹುದಾಗಿದೆ.

ಜಿಲ್ಲಾಧಿಕಾರಿ ಲತಾಕುಮಾರಿಅವರು ಮಾತನಾಡಿ ಪರಿಸರ ಹಾಳಾಗುತ್ತಿರುವುದನ್ನು ಬಹಳ ಗಂಭೀರವಾಗಿಯೋಚಿಸಬೇಕುಎಂದಅವರು ಜಲ, ವಾಯು ಮಾಲಿನ್ಯತಡೆಗಟ್ಟುವುದು ಹಾಗೂ ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಗಾರಿಕೆ ನಾಗರೀಕಕರ್ತವ್ಯ ಪ್ರಜ್ಞೆಇರಬೇಕುಎಂದು ತಿಳಿಸಿದರು.

ಈ ಜಾಗೃತಿಕಾರ್ಯಕ್ರಮ ಹಾಸನ ಜಿಲ್ಲೆಯಲ್ಲಿ ಏರ್ಪಡಿಸಿರುವುದು ಹೆಮ್ಮೆ ವಿಷಯಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆಎಂದರು.

ವಿಧಾನ ಪರಿಷತ್ ಶಾಸಕರುಗಳಾದ ಮಧುಜಿ.ಮಾದೇಗೌಡ, ಜಿಲ್ಲಾ ಪಂಚಾಯಿತಿ ಮು ಖ್ಯ ಕಾ ರ್ಯ ನಿ ರ್ವಾ ಹ ಕ ಅ ಧಿ ಕಾ ರಿ ಪೂರ್ಣಿಮಾ ಮತ್ತಿತರರು ಉಪಸ್ಥಿತರಿದ್ದರು.

## ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಕೃಷಿ ಇಲಾಖೆ ವತಿಯಿಂದ 2025-26 ನೇ ಸಾಲಿನ ಆತ್ಮ ಯೋಜನೆಯಡಿ ನೇರ ಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಆಯನೂರು ಹಾಗೂ ನಿದಿಗೆ-1 ರ ರೈತ ಸಂಪರ್ಕ ಕೇಂದ್ರದಲ್ಲಿ ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವವರು 45 ವರ್ಷ ಮೀರಿರಬಾರದು. ಕೃಷಿ ಮತ್ತು ಕೃಷಿ ಸಂಬಂಧಿತ ಇಲಾಖೆಯಲ್ಲಿ 1 ವರ್ಷ ಸೇವಾನುಭವ ಹೊಂದಿರಬೇಕು. ಕೃಷಿ ಅಥವಾ ಕೃಷಿ ಸಂಬಂಧಿತ ವಿಷಯದಲ್ಲಿ ಪದವಿ/ಸ್ನಾತಕ್ಕೋತ್ತರ ಪದವಿಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಪದವಿ/ಸ್ನಾತಕ್ಕೋತ್ತರ ಪದವಿಯ ಅಂತಿಮ ಅಂಕಪಟ್ಟಿ, ಪರಿಶಿಷ್ಟ ಜಾತಿ/ಪಂಗಡ ಅಭ್ಯರ್ಥಿಯಾಗಿದ್ದಲ್ಲಿ ಜಾತಿ ಪ್ರಮಾಣ ಪತ್ರ ದಾಖಲಾತಿಗಳನ್ನು ಹೊಂದಿರಬೇಕು.

ನಿಗದಿತ ನಮೂನೆ ಅರ್ಜಿಯನ್ನು ಯೋಜನಾ ನಿರ್ದೇಶಕರು(ಆತ್ಮ) ಹಾಗೂ ಜಂಟಿ ಕೃಷಿ ನಿರ್ದೇಶಕ ಕಚೇರಿ, ಹಳೇ ತೀರ್ಥಹಳ್ಳಿ ರಸ್ತೆ ಇಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಸೇವಾ ಅನುಭವ ಪ್ರಮಣ ಪತ್ರ, ಕೆಲಸ ನಿರ್ವಹಿಸಿದ ಸಂಸ್ಥೆಯು ನೀಡಿದ ಪ್ರಮಾಣ ಆದೇಶ ಪತ್ರ, ಕೆಲಸ ನಿರ್ವಹಿಸಿದ ಅವಧಿಗೆ ಸಂಬಂಧಪಟ್ಟ ಸಂಸ್ಥೆಯಿಂದ ಹಾಜರಾತಿ ಪ್ರಮಾಣ ಪತ್ರ, ಸಂಸ್ಥೆಯಿಂದ ವೇತನ ದೃಢೀಕರಣ ಹಾಗೂ ವೇತನ ಜಮಾ ಆದ ಕುರಿತು ಬ್ಯಾಂಕ್ ಖಾತೆಯ ವಿವರಗಳನ್ನು ಲಗತ್ತಿಸಿ ನ.14 ರೊಳಗಾಗಿ ಸಲ್ಲಿಸುವಂತೆ ಯೋಜನಾ ನಿರ್ದೇಶಕರು (ಆತ್ಮ) ಹಾಗೂ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ:08182-221906 ನ್ನು ಸಂಪರ್ಕಿಸುವುದು

# ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್ಷಿಪ್ ಅವಕಾಶ

**ಬೆಂಗಳೂರು:** ಕರ್ನಾಟಕ ಮಾಧ್ಯಮ ಅಕಾಡೆಮಿಯು ಮಹಿಳಾ ಆಯವ್ಯಯ ಹಾಗೂ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಗಳಡಿ ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಸ್ನಾತಕೋತ್ತರ ಪದವೀಧರರಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್ಷಿಪ್ ಅವಕಾಶ ಕಲ್ಪಿಸಿದೆ. ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು.

ಬರವಣಿಗೆಯಲ್ಲಿ ಪರಿಣತಿ ಹೊಂದಿರುವ, ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. 2021-2022, 2022-23, 2023-24 ಹಾಗೂ 2024-2025ನೇ ಶೈಕ್ಷಣಿಕ ವರ್ಷದಲ್ಲಿ ಯಾವುದೇ ವಿಷಯದಲ್ಲಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಪ್ರವೇಶ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಎಂದು ಅಕಾಡೆಮಿ ಅಧ್ಯಕ್ಷೆ ಶ್ರೀಮತಿ ಆಯೇಶಾ ಖಾನಂ ತಿಳಿಸಿದ್ದಾರೆ.

ಒಟ್ಟು 21 ಅಭ್ಯರ್ಥಿಗಳಿಗೆ ಇಂಟರ್ನ್ಷಿಪ್ ಅವಕಾಶ ಒದಗಿಸಲಾಗುವುದು. ಅದರ ವಿವರ ಹೀಗಿದೆ:

* ಮಹಿಳಾ ಆಯವ್ಯಯದಡಿ 08 ಮಹಿಳೆಯರು,
* ಪರಿಶಿಷ್ಟ ಜಾತಿ ಉಪಯೋಜನೆಯಡಿ 09 ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು
* ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ 4 ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಇಂಟರ್ನ್ಷಿಪ್ಗೆ ಅವಕಾಶ ಕಲ್ಪಿಸಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಎರಡು ತಂಡಗಳಲ್ಲಿ ಎರಡು ತಿಂಗಳ ಇಂಟರ್ನ್ಷಿಪ್ಗೆ ಅವಕಾಶ ಕಲ್ಪಿಸಲಾಗುವುದು. ಇಂಟರ್ನ್ಷಿಪ್ಗೆ ಸಂಸ್ಥೆ ಹಾಗೂ ಸ್ಥಳವನ್ನು ಅಕಾಡೆಮಿಯೇ ನಿಗದಿ ಪಡಿಸುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಅಕಾಡೆಮಿ ವತಿಯಿಂದ ಮಾಸಿಕ 20,000/- ರೂ. ಸ್ಟೈಪೆಂಡ್ ನೀಡಲಾಗುವುದು.

ಅಭ್ಯರ್ಥಿಗಳು ತಮ್ಮ ಸ್ವವಿವರ (Curriculum Vitae) ದೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಗೂಗಲ್ ಫಾರ್ಮ್ https://forms.gle/Qth3f5ಈರಿಬಊಫಖಥಖಃ68 ರಲ್ಲಿ ಅರ್ಜಿ ಸಲ್ಲಿಸುವುದು. ಅಭ್ಯರ್ಥಿಗಳ ಆಯ್ಕೆಯ ಅಂತಿಮ ತೀರ್ಮಾನ ಅಕಾಡೆಮಿಯ ಸಮಿತಿಯದ್ದೇ ಆಗಿರುತ್ತದೆ.

ಅರ್ಜಿ ಸಲ್ಲಿಸಲು 2025 ರ ನವೆಂಬರ್ 15 ಕೊನೆಯ ದಿನವಾಗಿದೆ ಎಂದು ಅವರು ತಿಳಿಸಿದ್ದಾರೆ.

## ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ. ಎಂ ಎಫ್. ಸಿ. ನ್ಯಾಯಾಲಯ ಜಗಳೂರು

**ಸಿ.ಆರ್ ಮಿಸ್.ನಂ:** 874/ 2025

**ಅರ್ಜಿದಾರರು:** 1)ಶ್ರೀ ಜೆ.ಬಿ ಗೋವಿಂದರೆಡ್ಡಿ ಬಿನ್ ಲೇಟ್ ಯಲ್ಲಪ್ಪ ರೆಡ್ಡಿ ವಯಸ್ಸು70ವರ್ಷ 2) ಶ್ರೀ ಜೆ.ಬಿ ಹನುಮಂತರೆಡ್ಡಿ ಬಿನ್ ಲೇಟ್ ಯಲ್ಲಪ್ಪ ರೆಡ್ಡಿ ವಯಸ್ಸು60ವರ್ಷ3) ಶ್ರೀಮತಿ ನಾಗರತ್ನ ಜೆ.ಬಿ ಬಿನ್ ಲೇಟ್ ಯಲ್ಲಪ್ಪ ರೆಡ್ಡಿ ವಯಸ್ಸು72ವರ್ಷ ಎಲ್ಲರೂ ಜಿರಾಯ್ತಿ ಜಗಳೂರು ಟೌನ್ ಜಗಳೂರು ತಾಲ್ಲೂಕು ದಾವಣಗೆರೆ ಜಿಲ್ಲೆ

**ವಿರುದ್ಧ**

**ಎದುರುದಾರರು :**-1)ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯ್ತಿ ಕಾರ್ಯಾಲಯ ಜಗಳೂರು

### ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣದಲ್ಲಿನ 1 ರಿಂದ 3ನೇ ಅರ್ಜಿದಾರರ ತಂದೆಯವರಾದ ಬಿ. ಯಲ್ಲಪ್ಪರೆಡ್ಡಿ ಬಿನ್ ಗೋವಿಂದಪ್ಪ @ ಗೋವಿಂದರೆಡ್ಡಿ, ಇವರು ದಿನಾಂಕ 04-09-2008 ರಂದು ಜಗಳೂರು ತಾಲ್ಲೂಕು, ಜಗಳೂರು ಟೌನಿನ ಅರ್ಜಿದಾರರ ಮನೆಯಲ್ಲಿ ಮರಣ ಹೊಂದಿದ್ದು, ಸದರಿದಿನಾಂಕವನ್ನು ಎದುರುದಾರರು ಸಂಬಂಧಪಟ್ಟ ದಾಖಲೆಯಲ್ಲಿ ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ :5-12-2025 ರಂದು ಬೆಳಿಗ್ಗೆ 11-00ಗಂಟೆಗೆ ವಿಚಾರಣೆಗಾಗಿ ನಿಗಧಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ಇದ್ದಲ್ಲಿ ತಾವಾಗಲೀ, ಅಥವಾ ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗಧಿತ ದಿನಾಂಕದ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:29.10.2025 ರಂದು ನೀಡಲಾಗಿದೆ.

ನ್ಯಾಯಾಲಯದ ಅಪ್ಪಣೆ ಮೇರೆಗೆ

ಅರ್ಜಿದಾರರ ಪರ ವಕೀಲರು (ಹೆಚ್.ಪಿ ಮಲ್ಲಿಕಾರ್ಜನ

ಶಿರಸ್ತೆದಾರರು ಸಿವಿಲ್ ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ ಜಗಳೂರು

## ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ. ಎಂ ಎಫ್. ಸಿ. ನ್ಯಾಯಾಲಯ ಜಗಳೂರು

**ಸಿ.ಆರ್ ಮಿಸ್.ನಂ:** 881/ 2025

**ಅರ್ಜಿದಾರರು:** 1) ಶ್ರೀ ಎಂ.ಆರ್. ಮಲ್ಲಿಕಾರ್ಜುನಪ್ಪ, ಬಿನ್ ಲೇಟ್ ರುದ್ರಪ್ಪ, ವಯಸ್ಸು 80 ವರ್ಷ,2)ಶ್ರೀ ಎಂ ಬಸವರಾಜ್ ಬಿನ್ ಎಂ ಆರ್. ಮಲ್ಲಿಕಾರ್ಜುನಪ್ಪ, ವಯಸ್ಸು 54 ವರ್ಷ,3. ಶ್ರೀ ಜೆ.ಎಂ. ರುದ್ರೇಶ್, ಬಿನ್ ಎಂ.ಆರ್. ಮಲ್ಲಿಕಾರ್ಜುನಪ್ಪ, ವಯಸ್ಸು 41 ವರ್ಷ, ಎಲ್ಲರೂ ಜಿರಾಯ್ತಿ, ರಾಮಾಲಯ ರಸ್ತೆ, ಜಗಳೂರು ಟೌನ್, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ,

**ವಿರುದ್ಧ**

**ಎದುರುದಾರರು :**-1)ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯ್ತಿ ಕಾರ್ಯಾಲಯ ಜಗಳೂರು

### ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣದಲ್ಲಿನ 1ನೇ ಅರ್ಜಿದಾರರ ಮಗಳು ಹಾಗೂ 2 ಮತ್ತು 3ನೇ ಅರ್ಜಿದಾರರ ಅಕ್ಕನಾದ ಜೆ.ಎಂ. ದ್ರಾಕ್ಷಾಯಣಮ್ಮ ಬಿನ್ ಎಂ.ಆರ್. ಮಲ್ಲಿಕಾರ್ಜುನಪ್ಪ, ಇವರು ದಿನಾಂಕ:25.12.2002ರಂದು ಜಗಳೂರು ತಾಲ್ಲೂಕು ಜಗಳೂರು ಟೌನಿನಲ್ಲಿ ಮರಣ ಹೊಂದಿದ್ದು, ಸದರಿ ದಿನಾಂಕವನ್ನು ಎದುರುದಾರರು ಸಂಬಂಧಪಟ್ಟ ದಾಖಲೆಯಲ್ಲಿ ದಾಖಲೆಯಲ್ಲಿ ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ :5-12-2025 ರಂದು ಬೆಳಿಗ್ಗೆ 11-00ಗಂಟೆಗೆ ವಿಚಾರಣೆಗಾಗಿ ನಿಗಧಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ಇದ್ದಲ್ಲಿ ತಾವಾಗಲೀ, ಅಥವಾ ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗಧಿತ ದಿನಾಂಕದ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:29.10.2025 ರಂದು ನೀಡಲಾಗಿದೆ.

ನ್ಯಾಯಾಲಯದ ಅಪ್ಪಣೆ ಮೇರೆಗೆ

ಅರ್ಜಿದಾರರ ಪರ ವಕೀಲರು (ಹೆಚ್.ಪಿ ಮಲ್ಲಿಕಾರ್ಜನ

ಶಿರಸ್ತೆದಾರರು ಸಿವಿಲ್ ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ ಜಗಳೂರು

# ಕರ್ಮ ಸಿದ್ಧಾಂತದ ಸೇಡಿನ ವ್ಯಥೆ

## 17೦ ಕಾವೇರಿ ಎಕ್ಸ್‌ಪ್ರೆಸ್ ಬಸ್ ದುರಂತದ ಕಥೆ

ನಂದೀಶ್ ನಿರ್ದೇಶನದ ರಿಷಿ ಅಭಿನಯದ ಪೌರಾಣಿಕ ಹಿನ್ನೆಲೆ ಕಥೆಯುಳ್ಳ ರುದ್ರ ಗರುಡ ಪುರಾಣ ಸಿನಿಮಾ ರಿಲೀಸ್ ಆಗಿದೆ. ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ನಟ ರಿಷಿ ತಮ್ಮ ವಿಶಿಷ್ಟ ಅಭಿನಯದ ಮೂಲಕ ಪ್ರೇಕ್ಷಕರನ್ನು ಮಂತ್ರ ಮುಗ್ಧರನ್ನಾಗಿಸಿದ್ದಾರೆ. ಮೇಲ್ನೋಟಕ್ಕೆ ಸಿನಿಮಾ ಪೊಲೀಸ್ ಕಥೆ ಎಂದಂತೆ ಕಂಡು ಬರುತ್ತದೆ, ಆದರೆ ಈ ಸಿನಿಮಾದಲ್ಲಿ ಮಾಟ-ಮಂತ್ರ, ಸಸ್ಪೆನ್ಸ್ ಥ್ರಿಲ್ಲರ್ ಜೊತೆಗೆ ಹಾಸ್ಯ ಮಿಳಿತವಾಗಿದೆ.

ರುದ್ರ (ಋಷಿ), ಎಂಬ ಪೊಲೀಸ್ ಅಧಿಕಾರಿ ತನ್ನ ನೇರ ಹಾಗೂ ಪ್ರಾಮಾಣಿಕ ಕೆಲಸದಿಂದಾಗಿ ಹಲವು ಕಡೆ ವರ್ಗಾವಣೆಯಾಗುತ್ತಾನೆ. ತನ್ನ ದಿಟ್ಟ ಕರ್ತವ್ಯ ನಿರ್ವಹಣೆಯಿಂದಾಗಿ ಇಲಾಖೆಯ ಹಿರಿಯ ಅಧಿಕಾರಿಗಳ ಜೊತೆ ವೈಮನಸ್ಯ ಕೂಡ ಬೆಳೆಯುತ್ತದೆ. ಅಂತಿಮವಾಗಿ ರುದ್ರನನ್ನು ಬೆಂಗಳೂರಿನಿಂದ ಮೈಸೂರಿಗೆ ವರ್ಗಾಯಿಸಲಾಗುತ್ತದೆ. ಆದರೆ ತನ್ನ ವೃತ್ತಿಯಲ್ಲಿ ಹಿನ್ನಡೆಯಾಗಿದ್ದಕ್ಕೆ ರುದ್ರ ಬೇಸರಗೊಳ್ಳುವುದಿಲ್ಲ ತನ್ನ ಕರ್ತವ್ಯವನ್ನು ನಿಷ್ಠೆಯಿಂದಲೇ ಮಾಡುತ್ತಿರುತ್ತಾನೆ. ರೇಪಿಸ್ಟ್ ಒಬ್ಬನನ್ನು ಎನ್ ಕೌಂಟರ್ ಮಾಡಿದ್ದಕ್ಕೆ ಶಿಕ್ಷೆಯಾಗಿ, ಪೊಲೀಸ್ ಬ್ಯಾಂಕ್ ಗೆ ವರ್ಗಾವಣೆ ಮಾಡಲಾಗುತ್ತದೆ. ಮಾಡುವುದಕ್ಕೆ ಸೂಕ್ತವಾದ ಕೆಲಸವಿಲ್ಲದೆ ಒದ್ದಾಡುವ ರಿಷಿಗೆ, ಒಂದು ಜವಾಬ್ದಾರಿಯನ್ನು ವಹಿಸುತ್ತಾರೆ ಅವನ ಮೇಲಧಿಕಾರಿ. ಸಚಿವ ದೇವಿ ಶೆಟ್ಟಿಯ (ವಿನೋದ್ ಆಳ್ವ) ಮಗ ನಿಗೂಢವಾಗಿ ನಾಪತ್ತೆಯಾಗಿದ್ದು, ಆತನನ್ನು ಹುಡುಕುವ ಕೆಲಸವನ್ನು ಅವನ ಮೇಲೆ ಹೊರಿಸಲಾಗುತ್ತದೆ. ನಾಪತ್ತೆಯಾದ ಯುವಕ ಹೋಗಿದ್ದೆಲ್ಲಿಗೆ? ಈ ಕೇಸಿನಲ್ಲಿ ರಿಷಿ ಏನೆಲ್ಲಾ ಸವಾಲುಗಳನ್ನು ಎದುರಿಸುತ್ತಾನೆ ಎನ್ನುವುದು ಚಿತ್ರದ ಕಥೆ.

ಶಾಸಕ ದೇವಿ ಶೆಟ್ಟಿ (ವಿನೋದ್ ಆಳ್ವಾ) ಅವರ ಕಾಣೆಯಾದ ಮಗ ಮನು (ಆಕರ್ಷ್) ಅವರನ್ನು ಪತ್ತೆಹಚ್ಚಲು ರುದ್ರನನ್ನು ಅನಧಿಕೃತವಾಗಿ ನಿಯೋಜಿಸಿದಾಗ ಕಥೆಗೆ ಪ್ರಮುಖ ತಿರುವು ಸಿಗುತ್ತದೆ. ನಾಪತ್ತೆಯಾದ ವ್ಯಕ್ತಿಯನ್ನು ಹುಡುಕಲು ಹೋದ ರುದ್ರನ ತನಿಖೆಯಲ್ಲಿ 25 ವರ್ಷಗಳ ಹಿಂದಿನ 17೦



ಕಾವೇರಿ ಎಕ್ಸ್‌ಪ್ರೆಸ್ ಬಸ್‌ನ ನಿಗೂಢತೆಗೆ ಸಂಬಂಧಿಸಿದ ರಹಸ್ಯಗಳನ್ನು ಬಿಚ್ಚಿಡುತ್ತದೆ. ಈ ದೀರ್ಘಕಾಲ ಮರೆತುಹೋದ ದುರಂತದಲ್ಲಿ, ಚಾಲಕ ಸೇರಿದಂತೆ ಬಸ್ ನಲ್ಲಿದ್ದ ಎಲ್ಲರೂ ಅನುಮಾನಾಸ್ಪದವಾಗಿ ಸಾವನ್ನಪ್ಪಿರುತ್ತಾರೆ. ಅಲ್ಲಿಂದ ಕತೆಗೆ ಮತ್ತೊಂದು ಟ್ವಿಸ್ಟ್ ಸಿಗುತ್ತದೆ. 25 ವರ್ಷಗಳ ಹಿಂದೆ ನಡೆದ ಘಟನೆಗೂ, ಇದಕ್ಕೂ ಏನು ಸಂಬಂಧ? ಯಾವುದಾದರೂ ಅಗೋಚರ ಶಕ್ತಿ ಇದನ್ನೆಲ್ಲಾ ಮಾಡಿಸುತ್ತಿದೆಯಾ? ಉತ್ತರ ಗೊತ್ತಾಗಬೇಕಿದ್ದರೆ, 'ರುದ್ರ ಗರುಡ ಪುರಾಣ' ನೋಡಬೇಕು. ಆರಂಭದಲ್ಲಿ ತನಿಖೆಯಿಂದ ಶುರುವಾಗಿ ಕೊನೆ ಕೊನೆಗೆ ರಿವೇಂಜ್ ದಾರಿಯಲ್ಲಿ ಹೆಜ್ಜೆ ಇಟ್ಟು, ಆ ಪ್ರತೀಕಾರಕ್ಕಿರುವ ಪರಿಣಾಮಕಾರಿ ಫ್ಲ್ಯಾಷ್ ಬ್ಯಾಕ್ ಕತೆ ತೆರೆದುಕೊಳ್ಳುತ್ತದೆ.

ಒಂದೊಂದೆ ಗಂಟು ಬಿಡಿಸುತ್ತಾ ಹೋಗುವಾಗ, ಪ್ರೇಕ್ಷಕನಲ್ಲಿ ರೋಚಕ, ರೋಮಾಂಚಕ ಅನುಭವ ಆಗದೇ ಇರಲು ಸಾಧ್ಯವಿಲ್ಲ. ಅಷ್ಟರಮಟ್ಟಿಗೆ ಚಿತ್ರಕಥೆಯನ್ನು ಬಲವಾಗಿ ಹೆಣೆಯಲಾಗಿದೆ. ಚಿತ್ರದಲ್ಲಿ ಬರುವ ಉಪಕಥೆಗಳು ಮುಖ್ಯ ಕಥೆಗೆ ವೇಗ ಒದಗಿಸುವುದಲ್ಲದೇ, ಹೊಸ ಹೊಸ ಕೌತುಕಗಳನ್ನೂ ಸೃಷ್ಟಿಸುತ್ತದೆ. ಒಮ್ಮೆ ಥ್ರಿಲ್ಲರ್ ಚಿತ್ರವೆಂದೆನಿಸಿದ್ದು, ಇನ್ನೊಮ್ಮೆ ಹಾರರ್ ಚಿತ್ರ ಎಂದೆನಿಸಬಹುದು. ಒಟ್ಟಾರೆ, ಹಲವು ವಿಷಯಗಳನ್ನು ಸೇರಿಸಿ ಪ್ರೇಕ್ಷಕರನ್ನು ಕೂರಿಸಿಕೊಳ್ಳುವ ಪ್ರಯತ್ನ ಮಾಡಿದ್ದಾರೆ.

ಪ್ರವಾಸದ ಸಮಯದಲ್ಲಿ ಚಾಲಕನ ನಿರ್ಲಕ್ಷ್ಯದಿಂದ ಬಸ್ ಅಪಘಾತವಾಯಿತೆಂದು ಹೇಳಲಾಗುತ್ತದೆ. ಅದರೆ ರುದ್ರ ಅದರ ಬೆನ್ನತ್ತಿ ಹೋದಾಗ ದುರಂತಕ್ಕೆ ರಾಜಕೀಯ ಪಿತೂರಿ ಕಾರಣ ಎಂಬುದು ಬಹಿರಂಗವಾಗುತ್ತದೆ. ಪೊಲೀಸ್ ಪಾತ್ರದಲ್ಲಿ ರಿಷಿ ಹೊಸದಾಗಿ ಕಾಣಿಸಿಕೊಂಡಿರುವುದು ಚಿತ್ರದ ಮತ್ತೊಂದು ಹೆಚ್ಚುಗಾರಿಕೆ. ನಾಯಕಿ ಪ್ರಿಯಾಂಕ ಕುಮಾರ್ ಈ ಥ್ರಿಲ್ಲರ್ ತನಿಖೆಯಲ್ಲಿ ಆಗಾಗ ಬಂದು ಹೋಗುತ್ತಾರೆ. ಸಿಕ್ಕಿರುವ ಸೀಮಿತ ಅವಧಿಯಲ್ಲಿ ಪರದೆಯ ಮೇಲೆ ರಂಜಿಸುತ್ತಾರೆ. ವಿನೋದ್ ಆಳ್ವಾ ಶಾಸಕನಾಗಿ ಮತ್ತು ಹಿರಿಯ ಅಧಿಕಾರಿಯಾಗಿ ಅವಿನಾಶ್ ಅವರ ಗೌರವಾನ್ವಿತ ಪಾತ್ರವು ಚಿತ್ರಕ್ಕೆ ಪ್ರಮುಖ ಶಕ್ತಿಯಾಗಿದೆ. ಹಿನ್ನೆಲೆ ಸಂಗೀತವು ಜಟಿಲವಾಗಿದೆ, ಚಿತ್ರದ ವಿಷಯಕ್ಕೆ ಹೊಂದಿಕೆಯಾಗುವುದಿಲ್ಲ.

ಸಕಲೇಶಪುರದಲ್ಲಿ ನಡೆದ ಬಸ್ ಅಪಘಾತ ಭೂತ ಮತ್ತು ವರ್ತಮಾನಕ್ಕೆ ಕೊಂಡಿಯಾಗುತ್ತದೆ. ರುದ್ರನ ತಂದೆಯ ಆದರ್ಶಗಳು ಚಿತ್ರದ ಉದ್ದಕ್ಕೂ ಪ್ರತಿಧ್ವನಿಸುತ್ತವೆ, ಅವನ ಮಗನ ನೈತಿಕ ದಿಕ್ಸೂಚಿಯನ್ನು ರೂಪಿಸುತ್ತವೆ ಮತ್ತು ವ್ಯವಸ್ಥಿತ ಭ್ರಷ್ಟಾಚಾರವನ್ನು ಪ್ರಶ್ನಿಸುವ ಅವನ ಸಂಕಲ್ಪವನ್ನು ಉತ್ತೇಜಿಸುತ್ತವೆ. ಒಟ್ಟಾರೆ ರುದ್ರ ಗರುಡ ಪುರಾಣ ಹಾಸ್ಯ, ಹಾರರ್, ಸಸ್ಪೆನ್ಸ್ ಮತ್ತು ರೋಚಕತೆಯುಳ್ಳ ಕಥೆಯಾಗಿದ್ದು, ಫ್ಯಾಮಿಲಿ ಆಡಿಯೆನ್ಸ್ ಸೇರಿದಂತೆ ಎಲ್ಲಾ ವರ್ಗದ ಪ್ರೇಕ್ಷಕರಿಗೂ ಸಿನಿಮಾ ಇಷ್ಟವಾಗುತ್ತದೆ.

ಕನ್ನಡದಲ್ಲಿ ಇತ್ತೀಚಿನ ವರ್ಷಗಳಲ್ಲಿ ಹಲವು ಥ್ರಿಲ್ಲರ್ ಚಿತ್ರಗಳು ಬಂದಿವೆಯಾದರೂ, ಪ್ರೇಕ್ಷಕರನ್ನು ಹಿಡಿದಿಡುವ ಚಿತ್ರಗಳು ಕಡಿಮೆಯೇ. 'ರುದ್ರ ಗರುಡ ಪುರಾಣ' ಕಥೆ ಸೆಳೆದರೂ, ಇನ್ನಷ್ಟು ಬಿಗಿಯಾದ ನಿರೂಪಣೆ ಇದ್ದಿದ್ದರೆ, ಚಿತ್ರ ಇನ್ನಷ್ಟು ಪರಿಣಾಮಕಾರಿಗಿರುತ್ತಿತ್ತು.

# ಆಳವಿಲ್ಲದ ಕಡಲಿನಲ್ಲಿ ಭಟ್ಟರ ಹಳೇ ವೇದಾಂತ ಪುನರಾವರ್ತನೆ

**ಕನ್ನಡ ಚಿತ್ರಂಗಕ್ಕೆ ಎವರ್ ಗ್ರೀನ್ ಎಂಬಂತಹ ಮುಂಗಾರುಮಳೆ ಸಿನಿಮಾ ನೀಡಿದ್ದ ಈ. ಕೃಷ್ಣಪ್ಪ ಮತ್ತು ನಿರ್ದೇಶಕ ಯೋಗರಾಜ್ ಭಟ್ ಹಲವು ವರ್ಷಗಳ ನಂತರ ಮತ್ತೆ ಒಂದಾಗಿದ್ದಾರೆ. ಈ ಇಬ್ಬರ ಕಾಂಬಿನೇಷನ್ ನ ಮನದ ಕಡಲು ಸಿನಿಮಾ ರಿಲೀಸ್ ಆಗಿದೆ. ಸುಮುಖ, ರಾಶಿಕಾ ಶೆಟ್ಟಿ, ಅಂಜಲಿ ಅನೀಶ್ ಎಂಬ ಹೊಸ ಪ್ರತಿಭೆಗಳು ಸಿನಿಮಾದಲ್ಲಿ ನಟಿಸಿದ್ದಾರೆ.**

**ಮುಂಗಾರು ಮಳೆ ನಿರ್ದೇಶಕ-ನಿರ್ಮಾಪಕ ಮತ್ತೆ ಒಂದಾಗಿದ್ದಾರೆ, ಹೀಗಾಗಿ ಮತ್ತೆ ಮುಂಗಾರು ಮಳೆಯಂತ ಹಿಟ್ ಚಿತ್ರ ನೋಡಬಹುದು ಎಂದು ಹೋದ ಪ್ರೇಕ್ಷಕನಿಗೆ ನಿರಾಶೆ ಖಚಿತ. ಏಕೆಂದರೆ ಯೋಗರಾಜ್ ಭಟ್ಟರ ಈ ಹಿಂದಿನ ಸಿನಿಮಾಗಳ ಚಾಪು ಎದ್ದು ಕಾಣುತ್ತದೆ.**

ನೀಲಿ ನೀಲಿ ಕಡಲು ಎಂಬ ಅರ್ಥ ಪೂರ್ಣ ಹಾಡಿನೊಂದಿಗೆ ಸಿನಿಮಾ ಆರಂಭವಾಗುತ್ತದೆ. ಎಂಬಿಬಿಸ್ ವಿದ್ಯಾರ್ಥಿಯಾಗಿರುವ ಸುಮುಖ ತನ್ನ ವಿದ್ಯಾಭ್ಯಾಸವನ್ನು ಅರ್ಧಕ್ಕೆ ನಿಲ್ಲಿಸಿ, ಏಕಾಏಕಿ ಕಾಲೇಜು ಬಿಟ್ಟು ಊರು ಸುತ್ತಲು ಹೋಗುವ ಬೇಜವಬ್ದಾರಿ ಯುವಕನ ಪಾತ್ರವನ್ನು ಕೇಂದ್ರವಾಗಿ ಇಟ್ಟುಕೊಂಡು ಈ ಸಿನಿಮಾವನ್ನು ಮಾಡಿದ್ದಾರೆ. ಓಃಃಖ ಅರ್ಧಕ್ಕೆ ನಿಲ್ಲಿಸಿ ಜೀವನದ ಅರ್ಥ ಹುಡುಕಿಕೊಂಡು ಹೋಗುವ ಸುಮುಖನಿಗೆ ಕಡಲ ತೀರದಲ್ಲಿ ರಾಶಿಕಾ ಸಿಗುತ್ತಾಳೆ.

ಮೆಚ್ಚಿದ ಹುಡುಗಿ ರಾಶಿಕಾಳನ್ನು ಹುಡುಕಿಕೊಂಡು ಕಡಲ ಮಡಿಲಲ್ಲಿರುವ ದೋಣಿ ದುರ್ಗ ಅನ್ನೋ ಊರಿಗೆ ಸುಮುಖ ಬರುತ್ತಾನೆ, ನಾಯಕಿ ಜೊತೆ ಮತ್ತೊಬ್ಬಳು ಸಿಗುತ್ತಾಳೆ. ಪುರಾತತ್ವಶಾಸ್ತ್ರಜ್ಞೆ




ಅಂಜಲಿ, ಪ್ರೀತಿಯ ಸಂಕೀರ್ಣತೆಗಳ ಬಗ್ಗೆ ರಾಶಿಕಾಗೆ ಎಚ್ಚರಿಕೆ ನೀಡುತ್ತಾಳೆ, ಆದರೆ ಕಥೆ ತೆರೆದುಕೊಳ್ಳುತ್ತಿದ್ದಂತೆ, ಅವಳು ಕೂಡ ಸುಮುಖನ ಮೇಲಿನ ತನ್ನದೇ ಆದ ಪ್ರೇಮ ಭಾವನೆಗಳಲ್ಲಿ ಸಿಕ್ಕಿಹಾಕಿಕೊಳ್ಳುತ್ತಾಳೆ. ಅಲ್ಲಿಂದ ತ್ರಿಕೋನ ಪ್ರೇಮಕಥೆಗೆ ಟರ್ನಿಂಗ್ ಸಿಗುತ್ತದೆ.

ರಂಗಾಯಣ ರಘು ಆದಿವಾಸಿ ಪಾತ್ರದಲ್ಲಿ ನಟಿಸಿದ್ದಾರೆ. ಗಿಬ್ರಿಶ್ ಭಾಷೆ, ನಡೆಯುವ ಸನ್ನಿವೇಶಗಳೆಲ್ಲ ಭಟ್ಟರ ಹಿಂದಿನ ಸಿನಿಮಾಗಳನ್ನು ನೆನಪಿಗೆ ತರುತ್ತವೆ. ಮಳೆ, ಕಡಲು, ಹಸಿರು ಪ್ರಕೃತಿ ಇವೆಲ್ಲಾ ಭಟ್ಟರ ಸಿನಿಮಾಗಳಲ್ಲಿ ಹೇರಳವಾಗಿರುತ್ತದೆ. ಅದೇ ರೀತಿಯ ಪುನಾರವರ್ತನೆ ಇಲ್ಲಿಯೂ ಇದೆ. ಆದರೆ ಸಿನಿಮಾದ ಯಾವೊಂದು ಪಾತ್ರಗಳು ಬಿಡದಂತೆ ಮನಸ್ಸನ್ನು ಕಾಡುವುದಿಲ್ಲ, ಎದೆಬಿರಿವಷ್ಟು ಪ್ರೀತಿಯಿದ್ದರೂ ಮನ ತಣಿಯುವುದಿಲ್ಲ, ಯಾವ ಸನ್ನಿವೇಶವೂ ಆವರಿಸಿಕೊಳ್ಳುವುದಿಲ್ಲ, ಸಿನಿಮಾದ ಮೊದಲಾರ್ಧ ಹಾಸ್ಯದಿಂದ ಸ್ವಲ್ಪ ಸಮಯದವರೆಗೆ ನೋಡಿಸಿಕೊಂಡು ಹೋಗುತ್ತದೆ. ಚಿತ್ರದ ದ್ವಿತೀಯಾರ್ಧದ ನಿರೂಪಣೆ ಮತ್ತಷ್ಟು ಬಿಗಿ ಹಿಡಿತ ಬೇಡುತ್ತದೆ.

ಹೊಸ ಪ್ರತಿಭೆಗಳಿಗೆ ಸದಾ ಮಣೆ ಹಾಕುವ ಭಟ್ಟರು ಮನದ ಕಡಲು ಸಿನಿಮಾದಲ್ಲಿ ಮೂವರು ಹೊಸಬರಿಗೆ ಅವಕಾಶ ನೀಡಿದ್ದಾರೆ, ಆದರೆ ಅವರು ಪಾತ್ರವನ್ನು ಮತ್ತಷ್ಟು ಅನುಭವಿಸಲು ನಟನೆಯಲ್ಲಿ ಪಕ್ವವಾಗಬೇಕು. ಎಂದಿನಂತೆ ರಂಗಾಯಣ ರಘು ತಮ್ಮ ಹಾಸ್ಯದಿಂದ ನಗು ಮೂಡಿಸುತ್ತಾರೆ. ಯೋಗರಾಜ್ ಭಟ್ ಅವರ ದೀರ್ಘಕಾಲದ ಸಂಗೀತ ಮಿತ್ರ ಹರಿಕೃಷ್ಣ ಅವರ ಮ್ಯೂಸಿಕ್ ಭಾವನಾತ್ಮಕ ಏರಿಳಿತಗಳಿಗೆ ಪೂರಕವಾಗಿದೆ. ಸಂತೋಷ್ ರೈ ಪಾತಾಜೆ ಛಾಯಾಗ್ರಹಣ, ಸಮುದ್ರ, ಪರ್ವತಗಳು ಮತ್ತು ಹಚ್ಚ ಹಸಿರಿನ ಉಸಿರುಕಟ್ಟುವ ಸೌಂದರ್ಯವನ್ನು ಸೊಗಸಾಗಿ ಸೆರೆಹಿಡಿಯುತ್ತವೆ. ಈ ನೈಸರ್ಗಿಕ ಅಂಶಗಳು ಚಿತ್ರದ ಪ್ಲಸ್ ಪಾಯಿಂಟ್. ಉಳಿದಂತೆ ಯಾವುದೇ ಹಾಡು ಸನ್ನಿವೇಶ ಮನಸಲ್ಲಿ ಉಳಿಯುವುದಿಲ್ಲ.

## ಅಬ್ಬಬ್ಬಾ ರೋಮಾಂಚನ: ಅದ್ಭುತ ಸೃಷ್ಟಿಸಿದ ರಿಷಬ್ ಶೆಟ್ಟಿಗೆ ರಾಷ್ಟ್ರಪ್ರಶಸ್ತಿ ಕೊಡಲೇಬೇಕು- ತಮಿಳು ನಿರ್ದೇಶಕ ಅಟ್ಲೀ

ಇಡೀ ಭಾರತ ಕಾಂತಾರ ಅಧ್ಯಾಯ 1 ಬಗ್ಗೆ ಮಾತನಾಡುತ್ತಿದೆ. ದಕ್ಷಿಣ ಭಾರತೀಯ ಚಿತ್ರರಂಗದಲ್ಲಿ ಕನ್ನಡ ಚಿತ್ರಗಳು ಯಾವಾಗಲೂ ತಮ್ಮದೇ ಆದ ವಿಮರ್ಶಕರು ಮತ್ತು ಅಭಿಮಾನಿಗಳನ್ನು ಹೊಂದಿರುತ್ತವೆ. ಕೆಜಿಎಫ್ ಚಿತ್ರದ ನಂತರ ಭಾರತದಲ್ಲಿ ಕನ್ನಡ ಚಿತ್ರಗಳ ಮೇಲೆ ಪ್ರತ್ಯೇಕ ದೃಷ್ಟಿಕೋನವನ್ನು ಸೃಷ್ಟಿಸಲಾಗಿದೆ. ಈ ಪರಿಸ್ಥಿತಿಯಲ್ಲಿ ಕನ್ನಡ ಚಲನಚಿತ್ರೋದ್ಯಮವನ್ನು ಮತ್ತೊಮ್ಮೆ ವಿಶೇಷ ಗಮನ ಸೆಳೆದ ಚಿತ್ರ ಕಾಂತಾರ. ಈಗ ಕಾಂತಾರ ಅಧ್ಯಾಯ 1 ಬಿಡುಗಡೆಯಾಗಿದ್ದು, ಬಾಕ್ಸ್ ಆಫೀಸ್ ಕೊಳ್ಳೆ ಹೊಡೆಯುತ್ತಿದೆ. ಈ ಚಿತ್ರವನ್ನು ನೋಡಿದ ನಿರ್ದೇಶಕ ಅಟ್ಲೀ, ರಿಷಭ್ ಶೆಟ್ಟಿಗೆ ರಾಷ್ಟ್ರೀಯ ಪ್ರಶಸ್ತಿ ನೀಡಬೇಕು ಎಂದು ಹೇಳಿದ್ದಾರೆ.ಕಾಂತಾರ ಅಧ್ಯಾಯ 1 ಅಕ್ಟೋಬರ್ 2 ರಂದು ಬಿಡುಗಡೆಯಾಗಿದ್ದು ಯಶಸ್ವಿಯಾಗಿ ಪ್ರದರ್ಶನಗೊಳ್ಳುತ್ತಿದೆ. ಕಳೆದ ಒಂದು ವಾರದಲ್ಲಿಯೇ ಚಿತ್ರವು ವಿಶ್ವಾದ್ಯಂತ 509.25 ಕೋಟಿ ರೂ.ಗಳಿಗೂ ಹೆಚ್ಚು ಸಂಗ್ರಹಿಸಿದೆ ಎಂದು ಚಿತ್ರತಂಡ ತಿಳಿಸಿದೆ. ಈ ಮಾಹಿತಿ ಕನ್ನಡ ಚಿತ್ರೋದ್ಯಮವನ್ನು ಸಂತೋಷಪಡಿಸಿದೆ. ಏತನ್ಮಧ್ಯೆ, ಕಾಂತಾರ ಚಿತ್ರದ ಬಗ್ಗೆ ಮಾತನಾಡಿರುವ ಅಟ್ಲೀ, ಕಾಂತಾರ ಚಿತ್ರದ ನಿರ್ದೇಶಕ ಮತ್ತು ನಟ ರಿಷಭ್ ಶೆಟ್ಟಿಗೆ ರಾಷ್ಟ್ರೀಯ ಪ್ರಶಸ್ತಿ ಕೊಡಲೇಬೇಕು ಎಂದು ಹೇಳಿದರು.ನಾನು ಕಾಂತಾರ ಅಧ್ಯಾಯ 1 ಚಿತ್ರವನ್ನು ನೋಡಿದೆ. ನನಗೆ ಚಿತ್ರ ತುಂಬಾ ಇಷ್ಟವಾಯಿತು. ಚಿತ್ರ ನೋಡಿದ ನಂತರ, ನಾನು ನಿರ್ದೇಶಕ ಮತ್ತು ನಟ ರಿಷಭ್ ಶೆಟ್ಟಿ ಅವರಿಗೆ ಕರೆ ಮಾಡಿ ಅಭಿನಂದಿಸಿದೆ. ಒಂದೇ ಕಾಲಕ್ಕೆ ನಟನೆ ಮತ್ತು ನಿರ್ದೇಶನ ಕಂಡು ನನಗೆ ಆಶ್ಚರ್ಯವಾಯಿತು.

# ಯುವ ಮನಸ್ಸುಗಳ ಆಂತರಿಕ ಸಂಘರ್ಷ

## ಸ್ನೇಹ-ಸಂಬಂಧದಲ್ಲಿ ಸಂವಹನ-ನಂಬಿಕೆ ಬಹಳ ಮುಖ್ಯ!

ಸಿನಿಮಾದಲ್ಲಿ ಕಿರಣ್ ರಾಜ್ ಅವರು ಟೈಟಲ್ ರೋಲ್ ಅಂದರೆ ಮೇಘಾ ಪಾತ್ರವನ್ನ ನಿಭಾಯಿಸಿದ್ದಾರೆ. ರೌಡಿಗಳೊಂದಿಗೆ ಗೂಂಡಾಗಳ ಗುಂಪಿನೊಂದಿಗೆ ಹೋರಾಡುವುದರೊಂದಿಗೆ ಸಿನಿಮಾ ಪ್ರಾರಂಭವಾಗುತ್ತದೆ. ಆಗಷ್ಟೇ ಮೇಘಾ ತನ್ನ ಪ್ರೇಯಸಿಯಾಗಿದ್ದ ಹುಡುಗಿ ಪ್ರಿಯಾ (ಶ್ರೀವಿದ್ಯಾ)ಳೊಂದಿಗೆ ಬ್ರೇಕ್‌ಅಪ್ ಮಾಡಿಕೊಂಡಿರುತ್ತಾನೆ. ಆಕೆಯನ್ನ ಇನ್ನೆಂದೂ ನೋಡಲೇಬಾರದು ಎಂದು ಅಂದುಕೊಂಡಿರುತ್ತಾನೆ. ಆಂತರಿಕವಾಗಿ ತನ್ನ ಬ್ರೇಕ್‌ಅಪ್ ವಿಚಾರವಾಗಿ ತುಂಬ ಸಂಕಟ-ನೋವು ಪಡುತ್ತಿರುವ ಹೊತ್ತಲ್ಲೇ ಅವರ ಮೇಲೆ ಗೂಂಡಾಗಳು ಅಟ್ಯಾಕ್ ಮಾಡಿರುತ್ತಾರೆ. ಮೇಘಾ ಹೊಡೆದಾಡುತ್ತಾನೆ.

ಚರಣ್ ಎಚ್‌ಆರ್ ಚೊಚ್ಚಲ ನಿರ್ದೇಶನದ ಮೇಘ ಸಿನಿಮಾ ಕಥೆ ತಮ್ಮ ಸ್ನೇಹಿತರೊಬ್ಬರ ಜೀವನ ಆಧರಿಸಿದೆ ಎಂದು ಹೇಳಿದ್ದಾರೆ. ನೈಜ ಘಟನೆಯನ್ನು ಆಧರಿಸಿ ಪ್ರೀತಿ ಮತ್ತು ಸ್ನೇಹದ ಭಾವನೆಗಳನ್ನು ದೊಡ್ಡ ಪರದೆಯ ಮೇಲೆ ತಂದಿದ್ದಾರೆ, ಚೊಚ್ಚಲ ಸಿನಿಮಾದಲ್ಲಿಯೇ ಭರವಸೆ ಮೂಡಿಸಿದ್ದಾರೆ, ಆದರೆ ಮತ್ತಷ್ಟು ಹಾರ್ಡ್ ವರ್ಕ್ ಮಾಡುವ ಅವಶ್ಯಕತೆಯಿದೆ. ಎಂದಿನಂತೆ ಕಿರಣ್ ರಾಜ್ ಅಭಿನಯ ಚೆನ್ನಾಗಿದೆ. ಒಳ್ಳೊಳ್ಳೆ ಡೈಲಾಗ್‌ಗಳು ಇವೆ. ಅವರ ಡೈಲಾಗ್ ಡೆಲಿವರಿ ಮೆಚ್ಚುಗೆಗೆ ಪಾತ್ರವಾಗಿದೆ. ನಾಯಕಿ ಕಾಜಲ್ ಕೂಡ ತನ್ನ ಪಾತ್ರವನ್ನ ಅಚ್ಚುಕಟ್ಟಾಗಿ ನಿಭಾಯಿಸಿದ್ದಾರೆ.



ರಾಜೇಶ್ ನಟರಂಗ, ಶೋಭರಾಜ್ ಮತ್ತಿತರ ಕಲಾವಿದರ ನಟನೆ ಚಿತ್ರದ ಪ್ಲಸ್ ಪಾಯಿಂಟ್. ಸಿನಿಮಾದ ಸಂಗೀತ ಮೆಚ್ಚುವಂಥದ್ದು. ಕೆಲವೆಡೆ ಅನಾವಶ್ಯಕವಾಗಿ ಹಾಸ್ಯ ಸೇರಿಸಿದ್ದಾರೆ. ಸ್ನೇಹ, ಪ್ರೀತಿ ಮತ್ತು ಬಾಂಧವ್ಯದ ಸಂಕೀರ್ಣತೆಗಳನ್ನು ಸುಮಧುರ ಹಾಡುಗಳ ಮೂಲಕ ಚೆನ್ನಾಗಿ ವ್ಯಕ್ತಪಡಿಸಲಾಗಿದೆ, ಜೋಯಲ್ ಸಕ್ಕರಿ ಸರಳ ಮತ್ತು ಅರ್ಥಪೂರ್ಣ ಸಾಹಿತ್ಯ ಸಂಯೋಜಿಸಿದ್ದಾರೆ. ಛಾಯಾಗ್ರಾಹಕ ಗೌತಮ್ ನಾಯಕ್ ಮೈಸೂರಿನ ಸೌಂದರ್ಯ ಮತ್ತು ಚಿಕ್ಕಮಗಳೂರಿನ ಭೂದೃಶ್ಯಗಳನ್ನು ಅದ್ಭುತವಾಗಿ ಸೆರೆಹಿಡಿದಿದ್ದಾರೆ.

ಪ್ರೀತಿ, ನಷ್ಟ ಮತ್ತು ಹೆಚ್ಚಿನ ಜನರು ಜೀವನದಲ್ಲಿ ಅನುಭವಿಸುವ ಭಾವನೆಗಳ ಬಗೆಗಿನ ಕಥೆಯಾಗಿದೆ, ಚಿತ್ರದಲ್ಲಿ ಯಾವುದೇ ಸಂಬಂಧಗಳ ಸಮಸ್ಯೆಗೆ ಸುಲಭವಾದ ಉತ್ತರ ಸಿಗುವುಗಿಲ್ಲ. ಮೇಘ ಸಿನಿಮಾದಲ್ಲಿ ಪ್ರೀತಿ ಮತ್ತು ಸಂಬಂಧಗಳಲ್ಲಿ ಸಂವಹನದ ಪ್ರಾಮುಖ್ಯತೆಯನ್ನು ವಿವರಿಸುತ್ತದೆ. ಮನುಷ್ಯನಾಗುವುದಕ್ಕೆ ಯಾವ್ಯಾವ ಗುಣಗಳು ಬೇಕು ಎಂಬದನ್ನು ವಿವರಿಸುತ್ತದೆ. ಒಟ್ಟಾರೆ ಮೇಘ ಸಿನಿಮಾ ಯುವ ಮನಸ್ಸುಗಳ ನಡುವೆ ನಡೆಯುವ ಸಂಘರ್ಷಕ್ಕೆ ಹಿಡಿದ ಕನ್ನಡಿಯಾಗಿದೆ.

## ಅಭಿಮಾನಿಗಳ ಮನಗೆದ್ದ 'ದಿ ಡೆವಿಲ್' ಹಾಡು 'ಒಂದೇ ಒಂದು ಸಲ'; 53 ಲಕ್ಷಕ್ಕೂ ಅಧಿಕ ವೀಕ್ಷಣೆ



ದಿ ಡೆವಿಲ್' ಚಿತ್ರದ 'ಒಂದೇ ಒಂದು ಸಲ' ಹಾಡು ಇದೀಗ ಅಭಿಮಾನಿಗಳ ಮನಸ್ಸು ಗೆದ್ದಿದ್ದು, ಯೂಟ್ಯೂಬ್‌ನಲ್ಲಿ ಟ್ರೆಂಡಿಂಗ್ ಆಗಿದೆ. ದರ್ಶನ್ ಮತ್ತು ರಚನಾ ರೈ ಕಾಣಿಸಿಕೊಂಡಿರುವ ಈ ಹಾಡು ಆನ್‌ಲೈನ್‌ನಲ್ಲಿ ಸಂಚಲನ ಮೂಡಿಸಿದ್ದು, 53 ಲಕ್ಷಕ್ಕೂ ಅಧಿಕ ವೀಕ್ಷಣೆಗಳನ್ನು ಗಳಿಸಿದೆ. ಈ ಹಾಡು ಇದೀಗ ಪ್ಲಾಟ್‌ಫಾರ್ಮ್‌ನ ಟ್ರೆಂಡಿಂಗ್ ಮ್ಯೂಸಿಕ್ ವಿಡಿಯೋಗಳ ಪಟ್ಟಿಯಲ್ಲಿ ನಂ. 1 ಸ್ಥಾನದಲ್ಲಿದೆ.

ಪ್ರಕಾಶ್ ವೀರ್ ನಿರ್ದೇಶನದ ಮತ್ತು ರಚನಾ ರೈ ನಟಿಸಿರುವ ಬಹುನಿರೀಕ್ಷಿತ ಚಿತ್ರ 'ದಿ ಡೆವಿಲ್' ಚಿತ್ರತಂಡ ಮೊದಲ ಹಾಡು 'ಇದ್ರೆ ನೆಮ್ದಿಯಾಗ್ ಇರ್ಬೇಕ್' ಅನ್ನು ಆಗಸ್ಟ್ 15 ರಂದು ಬಿಡುಗಡೆ ಮಾಡಿದ್ದು, ಈಗಾಗಲೇ ಭರ್ಜರಿ ಯಶಸ್ಸು ಕಂಡಿದೆ. 'ತಾರಕ್' ಚಿತ್ರದ ನಂತರ ದರ್ಶನ್ ಮತ್ತು ಪ್ರಕಾಶ್ ವೀರ್ ಮತ್ತೆ ಒಂದಾಗಿದ್ದಾರೆ.ಚಿತ್ರವನ್ನು ಶ್ರೀ ಜೈಮಾತಾ ಕಂಬೈನ್ಸ್ ಬ್ಯಾನರ್ ಅಡಿಯಲ್ಲಿ ಜೆ ಜಯಮ್ಮ ಮತ್ತು ಪ್ರಕಾಶ್ ವೀರ್ ನಿರ್ಮಿಸಿದ್ದಾರೆ. ಈ ಚಿತ್ರಕ್ಕೆ ಪ್ರಕಾಶ್ ವೀರ್ ಅವರೇ ಕಥೆ ಮತ್ತು ಚಿತ್ರಕಥೆ ಬರೆದಿದ್ದು, ಆಕ್ಷನ್ ಕಟ್ ಹೇಳಿದ್ದಾರೆ. ಈ ಹಾಡಿಗೆ ಪ್ರಮೋದ್ ಮರವಂತೆ ಸಾಹಿತ್ಯ ಬರೆದಿದ್ದು, ಕಪಿಲ್ ಕಪಿಲನ್ ಮತ್ತು ಚಿನ್ಮಯಿ ಶ್ರೀಪಾದ ಹಾಡಿದ್ದಾರೆ. ಅಜನೀಶ್ ಲೋಕನಾಥ್ ಸಂಗೀತ ಸಂಯೋಜಿಸಿದ್ದಾರೆ ಮತ್ತು ಸಿಆರ್ ಬಾಬಿ ಹೆಚ್ಚುವರಿ ಗಾಯನ ಮಾಡಿದ್ದಾರೆ.

ಹಾಡನ್ನು ಥೈಲ್ಯಾಂಡ್‌ನಲ್ಲಿ ಅದ್ಭುತವಾದ ದ್ವೀಪದ ಹಿನ್ನೆಲೆಯಲ್ಲಿ ಚಿತ್ರೀಕರಿಸಲಾಗಿದೆ ಮತ್ತು ಸಂತು ಮಾಸ್ಟರ್ ಅವರ ನೃತ್ಯ ಸಂಯೋಜನೆಯಿದೆ.

# ಅಘೋರಿಗಳ ವಿಸ್ಮಯ ಪ್ರಪಂಚದಲ್ಲಿ ದುಷ್ಟ ಶಿಕ್ಷಕಿ, ಶಿಷ್ಟ ಪರಿಪಾಲಕಿ ಭೈರಾದೇವಿ

**ರಾಧಿಕಾ ಕುಮಾರಸ್ವಾಮಿ ಅಭಿನಯದ ಬಹುನಿರೀಕ್ಷಿತ ಚಿತ್ರ ಭೈರಾದೇವಿ ಬಿಡುಗಡೆಯಾಗಿದೆ. ಶ್ರೀಜೈ ನಿರ್ದೇಶನದ ಈ ಸಿನಿಮಾವು ಅಘೋರಿಗಳು ದೆವ್ವ ಮತ್ತು ದೇವರ ಬಗೆಗಿನ ಕಥೆಯಾಗಿದೆ.**

**ರಾಧಿಕಾ ಅಘೋರಿ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಸಿನಿಮಾದಲ್ಲಿ ಕಾಶಿ ಹಾಗೂ ಮಣಿಕರ್ಣಿಕಾ ಘಾಟ್ ದರ್ಶನವೂ ಆಗುತ್ತೆ. ಜೊತೆಗೆ ಅಘೋರಿಗಳ ಲೈಫ್‌ಸ್ಟೈಲಿನ ಪರಿಚಯವೂ ಆಗುತ್ತದೆ. ಯಾವ ತೆಲುಗು ಸಿನಿಮಾಕ್ಕೂ ಕಡಿಮೆ ಇಲ್ಲದ ಹಾಗೆ ಬಹಳ ರಿಚ್ ಆಗಿ ಅಘೋರಿ ಲೈಫನ್ನು ತೋರಿಸಿದ್ದಾರೆ. ಬಹುತೇಕ ಕೌಟುಂಬಿಕ, ಪ್ರೀತಿ, ಪ್ರೇಮ ಕಥೆಗಳಲ್ಲಿ ನಟಿಸಿದ್ದ ರಾಧಿಕಾ ಕುಮಾರಸ್ವಾಮಿ ಹೊಸದೊಂದು ಪಾತ್ರದಲ್ಲಿ ಅಭಿನಯಿಸಿದ್ದಾರೆ, ಅವರ ಸಿನಿಮಾಗಳ ಮಟ್ಟಿಗೆ ಇದೊಂದು ಹೊಸ ಪ್ರಯೋಗವಾಗಿದೆ.**

ಚಿತ್ರದ ಶಕ್ತಿಯು ಅದರ ಶೀರ್ಷಿಕೆಯಲ್ಲಿ ಮಾತ್ರವಲ್ಲ ಕಥೆಯಲ್ಲಿಯೂ ಅಡಗಿದೆ. ಪ್ರಬಲವಾದ ಕಥಾವಸ್ತುವನ್ನು ಒಳಗೊಂಡಿರುವ ಭೈರಾದೇವಿ ಸಿನಿಮಾದಲ್ಲಿ ಪ್ರತಿಯೊಬ್ಬರ ಪಾತ್ರ ಅಧ್ಭುತವಾಗಿದೆ.

ಪೊಲೀಸ್ ಅಧಿಕಾರಿಯಾಗಿರುವ ಅರವಿಂದ್ ಗೆ (ರಮೇಶ್ ಅರವಿಂದ್) ತನ್ನ ಮೃತ ಹೆಂಡತಿಯ ಆತ್ಮ ದೆವ್ವದಿಂದ ಕಾಡುತ್ತದೆ. ಆಕೆ ದುರಂತವೊಂದರಲ್ಲಿ ತನ್ನ ಪ್ರಾಣ ತ್ಯಜಿಸಿರುತ್ತಾಳೆ. ಅರವಿಂದ್ ಮಗಳಿಗೆ ತಾಯಿಯ ಸಾವು ಅರಗಿಸಿಕೊಳ್ಳಲಾಗದು. ರಾತ್ರಿಯಲ್ಲಿ ತನ್ನ ಸತ್ತ ತಾಯಿಯನ್ನು



ನಿಗೂಢವಾಗಿ ಭೇಟಿಮಾಡುತ್ತಾಳೆ, ತನ್ನ ತಾಯಿ ತನ್ನ ಜೊತೆಗಿದ್ದಾಳೆ ಎಂದು ಆಕೆ ವರ್ತಿಸುವ ರೀತಿ ಮನೆಯಲ್ಲಿರುವವರ ನಿದ್ದೆಗೆಡಿಸುತ್ತದೆ. ಇದರೊಂದಿಗೆ ರಹಸ್ಯ ಕತೆಯೊಂದು ತೆರೆದುಕೊಳ್ಳುತ್ತದೆ.

ಅರವಿಂದ್ ಅವರ ಮಗಳೊಂದಿಗಿನ ಸಂಬಂಧವನ್ನು ಸಹಾನುಭೂತಿ ಮೂಡಿಸಲು ರಚಿಸಲಾಗಿದೆ, ಶಿಕ್ಷಕಿ ಲಕ್ಷ್ಮಿ (ಮಾಳವಿಕಾ ಅವಿನಾಶ್) ಇವರಿಬ್ಬರ ನಡುನೆ ನಿರ್ಣಾಯಕ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಾರೆ. ಮಗುವಿಗೆ ಕಾಡುತ್ತಿರುವ ಸಮಸ್ಯೆ ಬಗ್ಗೆ ಆಕೆ ಸ್ಪಷ್ಟವಾಗಿ ಹೇಳುತ್ತಾಳೆ, ಅರವಿಂದನ ಕಾರಿನಲ್ಲಿ ಅಡಗಿರುವ ಯಾವುದೋ ಕೆಟ್ಟ ಶಕ್ತಿಯ ಸುಳಿವು ನೀಡುತ್ತಾಳೆ. ಹೀಗೆ ಕೌಟುಂಬಿಕ ಸಮಸ್ಯೆಯಲ್ಲಿ ಸಿಲುಕಿಕೊಳ್ಳುವ ಅರವಿಂದ್ ಗೆ ಆತನ ಸಹೋದ್ಯೋಗಿ ವೀರಯ್ಯ (ರಂಗಾಯಣ ರಘು) ನಿಗೂಢ ಆಚರಣೆಗಳ ಅಭ್ಯಾಸ ಮಾಡುವ ಅಘೋರಿಯಿಂದ ಸಹಾಯ ಪಡೆಯಲು ಶಿಫಾರಸು ಮಾಡುತ್ತಾರೆ.

ಇಲ್ಲಿಂದ ಕಥೆಯು ವಾರಣಾಸಿಗೆ ಮುಂದುವರೆಯುತ್ತದೆ. ವಾರಣಾಸಿ ಆಧ್ಯಾತ್ಮಿಕ ಮಹತ್ವದಲ್ಲಿ ಮುಳುಗಿರುವ ಸ್ಥಳವಾಗಿದ್ದು, ಮರಣಾನಂತರದ ಜೀವನದ ಬಗ್ಗೆ ತಿಳಿಸುತ್ತದೆ. ಮಣಿಕರ್ಣಿಕಾ ಘಾಟ್‌ನಲ್ಲಿನ ದೃಶ್ಯಗಳು ಜೀವನ ಮತ್ತು ಸಾವಿನ ಶಾಶ್ವತ ಚಕ್ರದ ಆಲೋಚನೆಗಳನ್ನು ಹುಟ್ಟುಹಾಕುತ್ತವೆ. ವಿಶೇಷವಾಗಿ ಅಘೋರಿ ಪಾತ್ರಗಳ ಪರಿಚಯದ ಸಮಯದಲ್ಲಿ 'ಓಂ ನಮಃ ಶಿವಾಯ' ಪಠಣವು ಧನಾತ್ಮಕತೆಯನ್ನು ಹೆಚ್ಚಿಸುತ್ತದೆ. ಅಘೋರಿಗಳ ಜೀವನದ ಬಗ್ಗೆ ವಿವರವಾಗಿ ತಿಳಿಸಲಾಗಿದೆ.

ಅಘೋರಿಯೊಂದಿಗೆ ಅರವಿಂದನ ಭೇಟಿಯಾಗುತ್ತದೆ.


# ರೂಪಾಂತರ' ಸಿನಿಮಾ ವಿಮರ್ಶೆ ನಾಲ್ಕು ಕಥೆಗಳ ಸಮ್ಮಿಲನ

## ಮನೋಜ್ಞ ನಿರೂಪಣೆಯಿಂದ ಪ್ರೇಕ್ಷಕರ ಮನ ಗೆದ್ದ ಮಿಥಿಲೇಶ್

**ಮಿಥಿಲೇಶ್ ಎಡವಲತ್ ನಿರ್ದೇಶನದ ರೂಪಾಂತರ ಸಿನಿಮಾದಲ್ಲಿ ರಾಜ್ ಬಿ ಶೆಟ್ಟಿ ಸೇರಿದಂತೆ ಹಲವು ಕಲಾವಿದರು ನಟಿಸಿದ್ದಾರೆ. ರೂಪಾಂತರ ಸಿನಿಮಾ ಹೆಸರೇ ಹೇಳುವಂತೆ ಕಥೆಯಲ್ಲಿ ಹಲವು ಬದಲಾವಣೆಗಳಿವೆ. ಗೂಡಿನಲ್ಲಿರುವ ಕ್ಯಾಟರ್ ಪಿಲ್ಲರ್ ಒಂದು ಚಿಟ್ಟೆಯಾಗಿ ಬದಲಾಗುತ್ತದೋ ಅಥವಾ ಗೂಡಿನಲ್ಲೇ ಕೊಳೆತು ಹೋಗುತ್ತದೋ ಎಂಬ ವಿಷಯವನ್ನು ಉದಾಹರಣೆ ತೆಗೆದುಕೊಂಡು ಸಿನಿಮಾ ಆರಂಭಿಸಲಾಗಿದೆ.**

ರೂಪಾಂತರ ನಾಲ್ಕು ಕಥೆಗಳ ಸಂಕಲನ. ಈ ಹಿಂದೆಯೂ ಕೂಡ ಒಂದೇ ಸಿನಿಮಾದಲ್ಲಿ ವಿಭಿನ್ನ ಕಥೆಗಳಿರುವ ಸಿನಿಮಾ ಬಂದಿದೆ, ಆದರೆ ಇದು ಸ್ವಲ್ಪ ಭಿನ್ನವಾಗಿದೆ. ನಾಲ್ಕು ಕಥೆಗಳನ್ನೂ ಸೇರಿಸಿ ಅಂತ್ಯದಲ್ಲಿ ಕ್ಲೈಮ್ಯಾಕ್ಸ್ ಕೊಟ್ಟಿದ್ದಾರೆ, ಹೀಗಾಗಿ ಇದೊಂದು ವಿಭಿನ್ನ ರೀತಿಯ ಸಿನಿಮಾವಾಗಿದೆ. ಕ್ಲೈಮ್ಯಾಕ್ಸ್ ಗಾಗಿ ಪ್ರೇಕ್ಷಕನನ್ನು ಹಿಡಿದಿಟ್ಟುಕೊಳ್ಳುತ್ತದೆ. ಸಿನಿಮಾ ಆರಂಭವಾಗುವುದು ವಯೋವೃದ್ಧರೊಬ್ಬರು ಕಥೆ ಹೇಳುವ ಮೂಲಕ. ಗತ ಕಾಲದ ಅವಶೇಷಗಳ ನಡುವೆ ಅಲೆದಾಡುವ ವೃದ್ಧ ಕಥೆ ಹೇಳುವ ಮೂಲಕ ಸಾಂತ್ವನ ಕಂಡುಕೊಳ್ಳುತ್ತಿರುತ್ತಾನೆ.

ನರಕಸದೃಶವಾದ ಒಂದು ಸಮಾಜ. ಭವಿಷ್ಯದ ಅಂತಹ ಲೋಕದಿಂದ ಸಿನಿಮಾ ಕಥೆ ಆರಂಭವಾಗುತ್ತದೆ. ಅಲ್ಲಿ ನೀರು, ಗಾಳಿ ಮಾರಾಟದ ವಸ್ತುವಾಗಿರುತ್ತದೆ. ಜನರ ಮಾರಣಹೋಮ ನಡೆಯುತ್ತಿದೆ. ಇಂತಹ ಸ್ಥಿತಿಯಲ್ಲಿ ಆ ಲೋಕವನ್ನಾಳುತ್ತಿರುವ ದುರುಳರ ಕೈಗೆ ಅಜ್ಜನೊಬ್ಬ ಸಿಕ್ಕಿಬೀಳುತ್ತಾನೆ. ಆತನ ಕೈಯಲ್ಲೊಂದು ಸಣ್ಣ ಪೆಟ್ಟಿಗೆ. ಆ ಪೆಟ್ಟಿಗೆಯೊಳಗೆ ಚಿಟ್ಟೆಯ ಕ್ಯಾಟರ್ ಪಿಲ್ಲರ್.




ತನ್ನ ಜೀವ ರಕ್ಷಿಸಿಕೊಳ್ಳಲು ಆತ ಹೇಳುವ ಕಥೆಯೇ 'ರೂಪಾಂತರ'.

ರೂಪಾಂತರ ತನ್ನನ್ನು ಒಂದು ಸಂಕಲನವಾಗಿ ಪ್ರಸ್ತುತಪಡಿಸಿದರೂ, ಕಥೆಗಳು ಸಾಮಾನ್ಯ ವಿಷಯದ ಸುತ್ತ ಹೆಣೆದುಕೊಂಡಿವೆ. ಪ್ರತಿಕೂಲತೆಯ ನಡುವೆ ವಿಮೋಚನೆ, ನ್ಯಾಯ ಮತ್ತು ಪ್ರೀತಿಗಾಗಿ ಮಾನವ ಹೋರಾಟದ ವಸ್ತುವನ್ನು ನಿರೂಪಣೆಯನ್ನು ಆಶ್ರಯವಾಗಿಟ್ಟುಕೊಂಡು ಧ್ವಂಸಗೊಂಡ ಪ್ರಪಂಚದ ಮೂಲಕ ಮುದುಕನ ಪ್ರಯಾಣವು ನಿರೂಪಣೆಗಳ ಕಾಲಾತೀತ ಶಕ್ತಿಯನ್ನು ಎತ್ತಿ ತೋರಿಸುತ್ತದೆ. ರೂಪಾಂತರ ಸಿನಿಮಾ ಆಳವಾಗಿ ಪರಿಣಾಮ ಬೀರುವ ಕಥೆಯನ್ನು ಹೊಂದಿದೆ.

ಕಥೆ ಎಷ್ಟೇ ಗಟ್ಟಿಯಾಗಿದ್ದರೂ ರೂಪಾಂತರ ಸಿನಿಮಾ ಕೂಡ ಕೊರತೆಗಳಿಂದ ಹೊರತಾಗಿಲ್ಲ, ಆರಂಭದಲ್ಲಿ ಸಿನಿಮಾ ನಿಧಾನಗತಿ ಎನಿಸುತ್ತದೆ. ಸಿನಿಮಾದ ಕೆಲವು ಕಡೆ ಕಥೆ ಪ್ರೇಕ್ಷಕನ ತಾಳ್ಮೆ ಬೇಡುತ್ತದೆ. ಪ್ರವೀಣ್ ಶ್ರೀಯಾನ್ ಛಾಯಾಗ್ರಹಣ ಮೋಡಿ ಮಾಡುತ್ತದೆ. ಉಳಿದಂತೆ ಹಿನ್ನೆಲೆ ಸಂಗೀತ ಉತ್ತಮವಾಗಿದೆ.

ಚಿತ್ರದಲ್ಲಿನ ಪ್ರತಿಯೊಬ್ಬ ನಟರು ತಮ್ಮ ಪಾತ್ರಗಳಿಗೆ ಜೀವ ತುಂಬಿದ್ದಾರೆ. ಮಿಥಿಲೇಶ್ ಮತ್ತು ರಾಜ್ ಬಿ ಶೆಟ್ಟಿ ಅವರ ಸಂಯೋಜಿತ ಪ್ರಯತ್ನಗಳು ಕಥೆಗೆ ಜೀವ ತುಂಬಿ ರೂಪಾಂತರವನ್ನು ಆಕರ್ಷಕ ಪ್ರಯಾಣವಾಗಿ ರೂಪಿಸಿವೆ. ಈ ಸಂಕೀರ್ಣವಾದ ನಿರೂಪಣೆಗಳ ಮಧ್ಯೆ, ನಿಗೂಢವಾದ ಕಥೆಗಾರನು ಎದ್ದು ಕಾಣುತ್ತಾನೆ, ಆಶ್ಚರ್ಯಕರ ತಿರುವು ನೀಡುತ್ತಾನೆ.ಯಾವುದೇ ಕಥೆಗೂ ನಿರ್ದಿಷ್ಟ ಅಂತ್ಯವಿಲ್ಲ, ರೂಪಾಂತರ ಆಗುವ ಘಳಿಗೆಯಲ್ಲಿ ಕಥೆ ಅಂತ್ಯವಾಗುತ್ತದೆ.

# ದಪ್ಪ ಮತ್ತು ಹೊಳೆಯುವ ಕೂದಲಿಗೆ ನೆಲ್ಲಿಕಾಯಿ, ಶುಂಠಿ ಮತ್ತು ಕರಿಬೇವಿನ ಪ್ರಯೋಜನಗಳು



**ಕೂದಲು ಉದುರುವ, ಬೇಗನೆ ಕೂದಲು ಬೆಳ್ಳಗೆ ಆಗುವ ಸಮಸ್ಯೆ ಅನೇಕರಿಗೆ ಇರುತ್ತದೆ. ಇವುಗಳಿಗೆ ಪರಿಹಾರಗಳು ನಮ್ಮ ಮನೆಯಲ್ಲಿಯೇ ಇದೆ. ಪ್ರಕೃತಿಯಲ್ಲಿ ಸಿಗುವ ನೆಲ್ಲಿಕಾಯಿ, ಶುಂಠಿ ಮತ್ತು ಕರಿಬೇವಿನ ಎಲೆಗಳಿಂದ ನೀವು ದಪ್ಪ, ಕಪ್ಪಾದ ಹೊಳೆಯುವ ಕೂದಲನ್ನು ಪಡೆಯಬಹುದು. ಕೂದಲ ರಕ್ಷಣೆಯಲ್ಲಿ ಇವುಗಳು ಅದ್ಭುತವಾಗಿ ಸಹಾಯ ಮಾಡುತ್ತವೆ**

### ನೆಲ್ಲಿಕಾಯಿ



ನೆಲ್ಲಿಕಾಯಿ ಶತಮಾನಗಳಿಂದಲೂ ಭಾರತದಲ್ಲಿ ಸಾಂಪ್ರದಾಯಿಕ ಆಯುರ್ವೇದ ಔಷಧದಲ್ಲಿ ಪ್ರಧಾನವಾಗಿದೆ. ಇದರಲ್ಲಿ ವಿಟಮಿನ್ ಸಿ ಅಂಶ ಹೇರಳವಾಗಿದೆ. ಕೊಲಾಜನ್ ಉತ್ಪಾದನೆಗೆ ಸಹಾಯ ಮಾಡುತ್ತದೆ, ಇದು ಕೂದಲು ಬಲಪಡಿಸುವ ಮತ್ತು ಬೆಳವಣಿಗೆಯನ್ನು ಉತ್ತೇಜಿಸುವ ಪ್ರೊಟೀನ್ ಆಗಿದೆ.

ಕೂದಲಿನ ಬೆಳವಣಿಗೆ

ನೆಲ್ಲಿಕಾಯಿ ಸೇವನೆಯಿಂದ ಕೂದಲು ಚೆನ್ನಾಗಿ ಬೆಳೆಯುತ್ತದೆ ಮತ್ತು ಕೂದಲು ಉದುರುವಿಕೆಯನ್ನು ತಡೆಯುತ್ತದೆ.

ಇದರಲ್ಲಿರುವ ವಿಟಮಿನ್ ಸಿ ಅಂಶ ನೆತ್ತಿನಲ್ಲಿ ರಕ್ತದ ಪರಿಚಲನೆಯನ್ನು ಹೆಚ್ಚಿಸುವುದರಿಂದ ಕೂದಲಿನ ಮೂಲಕ್ಕೆ ಪೋಷಕಾಂಶ ಸಿಗುತ್ತದೆ.

ಅಕಾಲಿಕ ಬಿಳಿಯಾಗುವುದನ್ನು ತಡೆಯುತ್ತದೆ

ನೆಲ್ಲಿಕಾಯಿಯನ್ನು ನಿಯಮಿತವಾಗಿ ಬಳಸುವುದರಿಂದ ಕೂದಲು ಅಷ್ಟು ಬೇಗನೆ ಬಿಳಿಯಾಗುವುದಿಲ್ಲ.

**ಕೂದಲಿನ ಬುಡವನ್ನು ಬಲಿಷ್ಠಗೊಳಿಸುತ್ತದೆ**

ನೆಲ್ಲಿಕಾಯಿಯಲ್ಲಿರುವ ಜೀವಸತ್ವಗಳು ಮತ್ತು ಖನಿಜಗಳು ಕೂದಲಿನ ಬೇರುಗಳನ್ನು ಬಲಪಡಿಸುತ್ತದೆ. ಕೂದಲು ಒಡೆಯುವಿಕೆ ಮತ್ತು ಕೂದಲು ತುದಿಯಲ್ಲಿ ವಿಭಜನೆಯಾಗುವುದನ್ನು ಕಡಿಮೆ ಮಾಡುತ್ತದೆ. ಕೂದಲು ದಪ್ಪವಾಗಿ ಬೆಳೆಯಲು ಸಹಾಯ ಮಾಡುತ್ತದೆ.

ಕರಿಬೇವು

### ಕರಿಬೇವು



ಕರಿಬೇವಿನ ಎಲೆಗಳು ಕೇವಲ ನಿಮ್ಮ ಭಕ್ಷ್ಯಗಳಿಗೆ ಪರಿಮಳವನ್ನು ನೀಡುವುದು ಮಾತ್ರವಲ್ಲದೆ, ಪೋಷಕಾಂಶಗಳ ಸಮೃದ್ಧವಾಗಿದ್ದು, ಕೂದಲಿನ ಆರೋಗ್ಯಕ್ಕೆ ಬಹಳ ಉತ್ತಮವಾಗಿದೆ.

**ಪೋಷಕಾಂಶಗಳಲ್ಲಿ ಸಮೃದ್ಧ:** ಕರಿಬೇವಿನ ಎಲೆಗಳು ಅಮೈನೋ ಆಮ್ಲಗಳು, ಉತ್ಕರ್ಷಣ ನಿರೋಧಕಗಳು ಮತ್ತು ಬೀಟಾ–ಕ್ಯಾರೋಟಿನ್ನಂತಹ ಅಗತ್ಯ ಪೋಷಕಾಂಶಗಳಿಂದ ತುಂಬಿರುತ್ತವೆ, ಇದು ಕೂದಲು ಉದುರಿ ತೆಳುವಾಗುವುದನ್ನು ತಡೆಯುತ್ತದೆ.

**ಕೂದಲು ಉದುರುವಿಕೆಯನ್ನು ತಡೆಯುತ್ತದೆ:** ಕರಿಬೇವಿನ ಎಲೆಗಳು ಅಮೈನೋ ಆಮ್ಲಗಳು ಮತ್ತು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿವೆ ಎಂದು ಅಧ್ಯಯನಗಳು ತೋರಿಸುತ್ತವೆ, ಇದು ನೆತ್ತಿಯನ್ನು ಪೋಷಿಸಲು ಮತ್ತು ಕೂದಲು ಕಿರುಚೀಲಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ,.

**ಹೊಳಪು ನೀಡುತ್ತದೆ:** ಕರಿಬೇವಿನ ಎಲೆಗಳನ್ನು ನಿಯಮಿತವಾಗಿ ಬಳಸುವುದರಿಂದ ನಿಮ್ಮ ಕೂದಲಿಗೆ ನೈಸರ್ಗಿಕ ಹೊಳಪನ್ನು ನೀಡುತ್ತದೆ. ಎಲೆಗಳಲ್ಲಿರುವ ಉತ್ಕರ್ಷಣ ನಿರೋಧಕಗಳು ಹಾನಿಗೊಳಗಾದ ಕೂದಲನ್ನು ಸರಿಪಡಿಸುವುದರ ಜೊತೆಗೆ ನೈಸರ್ಗಿಕ ಹೊಳಪನ್ನು ನೀಡುತ್ತದೆ.

ಹೀಗೆ ನೆಲ್ಲಿಕಾಯಿ, ಶುಂಠಿ ಮತ್ತು ಕರಿಬೇವಿನ ಎಲೆಗಳನ್ನು ಒಟ್ಟಿಗೆ ಆಹಾರಗಳಲ್ಲಿ ಸೇರಿಸಿ ಆಗಾಗ ತಿನ್ನುವುದು ಸಹ ಉತ್ತಮವಾಗಿದೆ.

### ಶುಂಠಿ




ಶುಂಠಿ, ಅದರ ರುಚಿಕರವಾದ ಸುವಾಸನೆಯುಕ್ತ ಪದಾರ್ಥ. ಕೇವಲ ಅಡುಗೆಮನೆಯ ಆಹಾರಕ್ಕಿಂತ ಮಿಗಿಲಾಗಿ ಇದರಲ್ಲಿ ಆಯುರ್ವೇದ ಔಷಧಿಯ ಗುಣವಿದೆ. ಪ್ರಬಲ ಉರಿಯೂತದ ಮತ್ತು ನಂಜುನಿರೋಧಕ ಗುಣಗಳನ್ನು ಹೊಂದಿದ್ದು ನೆತ್ತಿ ಮತ್ತು ಕೂದಲ ಬುಡಕ್ಕೆ ಉತ್ತಮ.

**ತಲೆಹೊಟ್ಟು ನಿವಾರಕ:** ಶುಂಠಿಯಲ್ಲಿರುವ ನಂಜುನಿರೋಧಕ ಗುಣಲಕ್ಷಣಗಳು ತಲೆಹೊಟ್ಟು ಮತ್ತು ತುರಿಕೆಯನ್ನು ನಿವಾರಿಸುತ್ತದೆ. ಇವುಗಳನ್ನು ನಮ್ಮ ಆಹಾರದಲ್ಲಿ ನಿತ್ಯ ಬಳಸುವುದರಿಂದ ನೆತ್ತಿಯನ್ನು ಸ್ವಚ್ಛವಾಗಿ ಮತ್ತು ಆರೋಗ್ಯಕರವಾಗಿ ಇರಿಸಿ ಕೂದಲಿನ ಬೆಳವಣಿಗೆಗೆ ಸಹಾಯ ಮಾಡುತ್ತದೆ.

**ಕೂದಲು ಉದುರುವುದನ್ನು ತಡೆಯುತ್ತದೆ:** ಶುಂಠಿಯು ಆಂಟಿಆಕ್ಸಿಡೆಂಟ್ಗಳನ್ನು ಹೊಂದಿದ್ದು ಅದು ಕೂದಲಿನ ಕೋಶಗಳನ್ನು ಹಾನಿಯಾಗದಂತೆ ರಕ್ಷಿಸುತ್ತದೆ. ಇದು ಕೂದಲಿನ ಎಳೆಗಳನ್ನು ಬಲಪಡಿಸಿ ಕೂದಲು ಉದುರುವಿಕೆಯನ್ನು ಕಡಿಮೆ ಮಾಡುತ್ತದೆ, ದಪ್ಪ ಕೂದಲು ಬೆಳೆಯಲು ಸಹಾಯ ಮಾಡುತ್ತದೆ.

# ಸೊಳ್ಳೆಯಿಂದ ಹರಡುವ ರೋಗಗಳಿವು, ನರಮಂಡಲದ ಮೇಲೂ ಪರಿಣಾಮ ಬೀರಬಹುದು ಎಚ್ಚರ!




ಸೊಳ್ಳೆಗಳು, ಸಾಮಾನ್ಯವಾಗಿ ಕೇವಲ ಕೀಟಗಳು, ಕಚ್ಚಿದರೆ ರಕ್ತ ಹೋಗಬಹುದು, ಹೆಚ್ಚೆಂದರೆ ಮಲೇರಿಯಾ, ಡೆಂಗ್ಯೂನಂತಹ ಜ್ವರ ಬರಬಹುದು ಎಂದು ಬಹುತೇಕರು ಭಾವಿಸುತ್ತಾರೆ. ವಾಸ್ತವವಾಗಿ ಮಾನವನ ಆರೋಗ್ಯಕ್ಕೆ ಗಂಭೀರ ಅಪಾಯವನ್ನುಂಟುಮಾಡುವ ಹಲವು ರೋಗಗಳಿಗೆ ವಾಹಕಗಳಾಗಿವೆ. ಮಲೇರಿಯಾ ತಡೆಗಟ್ಟುವ ಮತ್ತು ಜ್ವರಗಳ ವಿರುದ್ಧ ಹೋರಾಡುವ ಔಷಧಿಗಳ ಅಭಿವೃದ್ಧಿಯಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಲಾಗಿದೆಯಾದರೂ, ಈ ಕಾಯಿಲೆಗಳಿಂದ ಬರುವ ನರವೈಜ್ಞಾನಿಕ ತೊಡಕುಗಳಿಗೆ ಹೆಚ್ಚು ಪರಿಣಾಮಕಾರಿ ಚಿಕಿತ್ಸೆಗಳ ಅವಶ್ಯಕತೆಯಿದೆ. ಹೆಚ್ಚುವರಿಯಾಗಿ, ಈ ಕಾಯಿಲೆಗಳು ಮೆದುಳು ಮತ್ತು ನರಮಂಡಲದ ಮೇಲೆ ಪರಿಣಾಮ ಬೀರುವ ಕಾರ್ಯವಿಧಾನಗಳನ್ನು ಅರ್ಥಮಾಡಿಕೊಳ್ಳಲು ಹೆಚ್ಚಿನ ಸಂಶೋಧನೆ ಅಗತ್ಯವಿದೆ.

ಸೊಳ್ಳೆಗಳು ನರವೈಜ್ಞಾನಿಕ ತೊಡಕುಗಳನ್ನುಂಟುಮಾಡುವುದನ್ನು ತಗ್ಗಿಸಲು ಸೊಳ್ಳೆಯಿಂದ ಹರಡುವ ರೋಗಗಳನ್ನು ತಡೆಗಟ್ಟುವುದು ನಿರ್ಣಾಯಕವಾಗಿದೆ. ಮೈ ಕೈಗೆ ಸೊಳ್ಳೆಗಳು ಕಚ್ಚದಂತೆ ನೋಡಿಕೊಳ್ಳಿ. ಕೀಟ ನಿವಾರಕವನ್ನು ಬಳಸಿ. ಮೈತುಂಬಾ ಬಟ್ಟೆ ಧರಿಸಿ. ಸೊಳ್ಳೆಗಳು ಕಚ್ಚದಂತೆ ಸೊಳ್ಳೆ ಪರದೆಗಳನ್ನು ಬಳಸುವುದು ಸೇರಿದಂತೆ ವೈಯಕ್ತಿಕ ರಕ್ಷಣಾ ಕ್ರಮಗಳು ಮತ್ತು ತಂತ್ರಗಳನ್ನು ಪಾಲಿಸಿ.

ಮನೆ ಸುತ್ತಮುತ್ತ ವಿಶೇಷವಾಗಿ ಮಳೆಗಾಲದಲ್ಲಿ ನೀರು ನಿಂತುಕೊಳ್ಳದಂತೆ ನೋಡಿಕೊಳ್ಳಿ. ಸೊಳ್ಳೆ ಉತ್ಪತ್ತಿ ತಾಣಗಳನ್ನು ನಿರ್ಮೂಲನೆ ಮಾಡುವಂತಹ ಪರಿಸರ ಕ್ರಮಗಳು, ಸಾರ್ವಜನಿಕ ಆರೋಗ್ಯ ಕ್ರಮಗಳಾದ ವೆಕ್ಟರ್ ನಿಯಂತ್ರಣ ಕಾರ್ಯಕ್ರಮ ಮತ್ತು ಲಸಿಕೆ ಅಭಿಯಾನವನ್ನು ಕೈಗೊಳ್ಳಿ.

ಡೆಂಗ್ಯೂ ಮತ್ತು ಮಲೇರಿಯಾಗಳನ್ನು ಮೀರಿ ನರಗಳ ಮೇಲೆ ಹರಡುವ ಕಾಯಿಲೆಗಳಲ್ಲಿ ವೆಸ್ಟ್ ನೈಲ್ ವೈರಸ್ ಮತ್ತು ಜಪಾನೀಸ್ ಎನ್ಸೆಫಾಲಿಟಿಸ್ ನಂತಹ ಇತರ ಸೊಳ್ಳೆಯಿಂದ ಹರಡುವ ವೈರಸ್ ಗಳು ಎನ್ಸೆಫಾಲಿಟಿಸ್, ಮೆನಿಂಜೈಟಿಸ್ ಮತ್ತು ಪಾರ್ಶ್ವವಾಯು ಸೇರಿದಂತೆ ನರಗಳಿಗೆ ಅನೇಕ ತೊಡಕುಗಳನ್ನು ಉಂಟುಮಾಡಬಹುದು. ಈ ಪರಿಸ್ಥಿತಿಗಳು ಅರಿವಿನ ದೌರ್ಬಲ್ಯ, ರೋಗಗಳನ್ನು ಉತ್ಬಣಗೊಳಿಸುವಿಕೆ ಮತ್ತು ಸುಸ್ತು ಮತ್ತು ಸ್ನಾಯು ನಿಯಂತ್ರಣಗಳ ಕೊರತೆಯಂತಹ ದೀರ್ಘಕಾಲೀನ ಪರಿಣಾಮಗಳನ್ನು ಉಂಟುಮಾಡಬಹುದು.

ಈಡಿಸ್ ಸೊಳ್ಳೆಗಳಿಂದ ಹರಡುವ ವೈರಲ್ ಸೋಂಕು, ನರವೈಜ್ಞಾನಿಕ ಪರಿಣಾಮಗಳನ್ನು ಬೀರುವ ಸೊಳ್ಳೆಯಿಂದ ಹರಡುವ ಮತ್ತೊಂದು ಕಾಯಿಲೆಯಾಗಿದೆ. ಹೆಚ್ಚಿನ ಡೆಂಗ್ಯೂ ಸೋಂಕುಗಳು ಜ್ವರ, ತಲೆನೋವು ಮತ್ತು ಸ್ನಾಯು ನೋವಿನಂತಹ ಸೌಮ್ಯ ಲಕ್ಷಣಗಳಿಗೆ ಕಾರಣವಾಗಿದ್ದರೂ, ಕೆಲವು ಪ್ರಕರಣಗಳಲ್ಲಿ ತೀವ್ರ ಸ್ವರೂಪ ಪಡೆಯಬಹುದು.

ಇದು ರಕ್ತಸ್ರಾವ, ಅಂಗ ಹಾನಿ ಮತ್ತು ತುಲನಾತ್ಮಕವಾಗಿ ಆಘಾತವನ್ನು ಉಂಟುಮಾಡುತ್ತದೆ. ಡೆಂಗ್ಯೂವಿನಿಂದ ಉಂಟಾಗುವ ನರವೈಜ್ಞಾನಿಕ ತೊಡಕುಗಳು ಬರುವುದು ಅಪರೂಪ ಆದರೆ ತೀವ್ರ ಸ್ವರೂಪವಾಗಿರುತ್ತದೆ. ಈ ತೊಡಕುಗಳಲ್ಲಿ ಎನ್ಸೆಫಾಲಿಟಿಸ್ (ಮೆದುಳಿನ ಉರಿಯೂತ), ಮೆನಿಂಜೈಟಿಸ್ ( ಮೆದುಳು ಮತ್ತು ಬೆನ್ನುಹುರಿಯ ಸುತ್ತಲಿನ ರಕ್ಷಣಾತ್ಮಕ ಪೊರೆಗಳು ಮೆನಿಂಜಸ್ ಉರಿಯೂತ) ಮತ್ತು ಪಾರ್ಶ್ವವಾಯು ಉಂಟುಮಾಡುವ ಸ್ಥಿತಿಯಾದ ಗುಯಿಲಿನ್–ಬಾರ್ರೆ ಸಿಂಡ್ರೋಮ್ ಆಗುತ್ತವೆ.

ಮಲೇರಿಯಾ ಜ್ವರ ಅನಾಫಿಲಿಸ್ ಸೊಳ್ಳೆಯಿಂದ ಹರಡುವ ಪರಾವಲಂಬಿ ಸೋಂಕು, ಇದು ಮನುಷ್ಯನ ಮೆದುಳಿನ ನರಗಳ ಮೇಲೆ ಸಾಕಷ್ಟು ಪರಿಣಾಮ ಬೀರುತ್ತದೆ. ಮಲೇರಿಯಾ ಪರಾವಲಂಬಿ ಮೆದುಳಿನ ಮೇಲೆ ದಾಳಿ ಮಾಡಿದಾಗ ಸೆರೆಬ್ರಲ್ ಮಲೇರಿಯಾ ಇದರ ಅತ್ಯಂತ ಅಪಾಯಕಾರಿ ರೂಪ ತಾಳುತ್ತದೆ.

### ಸಮಸ್ಯೆಗಳು:

**ಇದರಿಂದ ತೀವ್ರವಾದ ತಲೆನೋವು, ವರ್ತನೆಯಲ್ಲಿ ಗೊಂದಲದ ಲಕ್ಷಣಗಳು, ರೋಗಗ್ರಸ್ತವಾಗುವಿಕೆಗಳು, ಕೋಮಾ ಮತ್ತು ಸಾವು ಸೇರಿದಂತೆ ಹಲವಾರು ನರವೈಜ್ಞಾನಿಕ ಅಪಾಯಗಳು ಕೂಡ ಎದುರಾಗಬಹುದು. ಅನಾಫಿಲಿಸ್ ಸೊಳ್ಳೆ ಪರಾವಲಂಬಿಯಿಂದ ಮಿದುಳಿಗೆ ಹಾನಿಯಾಗುತ್ತದೆ. ಉರಿಯೂತ, ಮೆದುಳಿಗೆ ರಕ್ತ ಸಂಚಾರಕ್ಕೆ ಅಡ್ಡಿ ಮತ್ತು ಮೆದುಳಿನ ಕೋಶಗಳ ಮೇಲೆ ನೇರವಾಗಿ ಆಕ್ರಮಣ ಮಾಡುತ್ತದೆ**

# ದಿನಾ ರಾತ್ರಿ ಬಿಯರ್ ಕುಡಿಯುವ ಅಭ್ಯಾಸ ದಿಂದಾಗುವ ಪರಿಣಾಮ

ಆಲ್ಕೋಹಾಲ್ ದೇಹಕ್ಕೆ ತುಂಬಾ ಹಾನಿಯನ್ನು ಉಂಟು ಮಾಡುವುದು ಎಂದು ತಿಳಿದಿದ್ದರೂ ಕೆಲವರು ನಿತ್ಯವೂ ಅದನ್ನು ಕುಡಿಯುವರು. ಇದರಿಂದ ಆರೋಗ್ಯಕ್ಕೆ ಹಾನಿ ಆಗುವುದು ಮಾತ್ರವಲ್ಲದೆ, ಮಾನಸಿಕ ನೆಮ್ಮದಿಯು ದೂರವಾಗುವುದು. ಅದರಲ್ಲೂ ಇಂದಿನ ಯುವ ಸಮುದಾಯವು ಬಿಯರ್ ಅನ್ನು ಹೆಚ್ಚು ಮೆಚ್ಚಿಕೊಂಡಿದೆ.

ಆದರೆ ನಿತ್ಯವೂ ಬಿಯರ್ ಸೇವನೆ ಮಾಡಿದರೆ ಆಗ ಇದರಿಂದ ಹಾನಿಯಾಗುವುದು ನಿಶ್ಚಿತ. ನಿತ್ಯವೂ ಬಿಯರ್ ಸೇವನೆ ಮಾಡಿದರೆ, ಆಗ ಇದರಿಂದ ಯಕೃತ್ ಗೆ ಹಾನಿಯಾಗುವುದು. ಇದರ ಪರಿಣಾಮವಾಗಿ ದೇಹದಲ್ಲಿ ವಿಷಕಾರಿ ಅಂಶಗಳು ಜಮೆಯಾಗಿ, ಇನ್ನಿತರ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಬಹುದು.

ವಿಷಕಾರಿ ಅಂಶಗಳನ್ನು ಹೊರಗೆ ಹಾಕಲು, ಚಯಾಪಚಯ ಮತ್ತು ಪೋಷಕಾಂಶಗಳನ್ನು ಜಮೆ ಮಾಡುವಲ್ಲಿ ಯಕೃತ್ ಪ್ರಮುಖ ಪಾತ್ರ ವಹಿಸುವುದು. ನಿತ್ಯವೂ ಬಿಯರ್ ಕುಡಿದರೆ, ಅದರಲ್ಲೂ ರಾತ್ರಿ ವೇಳೆ ಇದನ್ನು ಕುಡಿದರೆ, ಆಗ ಅದು ಯಕೃತ್ ಗೆ ಹಾನಿ ಉಂಟು ಮಾಡುವುದು.ಆಲ್ಕೋಹಾಲ್ ನ್ನು ವಿಘಟಿಸುವಲ್ಲಿ ಯಕೃತ್ ಮಾತ್ರ ಕೆಲಸ ಮಾಡುವುದು. ನಿತ್ಯವೂ ಇದನ್ನು ಸೇವನೆ ಮಾಡಿದರೆ, ಆಗ ಇದರಿಂದ ಯಕೃತ್ ಹೆಚ್ಚುವರಿ ಕೆಲಸ ಮಾಡಬೇಕಾಗುತ್ತದೆ. ಇದರಿಂದ ಯಕೃತ್ ಗೆ ಹಾನಿಯಾಗಬಹುದು. ಅತಿಯಾಗಿ ಸೇವನೆ ಮಾಡಿದರೆ, ಆಗ ಇದು ಯಕೃತ್ ನ ಅಂಗಾಂಶಗಳಲ್ಲಿ ಉರಿಯೂತ ಉಂಟು ಮಾಡಬಹುದು. ಇದರ ಪರಿಣಾಮ ಫ್ಯಾಟಿ ಲಿವರ್ ಕಾಯಿಲೆ, ಆಲ್ಕೋಹಾಲಿಕ್ ಹೆಪಟೈಟಿಸ್ ಅಥವಾ ಸಿರೋಸಿಸ್ ಕಾಡಬಹುದು.ನಿತ್ಯವೂ ಬಿಯರ್ ಸೇವನೆ ಮಾಡಿದರೆ ಆಗ ಇದರಿಂದ ದೇಹದಲ್ಲಿ



ಕೊಬ್ಬಿನಾಂಶವು ಜಮೆ ಆಗುವುದು ಮತ್ತು ಇದರಿಂದ ಫ್ಯಾಟಿ ಲಿವರ್ ಸಮಸ್ಯೆಯು ಕಾಡಬಹುದು.

ನಿಯಮಿತವಾಗಿ ಬಿಯರ್ ಕುಡಿದರೆ, ಆಗ ಯಕೃತ್ ಆಲ್ಕೋಹಾಲ್ ನ್ನು ವಿಘಟನೆ ಮಾಡುವಲ್ಲಿ ಗಮನಕೇಂದ್ರೀಕರಿಸುವುದು ಮತ್ತು ಇದರಿಂದ ಕೊಬ್ಬು ಸರಿಯಾದ ಪ್ರಕ್ರಿಯೆಗೆ ಒಳಪಡದೆ ಇರುವ ಕಾರಣ ಅತಿಯಾಗಿ ಕೊಬ್ಬು ಜಮೆಯಾಗುವುದು ಮತ್ತು ಲಿವರ್ ಊದಿಕೊಳ್ಳುವುದು. ದೀರ್ಘಕಾಲ ಇದಕ್ಕೆ ಸರಿಯಾದ ಚಿಕಿತ್ಸೆ ನೀಡದೆ ಇದ್ದರೆ ಆಗ ಇದರಿಂದ ಇನ್ನಷ್ಟು ಆರೋಗ್ಯ ಸಮಸ್ಯೆಗಳು ಕಾಡಬಹುದು.

ನಿತ್ಯವೂ ಬಿಯರ್ ಕುಡಿದರೆ, ಆಗ ಇದರಿದ ಗಂಭೀರ ಆರೋಗ್ಯ ಸಮಸ್ಯೆ ಯಾಗಿರುವ ಆಲ್ಕೋಹಾಲಿಕ್ ಹೆಪಟೈಟಿಸ್ ಬರಬಹುದು. ಅತಿಯಾಗಿ ಆಲ್ಕೋಹಾಲ್ ಸೇವನೆ ಮಾಡುವ ಕಾರಣದಿಂದಾಗಿ ಯಕೃತ್ ಉರಿ ಯೂತಕ್ಕೆ ಒಳಗಾಗಬಹುದು. ಇದರ ಕೆಲವು ಲಕ್ಷಣಗಳೆಂದರೆ ಕಾಮಾಲೆ, ಹೊಟ್ಟೆ ನೋವು ಮತ್ತು ಯಕೃತ್ ವೈಫಲ್ಯ.ನಿತ್ಯವೂ ಬಿಯರ್ ಕುಡಿದರೆ, ಆಗ ಇದರಿಂದ ಲಿವರ್ ಸಿರೋಸಿಸ್ ಉಂಟಾಗಬಹುದು. ತುಂಬಾ ಅತಿಯಾಗಿ ನಿತ್ಯವೂ ಆಲ್ಕೋಹಾಲ್ ಸೇವಿಸಿದರೆ ಆಗ ಇದರಿಂದ ಸಿರೋಸಿಸ್ ಉಂಟಾಗಬಹುದು.

# ಹಾರ್ಟ್ ಬ್ಲಾಕೇಜ್ ಆಗದಂತೆ ತಡೆದು ಹೃದಯದ ಆರೋಗ್ಯ ಕಾಪಾಡುವ ಗಿಮೂಲಿಕೆ ಚಹಾಗಳಿವು

ಹೃದಯ ಸಂಬಂಧಿ ಸಮಸ್ಯೆಗಳು ಕಾಡಿದರೆ, ಆಗ ಜೀವನವೇ ದುಸ್ತರವೆನಿಸುವುದು. ಯಾವಾಗ ಅಪಾಯ ಬರುವುದೋ ಎನ್ನುವ ಭೀತಿ ಮನದ ಮೂಲೆಯಲ್ಲಿ ಇದ್ದೇ ಇರುತ್ತದೆ. ಇದಕ್ಕಾಗಿ ನಮ್ಮ ಜೀವನಶೈಲಿ, ಆಹಾರ ಕ್ರಮ ಇತ್ಯಾದಿಗಳನ್ನು ಬದಲಾಯಿಸಿಕೊಂಡರೆ, ಆಗ ಖಂಡಿತವಾಗಿಯೂ ನಮ್ಮ ಹೃದಯದ ಆರೋಗ್ಯ ಕಾಪಾಡಿಕೊಳ್ಳಬಹುದು. ಅದರಲ್ಲೂ ರಕ್ತದಲ್ಲಿ ಕೊಲೆಸ್ಟ್ರಾಲ್, ಕೊಬ್ಬು, ಇತ್ಯಾದಿ ವಿಷಕಾರಿ ಅಂಶಗಳು ಹೆಚ್ಚಾಗಿ ರಕ್ತನಾಳದಲ್ಲಿ ಜಮೆಯಾಗಿ ಬ್ಲಾಕ್ ಆಗಬಹುದು. ಈ ಸಂದರ್ಭದಲ್ಲಿ ರಕ್ತನಾಳ ವನ್ನು ಶುಚಿ ಮಾಡಲು ಕೆಲವೊಂದು ಮನೆಮದ್ದುಗಳನ್ನು ಬಳಕೆ ಮಾಡಿದರೆ ತುಂಬಾ ಒಳ್ಳೆಯದು. ಬೆಳಗ್ಗೆ ನೀವು ಸಾಮಾನ್ಯ ಚಹಾ ಕುಡಿಯುವ ಬದಲು ಈ ಗಿಡಮೂಲಿಕೆ ಚಹಾಗಳನ್ನು ಕುಡಿದರೆ, ಆಗ ಇದರಿಂದ ರಕ್ತನಾಳದಲ್ಲಿ ಇರುವ ವಿಷಕಾರಿ ಅಂಶಗಳನ್ನು ಹೊರಗೆ ಹಾಕುವುದು ಮತ್ತು ರಕ್ತ ಶುದ್ಧೀಕರಿಸಿ, ಹೃದಯದ ಆರೋಗ್ಯ ಕಾಪಾಡುವುದು.

ಗ್ರೀನ್ ಟೀ ಬಗ್ಗೆ ಹೆಚ್ಚು ವಿವರವೇ ಅಗತ್ಯವಿಲ್ಲ!ಯಾಕೆಂದರೆ ಇಂದಿನ ದಿನಗಳಲ್ಲಿ ಇದು ತುಂಬಾ ಟ್ರೆಂಡ್ ಆಗುತ್ತಿರುವ ಪಾನೀಯ ಇದು.

ಈ ಚಹಾದ ಬಗ್ಗೆ ಆರೋಗ್ಯ ತಜ್ಞರು ಹೇಳುವ ಪ್ರಕಾರ ಹಾಲು ಹಾಕದೆ ಕುಡಿಯುವ ಗ್ರೀನ್ ಟೀ ನಮ್ಮ ದೇಹದ ಕೆಟ್ಟ ಕೊಬ್ಬಿನಾಂಶವನ್ನು ಕರಗಿಸುವುದು ಮಾತ್ರವಲ್ಲದೆ, ಹೃದಯದ ಆರೋಗ್ಯವನ್ನು ಕಾಪಾಲು ನೆರವಾಗುತ್ತದೆ. ಪ್ರಮುಖವಾಗಿ ಮುಂಜಾನೆಯ ಸಮಯದಲ್ಲಿ ಖಾಲಿ ಹೊಟ್ಟೆಗೆ ತಿಂಡಿ ತಿನ್ನುವ ಮುಂಚೆ ನಿಂಬೆಹಣ್ಣು ಮಿಶ್ರಿತ ಗ್ರೀನ್ ಟೀ ಕುಡಿಯುವ ಅಭ್ಯಾಸ ಮಾಡಿಕೊಂಡರೆ ಆರೋಗ್ಯಕ್ಕೆ ಇನ್ನೂ ಒಳ್ಳೆಯದು.

ಇಲ್ಲಿ ಮುಖ್ಯವಾಗಿ ಗಮನಿಸಬೇಕಾದ ಸಂಗತಿ



ಏನೆಂದ್ರೆ ಈ ಪಾನೀಯದಲ್ಲಿ ಆಂಟಿ ಆಕ್ಸಿಡೆಂಟ್ ಅಂಶಗಳು ಹೇರಳವಾಗಿ ಕಂಡು ಬರುವುದರಿಂದ ನಮ್ಮ ದೇಹದಲ್ಲಿರುವ ಪ್ರಮುಖ ಜೀವಕೋಶಗಳನ್ನು ಆಕ್ಸಿಡೆಟೀವ್ ಹಾನಿಯಿಂದ ರಕ್ಷಣೆ ಮಾಡುತ್ತದೆ.

? ಅಲ್ಲದೆ ಕ್ಯಾಟಿಚಿನ್ ಎನ್ನುವ ಪ್ರಬಲ ಆ?ಯಂಟಿಆಕ್ಸಿಡೆಂಟ್ ಅಂಶವು ಕೊಲೆಸ್ಟ್ರಾಲ್ ಕಡಿಮೆ ಮಾಡುವುದು ಮತ್ತು ರಕ್ತ ಸಂಚಾರವನ್ನು ಸುಧಾರಣೆ ಮಾಡುವುದು. ಇದರಿಂದ ರಕ್ತನಾಳವು ಆರೋಗ್ಯವಾಗಿರುವುದು. ಬೆಳಗ್ಗೆ ಒಂದು ಕಪ್ ಗ್ರೀನ್ ಟೀ ಕುಡಿದರೆ ಆಗ ಇದು ರಕ್ತನಾಳದಲ್ಲಿನ ವಿಷಕಾರಿ ಅಂಶವನ್ನು ಹೊರಗೆ ಹಾಕುವುದು.ತಾಜಾವಾಗಿ ತಯಾರಿಸಿದ ದಾಸವಾಳದ ಚಹಾ ಕುಡಿದರೆ ಆಗ ಇದು ನೈಸರ್ಗಿಕ ರೀತಿಯಿಂದ ರಕ್ತನಾಳವನ್ನು ಶುದ್ಧೀಕರಿ ಸುವುದು. ಆಂಥೋಸಯಾನಿನ್ ಗಳು ಮತ್ತು ಪಾಲಿಫಿನಾಲ್ ಗಳು ದಾಸವಾಳದ ಚಹಾದಲ್ಲಿ ಉತ್ತಮ ಪ್ರಮಾಣದಲ್ಲಿದ್ದು,ಇದು ರಕ್ತದೊತ್ತಡ ಹಾಗೂ ಕೊಲೆಸ್ಟ್ರಾಲ್ ತಗ್ಗಿಸುವುದು.

ಈ ಬಗ್ಗೆ ಸಂಶೋಧನೆಗಳು ಹೇಳುವ ಹಾಗೆ ರಕ್ತದ ಒತ್ತಡದ ಸಮಸ್ಯೆಯಿಂದ ಬಳಲುತ್ತಿರುತ್ತಾರೆ, ಅಂತಹವರು ಇನ್ನು ಮುಂದೆ ದಾಸವಾಳ ಚಹಾ ಸೇವನೆ ಮಾಡುವ ಅಭ್ಯಾಸ ಇಟ್ಟುಕೊಳ್ಳಬೇಕು ಎಂದು ಸಲಹೆ ನೀಡುತ್ತಾರೆ.

# ಮನೆಯಲ್ಲಿರುವ ತುಳಸಿ ಗಿಡ ಒಣಗಬಾರದೆಂದರೆ ಈ ಟಿಪ್ಸ್ ಅನುಸರಿಸಿ



ಬಹುತೇಕ ಹಿಂದೂಗಳ ಮನೆಗಳಲ್ಲಿ ತುಳಸಿ ಗಿಡಗಳನ್ನು ಕಾಣಬಹುದು. ಹಿಂದೂ ಧರ್ಮದಲ್ಲಿ ತುಳಸಿ ಗಿಡಕ್ಕೆ ಹೆಚ್ಚಿನ ಮಹತ್ವವಿದೆ. ಅಷ್ಟೇ ಅಲ್ಲದೆ ಆಯುರ್ವೇದಿಕ್ ಗುಣಗಳನ್ನು ಹೊಂದಿರುವ ಇದು ಔಷಧಿಯಾಗಿಯೂ ಬಳಸಲಾಗುತ್ತದೆ. ತುಳಸಿ ಗಿಡದ ಆರೈಕೆ ಮಾಡಿದ್ರೆ ಮಾತ್ರ ತುಳಸಿ ಚೆನ್ನಾಗಿ ಬೆಳೆಯುತ್ತದೆ. ಆದರೆ ಕೆಲವರು ಎಷ್ಟೇ ಆರೈಕೆ ಮಾಡಿದರೂ ತುಳಸಿ ಗಿಡ ಬೆಳೆಯೋದೇ ಇಲ್ಲ. ಒಣಗಿ ಹೋಗುತ್ತದೆ. ನೀವೂ ಇಂತಹದ್ದೇ ಸಮಸ್ಯೆಯನ್ನು ಎದುರಿಸುತ್ತಿದ್ದರೆ ಇಲ್ಲಿದೆ ನಿಮಗಾಗಿ ಕೆಲವು ಟಿಪ್ಸ್.

ಮಣ್ಣು ಮತ್ತು ನೀರನ್ನು ಪರೀಕ್ಷಿಸಿ

ಹಾಲು ಸಿಂಪಡಿಸಿ

ಗೊಬ್ಬರ ಬಳಸಿ

ಈ ವಿಷಯಗಳನ್ನು ನೆನಪಿನಲ್ಲಿಡಿ

ಮಳೆಗಾಲದಲ್ಲಿ ತುಳಸಿ ಗಿಡದಲ್ಲಿ ನೀರು ತುಂಬಿಕೊಂಡರೆ ತಕ್ಷಣ ಖಾಲಿ ಮಾಡಿ. ಏಕೆಂದರೆ ಹೆಚ್ಚುವರಿ ನೀರಿನಿಂದ, ಎಲೆಗಳು ಸಸ್ಯದಿಂದ ಬೀಳಲು ಪ್ರಾರಂಭಿಸುತ್ತವೆ ಮತ್ತು ಇದರಿಂದಾಗಿ ಸಸ್ಯವು ಬೇಗನೆ ಒಣಗಲು ಪ್ರಾರಂಭಿಸುತ್ತದೆ. ತುಳಸಿ ಸಸ್ಯದ ಮಣ್ಣು ತೇವಗೊಂಡಿದ್ದರೆ, ನಂತರ ಅದನ್ನು ಒಣ ಮಣ್ಣು ಮತ್ತು ಮರಳಿನಿಂದ ತುಂಬಿಸಿ. ಇದರೊಂದಿಗೆ, ಸಸ್ಯದ ಬೇರುಗಳು ಮತ್ತೆ ಉಸಿರಾಡಲು ಪ್ರಾರಂಭಿಸುತ್ತವೆ ಮತ್ತು ಸಸ್ಯವು ಹಸಿರಾಗುತ್ತದೆ.

# ನುಗ್ಗೆ ಸೊಪ್ಪನ್ನು ನಿಮ್ಮ ಆಹಾರದಲ್ಲಿ ಸೇರಿಸುವುದು ಒಳ್ಳೆಯದು



**ಮೊರಿಂಗಾ** ಎಂದು ಕರೆಯಲ್ಪಡುವ ನುಗ್ಗೆಸೊಪ್ಪಿನಲ್ಲಿ ಹಲವಾರು ರೀತಿಯ ಆರೋಗ್ಯಕಾರಿ ಪ್ರಂಯೋಜನಗಳಿವೆ. ಇದು ಕೂದಲು ಮತ್ತು ಚರ್ಮವನ್ನು ರಕ್ಷಿಸುವುದು ಮತ್ತು ಪೋಷಿಸುವುದು, ಊತಕ್ಕೆ ಚಿಕಿತ್ಸೆ ನೀಡುವಲ್ಲಿ ಮಹತ್ತರ ಪಾತ್ರವಹಿಸುತ್ತದೆ , ಅಲ್ಲದೆ, ಜೀರ್ಣಾಂಗ ಕ್ರಿಯೆಯಲ್ಲಿಯೂ ಸಹಾಯಕಾರಿ ಯಕೃತ್ತನ್ನು ರಕ್ಷಿಸುವುದು, ಹೊಟ್ಟೆಯ ತೊಂದರೆಗೆ ಚಿಕಿತ್ಸೆ ನೀಡುವುದುನುಗ್ಗೆ ಸೊಪ್ಪಿನ ಪ್ರಮುಖವಾದ ವೈಶಿಷ್ಟ್ಯವೇನೆಂದರೆ ಅದು ವಿಟಮಿನ್ ಮತ್ತು ಖನಿಜಾಂಶಗಳನ್ನು ಸಮೃದ್ದವಾಗಿ ಹೊಂದಿರುವುದು. ಇದರ ಎಲೆಗಳಲ್ಲಿ ವಿಟಮಿನ್ ಎ, ವಿಟಮಿನ್ ಸಿ ಮತ್ತು ವಿಟಮಿನ್ ಇ ಯಿಂದ ತುಂಬಿರುತ್ತವೆ. ಇದು ದೇಹದಲ್ಲಿಯ ಸ್ವತಂತ್ರ ರಾಡಿಕಲ್ ಗಳ ವಿರುದ್ದ ಹೋರಾಡಲು ಸಹಾಯ ಮಾಡುತ್ತದೆ ಮತ್ತು ಒಟ್ಟಾರೆ ಆರೋಗ್ಯ ಮತ್ತು ದೇಹದಲ್ಲಿ ಪ್ರತಿರಕ್ಷಣಾ ವ್ಯವಸ್ಥೆಯನ್ನು ಬೆಂಬಲಿಸುತ್ತದೆ.

**ಇವುಗಳು ಪ್ರೋಟೀನ್ ಮೂಲ**

ಪ್ರೊಟೀನ್ ಮೂಲವಾಗಿರುವ ಇದು ಒಂಬತ್ತು ಅಗತ್ಯ ಪೋಷಕಾಂಶಗಳನ್ನು ಒದಗಿಸುತ್ತದೆ. ಆಫ್ರಿಕಾ ಮತ್ತು ಏಷ್ಯಾದ ಭಾಗಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕಾಣ ಸಿಗುವ ಮೊರಿಂಗಾ ಅಥವಾ ನುಗ್ಗೆ ಮರವನ್ನು 'ಮಿರಾಕಲ್ ಟ್ರೀ ' ಎಂದು ಕರೆಯಲಾಗುತ್ತದೆ. ಇದು ತನ್ನಲ್ಲಿಯ ಪ್ರಭಾವಶಾಲಿ ಮತ್ತು ಪೋಷಕಾಂಶಗಳಿಗೆ ಹೆಸರುವಾಸಿಯಾಗಿದೆ.

**ಅಮೈನೋ ಆಮ್ಲ ಹೇರಳವಾಗಿದೆ**

**ಸಂಧಿವಾತಗಳನ್ನು ನಿವಾರಿಸಲು**

**ಜೀವ ಸತ್ವಗಳು ಮತ್ತು ಖನಿಜಾಂಶಗಳು ಹೇರಳವಾಗಿದೆ**

**ಅಡುಗೆ ಮನೆಯಲ್ಲಿ ನುಗ್ಗೆಕಾಯಿ**ಅಡುಗೆ ಮನೆಯಲ್ಲಿ ನುಗ್ಗೆಕಾಯಿ ಮತ್ತು ಸೊಪ್ಪು ಬಹುಮುಖ್ಯವಾದ ಪಾತ್ರ ನಿರ್ವಹಿಸುತ್ತದೆ. ನುಗ್ಗೆಕಾಯಿಯನ್ನು ಸಾಂಬಾರು ಇತ್ಯಾದಿಗಳಲ್ಲಿ ಉಪಯೋಗಿಸಬಹುದು.

# ಮಧ್ಯಾಹ್ನ ಊಟ ಮಾಡಿದ ನಂತರ ಒಂದು ಕಪ್ ಮೊಸರು ಸೇವನೆ

ಮದುವೆ ಕಾರ್ಯಕ್ರಮಕ್ಕೋ ಅಥವಾ ಬೇರೆ ಯಾವುದೋ ಫಂಕ್ಷನ್ಗೋ, ಇಲ್ಲಾಂದ್ರೆ ಮಧ್ಯಾಹ್ನದ ಊಟಕ್ಕೆ ಹೋಟೆಲ್ಗೆ ಹೋಗಿ ಸೌತ್ ಇಂಡಿಯಾ ಮೀಲ್ಸ್ ಥಾಲಿ ಆರ್ಡರ್ ಮಾಡಿದರೆ, ಊಟದ ತಟ್ಟೆಯ ಪಕ್ಕ ಒಂದು ಸಣ್ಣ ಕಪ್ ಮೊಸರು ಇದ್ದೇ ಇರುವುದು! ಇದಕ್ಕೆ ಕಾರಣ ಇಷ್ಟೇ ಹೊಟ್ಟೆ ತುಂಬಾ ಊಟ ಮಾಡಿದ ನಂತರ, ಒಂದು ಸಣ್ಣ ಕಪ್ ಮೊಸರು ಸೇವನೆ ಮಾಡುವುದರಿಂ

, ಜೀರ್ಣಕ್ರಿಯೆ ಪ್ರಕ್ರಿಯೆಯು ಸರಾಗವಾಗಿ ನಡೆಯುವುರ ಜೊತೆಗೆ ಹಲವಾರು ರೀತಿಯಲ್ಲಿ ಪ್ರಯೋಜನಗಳು ಸಿಗುತ್ತವೆ

**ಜೀರ್ಣಕ್ರಿಯೆ ಆರೋಗ್ಯಕ್ಕೆ**

ಮೊಸರಿನಲ್ಲಿ ವಿಟಮಿನ್, ಪ್ರೋಟೀನ್ ಮತ್ತು ಲ್ಯಾಕ್ಟೋ ಬಾಸಿಲಸ್ ಬ್ಯಾಕ್ಟೀರಿಯಾವಿದ್ದು,ನಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವ ಗುಣ ಮೊಸರಿನಲ್ಲಿ ಕಂಡುಬರುತ್ತದೆ.

ಪ್ರೊಬಯೋಟಿಕ್ ಗುಣಲಕ್ಷಣಗಳನ್ನು ಒಳಗೊಂಡಿರುವ ಮೊಸರು ನಮ್ಮ ಕರುಳಿನ ಆರೋಗ್ಯವನ್ನು ವೃದ್ಧಿಸುವುದರ ಜೊತೆಗೆ ಕಾಯಿಲೆಗಳ ವಿರುದ್ಧ ಹೋರಾಡುವ ಉತ್ತಮ ಬ್ಯಾಕ್ಟೀರಿಯಗಳನ್ನು ಅಭಿವೃದ್ಧಿ ಪಡಿಸುತ್ತದೆ.

ಇನ್ನು ವಿಶೇಷವಾಗಿಮೊಸರಿನಲ್ಲಿ ವಿಟಮಿನ್ ಬಿ12 ಅಂಶ ಅಧಿಕ ಪ್ರಮಾಣದಲ್ಲಿ ಕಂಡುಬರುವುದರ ಜೊತೆಗೆ, ದೇಹದ ಆಂತರಿಕ ಭಾಗದಲ್ಲಿ ಅಂದರೆ ಜೀರ್ಣಕ್ರಿಯೆಯ ಭಾಗದಲ್ಲಿಆರೋಗ್ಯಕಾರಿ ಬ್ಯಾಕ್ಟೀರಿಯಾಗಳ ಬೆಳವಣಿಗೆ ಮಾಡುವಲ್ಲಿ ಇದು ತುಂಬಾನೇ ಸಹಕಾರಿ.ಹೀಗಾಗಿ ಪ್ರತಿದಿನ ನಮ್ಮ ಆಹಾರ ಪದ್ಧತಿಯಲ್ಲಿ ಮೊಸರನ್ನು ಸೇರಿಸಿಕೊಳ್ಳುವ ಅಭ್ಯಾಸ ಇಟ್ಟುಕೊಂಡರೆ ತುಂಬಾನೇ ಒಳ್ಳೆಯದು.

**ರಕ್ತದಲ್ಲಿನ ಸಕ್ಕರೆ ಮಟ್ಟ ನಿಯಂತ್ರಣ**

**ತೂಕ ನಿರ್ವಹಣೆಗೆ ಸಹಕಾರಿ**

**ಹೃದಯದ ಆರೋಗ್ಯಕ್ಕೆ**



### ಮೊಸರು ಸೇವನೆಯ ಆರೋಗ್ಯಪ್ರಯೋಜನಗಳು


ಮೊಸರು ಹಾಲಿನ ಉಪ ಉತ್ಪನ್ನವಾಗಿದ್ದರೂ ಇದರಲ್ಲಿ ಹಲವಾರು ಬಗೆಯ ಆರೋಗ್ಯ ಗುಣಗಳು ಇವೆ ಎನ್ನುವುದು ನಮಗೆಲ್ಲರಿಗೂ ತಿಳಿದೇ ಇದೆ. ವಿಶೇಷವಾಗಿ ಮನುಷ್ಯನ ಆರೋಗ್ಯಕ್ಕೆ ಬೇಕಾಗವ ಅಪಾರ ಪ್ರಮಾಣದ ಪೌಷ್ಟಿಕ ಸತ್ವಗಳು ಇದರಲ್ಲಿ ಕಂಡು ಬರುತ್ತದೆ.

ಎಲ್ಲಾಕ್ಕಿಂತ ಮುಖ್ಯವಾಗಿ ಮೊಸರಿಲ್ಲಿ ಅಧಿಕ ಪ್ರಮಾಣದ ಪ್ರೋಟೀನ್,ಕ್ಯಾಲ್ಸಿಯಂ ಮತ್ತು ಅಧಿಕ ಪ್ರಮಾಣದಲ್ಲಿ ವಿಟಮಿನ್ ಅಂಶಗಳು ಕೂಡ ಕಂಡು ಬರುವುತ್ತದೆ.

ಉದಾಹರಣೆಗೆ ಹೇಳುವುದಾದರೆ, ಊಟದ ಬಳಿಕ ಮೊಸರನ್ನು ಸೇವನೆ ಮಾಡಿದರೆ,ನಮ್ಮ ದೇಹಕ್ಕೆ ಕ್ಯಾಲ್ಸಿಯಂ, ವಿಟಮಿನ್ ಬಿ2, ವಿಟಮಿನ್ ಬಿ12, ಪೊಟಾಶಿಯಂ ಮತ್ತು ಮೆಗ್ನಿಶಿಯಂ ಸಿಗುವುದು. ಪ್ರತಿನಿತ್ಯವೂ 100 ರಿಂದ 200 ಗ್ರಾಂನಷ್ಟು ಮೊಸರನ್ನು ಸೇವನೆ ಮಾಡಿದರೆ ಆಗ ಇದರಿಂದ ದೇಹಾರೋಗ್ಯಕ್ಕೆ ತುಂಬಾ ಒಳ್ಳೆಯದು.ಆದರೆ ನೆನಪಿಡಿ ಅತಿಯಗಿ ಮೊಸರನ್ನು ಸೇವನೆ ಮಾಡಲು ಹೋಗ ಬಾರದು ಇಲ್ಲಾಂದ್ರೆ ಅಜೀರ್ಣಸಮಸ್ಯೆ, ತೂಕ ಹೆಚ್ಚಳ ಮತ್ತು ಲ್ಯಾಕ್ಟೋಸ್ ಅಸಹಿಷ್ಣುತೆ ಉಂಟಾಗಬಹುದು.ಮೊಸರಿನಿಂದ ಇಷ್ಟೆಲ್ಲಾ ಲಾಭಗಳು ಇವೆ ಎನ್ನುವುದು ತಿಳಿದ ಬಳಿಕ ಅದನ್ನು ಯಾವಾಗ ಸೇವಿಸಬೇಕು ಎನ್ನುವುದು ನಮಗೆ ಗೊಂದಲವಿದೆ.

**ಹಲ್ಲಿನ ಹಾಗೂ ಬಾಯಿಯ ಆರೋಗ್ಯಕ್ಕೆ ಒಳ್ಳೆಯದು**

# ಮಲಬದ್ದತೆ ಸಮಸ್ಯೆಗೆ ಪರಿಹಾರ



ಮಲಬದ್ಧತೆ ಎನ್ನುವುದು ದೊಡ್ಡ ಸಮಸ್ಯೆಯನ್ನು ಉಂಟು ಮಾಡುವುದು. ಇದು ಆರೋಗ್ಯಕ್ಕೆ ಹಾನಿ ಮಾಡುವ ಜತೆಗೆ ತುಂಬಾ ಕಿರಿಕಿರಿ ಕೂಡ ಉಂಟು ಮಾಡುವುದು. ಸರಿಯಾದ ರೀತಿಯಲ್ಲಿ ನಾರಿನಾಂಶದ ಕೊರತೆ, ತೇವಾಂಶ ಮತ್ತು ದೈಹಿಕ ಚಟುವಟಿಕೆಗಳ ಕೊರತೆಯಿಂದಾಗಿ ಮಲಬದ್ಧತೆ ಸಮಸ್ಯೆಯು ಸಾಮಾನ್ಯ ಎನ್ನುವಂತಾಗಿದೆ. ಆಧುನಿಕ ಯುಗದಲ್ಲಿ ಸಮಯದ ಕೊರತೆಯಿಂದಾಗಿ ಸರಿಯಾದ ಆಹಾರ ಸೇವನೆಯ ಕೊರತೆ, ಸೂಕ್ತ ವ್ಯಾಯಾಮ ಇಲ್ಲದೆ ಇರುವುದು, ಕೆಲವೊಂದು ಔಷಧಿಗಳು ಇದಕ್ಕೆ ಕಾರಣವಾಗಿರಬಹುದು. ಇದರ ಜತೆಗೆ ಕೆಲವು ಆರೋಗ್ಯ ಸಂಬಂಧಿ ಸಮಸ್ಯೆಗಳು ಕೂಡ ಮಲಬದ್ಧತೆಗೆ ಕಾರಣವಾಗಬಹುದು. ಮುಖ್ಯವಾಗಿ ಕರುಳಿನ ಕೆರಳಿಸುವ ಸಹಲಕ್ಷಣಗಳು(ಐಬಿಎಸ್) ಮತ್ತು ಹೈಪೋಥೈರಾಯ್ಡಿಸಂ ಮಲಬದ್ಧತೆಗೆ ಕಾರಣವಾಗಿದೆ.

**ನೆಲ್ಲಿಕಾಯಿ**

ನೆಲ್ಲಿಕಾಯಿಯಲ್ಲಿ ಹಲವಾರು ಬಗೆಯ ಪೋಷಕಾಂಶಗಳಿದ್ದು, ಇದನ್ನು ಹಿಂದಿನಿಂದಲೂ ಸಾಂಪ್ರದಾಯಿಕ ಔಷಧಿಯಲ್ಲಿ ಬಳಕೆ ಮಾಡಿಕೊಂಡು ಬರಲಾಗುತ್ತಿದೆ. ವಿಟಮಿನ್ ಸಿ ಮತ್ತು ನಾರಿನಾಂಶವು ಇರುವ ಇದು ಕರುಳಿನ ಚಟುವಟಿಕೆ ವೃದ್ಧಿಸುವುದು ಮತ್ತು ಮಲಬದ್ಧತೆ ನಿವಾರಿಸುವುದು. ಹಸಿ ನೆಲ್ಲಿಕಾಯಿಯನ್ನು ಸೇವನೆ ಮಾಡಿದರೆ, ನೆಲ್ಲಿಕಾಯಿ ಜ್ಯೂಸ್ ನ್ನು ಸೇವನೆ ಮಾಡಿದರೆ ಆಗ ಇದು ಜೀರ್ಣಕ್ರಿಯೆ ಆರೋಗ್ಯವನ್ನು ವೃದ್ಧಿಸುವುದು. ಇದರಲ್ಲಿ ಇರುವ ನೈಸರ್ಗಿಕ ಅಂಶಗಳು ಮಲಬದ್ಧತೆಗೆ ತುಂಬಾ ಲಾಭಕಾರಿ ಆಗಿರುವುದು

**ಪಪ್ಪಾಯಿ**ಮಲಬದ್ಧತೆಗೆ ಪಪ್ಪಾಯಿಯು ಮತ್ತೊಂದು ಪರಿಣಾಮಕಾರಿ ಔಷಧಿಯಾಗಿದೆ. ಇದರಲ್ಲಿ ಇರುವ ಪಪೈನ್ ಎನ್ನುವ ಅಂಶವು ಪ್ರೊಟೀನ್ ನ್ನು ವಿಘಟಿಸುವುದು ಮತ್ತು ಜೀರ್ಣಕ್ರಿಯೆಗೆ ಸಹಕಾರಿ ಆಗಿದೆ. ಇದರಲ್ಲಿ ನಾರಿನಾಂಶ ಅಧಿಕವಾಗಿ ಇರುವ ಕಾರಣ ಕರುಳಿನ ಕ್ರಿಯೆಯು ಸರಾಗವಾಗುವುದು.

**ಅಂಜೂರ**ತಾಜಾ ಮತ್ತು ಒಣಗಿದ ಅಂಜೂರದಲ್ಲಿ ಒಳ್ಳೆಯ ಪ್ರಮಾಣದ ಆಹಾರದ ನಾರಿನಾಂಶವು ಇದೆ. ಇದರಲ್ಲಿನ ನೈಸರ್ಗಿಕ ಅಂಶಗಳು ಮಲಬದ್ಧತೆಯನ್ನು ಕಡಿಮೆ ಮಾಡು ಸಹಕಾರಿ ಆಗಿದೆ. ಅಂಜೂರವನ್ನು ರಾತ್ರಿ ವೇಳೆ ನೆನೆಯಲು ಹಾಕಬೇಕು ಮತ್ತು ಬೆಳಗ್ಗೆ ಎದ್ದ ಬಳಿಕ ಸೇವನೆ ಮಾಡಿದರೆ ಆಗ ಇದರಿಂದ ಕರುಳಿನ ಚಟುವಟಿಕೆಯು ಉತ್ತಮವಾಗಲಿದೆ.

# ಕೊಪ್ಪದಲ್ಲಿ ರಸ್ತೆ ಗುಂಡಿ ಮುಚ್ಚಿ ಜೆಡಿಎಸ್ ವಿನೂತನ ಪ್ರತಿಭಟನೆ

**ಕೊಪ್ಪ:** ಹೆದ್ದಾರಿಯಲ್ಲಿ ಬಿದ್ದಿದ್ದ ಭಾರಿ ಗುಂಡಿಗಳನ್ನು ಸಿಮೆಂಟ್ ಕಾಂಕ್ರೀಟ್ ಹಾಕಿ ಮುಚ್ಚುವ ಮೂಲಕ ಜೆಡಿಎಸ್ ಕಾರ್ಯಕರ್ತರು ವಿನೂತನ ರೀತಿಯಲ್ಲಿ ಪ್ರತಿಭಟನೆ ನಡೆಸಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ತೀರ್ಥಹಳ್ಳಿ ರಸ್ತೆಯ ಟೋಲ್‌ಗೇಟ್ ಬಳಿಯಿಂದ ಬಸ್ ನಿಲ್ದಾಣದವರೆಗೆ ಜೆಡಿಎಸ್ ರಾಜ್ಯ ಉಪಾಧ್ಯಕ್ಷ ಸುಧಾಕರಶೆಟ್ಟಿ ಅವರ ನೇತೃತ್ವದಲ್ಲಿ ನೂರಾರು ಜೆಡಿಎಸ್ ಕಾರ್ಯಕರ್ತರು ಪ್ರತಿಭಟನೆ ಮೆರವಣಿಗೆ ನಡೆಸಿದರು. ಈ ವೇಳೆ ರಸ್ತೆಯಲ್ಲಿರುವ ಗುಂಡಿಗಳಿಗೆ ಕಾರ್ಯಕರ್ತರು ಸಿಮೆಂಟ್ ಕಾಂಕ್ರೀಟ್ ಹಾಕಿ ಗುಂಡಿ ಮುಚ್ಚಿ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಒಳ್ಳೆಯ ಆಡಳಿತ ನೀಡುವಲ್ಲಿ ವಿಫಲವಾಗಿದೆ. ರಸ್ತೆಗಳ ಗುಂಡಿ ಮುಚ್ಚಲು ಸರ್ಕಾರದ ಬಳಿ ಹಣವಿಲ್ಲದ ಸ್ಥಿತಿ ನಿರ್ಮಾಣವಾಗಿದೆ. ರಾಜ್ಯದ ಎಲ್ಲ ಭಾಗದ ರಸ್ತೆಗಳಲ್ಲಿಯೂ ಗುಂಡಿಗಳು ಮಾಮೂಲಿ ಎನ್ನುವಂತಾಗಿದೆ. ಬಾರಿ ಗುಂಡಿಗಳಿಂದಾಗಿ ಪ್ರತಿದಿನ ಅಪಘಾತಗಳು ಸಾಮಾನ್ಯವಾಗಿದ್ದು, ಜನ ಜೀವ ಕಳೆದುಕೊಳ್ಳುವಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಜೆಡಿಎಸ್ ರಾಜ್ಯ ಉಪಾಧ್ಯಕ್ಷ ಸುಧಾಕರ್ ಶೆಟ್ಟಿ ಮಾತನಾಡಿ,



ರಾಜ್ಯದ ಪ್ರಮುಖ ಧಾರ್ಮಿಕ ಕ್ಷೇತ್ರವಾಗಿರುವ ಶೃಂಗೇರಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳು ಸಂಪೂರ್ಣವಾಗಿ ಗುಂಡಿಮಯವಾಗಿವೆ. ದೇಶದ ವಿವಿಧ ಭಾಗಗಳಿಂದ ಇಲ್ಲಿಗೆ ಆಗಮಿಸುವ ಭಕ್ತರು ರಸ್ತೆ ಗುಂಡಿಗಳಿಂದಾಗಿ ಸಮಸ್ಯೆ ಎದುರಿಸುವಂತಹಾಗಿದೆ. ಚಿಕ್ಕಮಗಳೂರು ಮಾರ್ಗವಾಗಿ ಶೃಂಗೇರಿಗೆ ಬರುವ ಭಕ್ತರು ವಸ್ತಾರೆ ದಾಟುತ್ತಿದ್ದಂತೆ ರಸ್ತೆ ಸ್ಥಿತಿ ಕಂಡು ವಾಪಸ್ ಹೋಗಬೇಕಾದ ಸ್ಥಿತಿ ನಿರ್ಮಾಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ರಸ್ತೆಗಳು ಗುಂಡಿ ಮಯವಾಗಿದ್ದರು ಕನಿಷ್ಠಪಕ್ಷ ಗುಂಡಿಗಳನ್ನು ಮುಚ್ಚುವ ಕೆಲಸವನ್ನು ಸರ್ಕಾರ ಮಾಡುತ್ತಿಲ್ಲ. ಕಳೆದ ಏಳು ತಿಂಗಳಿನಿಂದ ರಸ್ತೆ ಅಭಿವೃದ್ಧಿ ಮಾಡುತ್ತಿಲ್ಲ. ಹೊಸದಾಗಿ ರಸ್ತೆ ನಿರ್ಮಿಸುವುದು ಬೇಡ. ತಾತ್ಕಾಲಿಕವಾಗಿ ರಸ್ತೆ ಗುಂಡಿಗಳನ್ನಾದರೂ ಮುಚ್ಚಿ ಜನರಿಗೆ ಅನುಕೂಲ ಒದಗಿಸಿಕೊಡಬೇಕು ಎಂದು ಒತ್ತಾಯಿಸಿದರು.

ಶೃಂಗೇರಿ ಕ್ಷೇತ್ರದ ಶಾಸಕರು ಕ್ಷೇತ್ರಕ್ಕೆ ನೂರಾರು ಕೋಟಿ ರೂ. ಅನುದಾನ ತಂದಿದ್ದೇನೆ ಎನ್ನುತ್ತಾರೆ. ಆದರೆ ಕ್ಷೇತ್ರದ ಯಾವುದೇ ಭಾಗದಲ್ಲಿಯೂ ಅಭಿವೃದ್ಧಿ ಕಾಮಗಾರಿಗಳು ಕಾಣುವುದಿಲ್ಲ. ಸುಳ್ಳು ಹೇಳುವುದನ್ನು ನಿಲ್ಲಿಸಿ ಮೊದಲು ಕ್ಷೇತ್ರದ ಅಭಿವೃದ್ಧಿಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# ಮೋಂಥಾ ಅಬ್ಬರ : ಅಪಾರ ಬೆಳೆ ಹಾನಿ, ಜನಜೀವನ ಅಸ್ತವ್ಯಸ್ತಗೊಂಡಿದೆ

**ಅಮರಾವತಿ:** ಆಂಧ್ರಪ್ರದೇಶ ಕರಾವಳಿ ಭಾಗಕ್ಕೆ ಅಪ್ಪಳಿಸಿರುವ ಮೋಂಥಾ ಚಂಡಮಾರುತ ಅಪಾರ ಹಾನಿ ಉಂಟು ಮಾಡಿದೆ. ಚಂಡಮಾರುತದ ಅಬ್ಬರಕ್ಕೆ 1.76 ಲಕ್ಷ ಹೆಕ್ಟೇರ್ ಬೆಳೆ ನಾಶವಾಗಿದೆ. ಒಡಿಶಾದಲ್ಲೂ ಮೋಂಥಾ ಪರಿಣಾಮ 15 ಜಿಲ್ಲೆಗಳಲ್ಲಿ ಭಾರೀ ಮಳೆ ಸುರಿದಿದ್ದು ಜನಜೀವನ ಅಸ್ತವ್ಯಸ್ತಗೊಂಡಿದೆ.

ಇಂದು ಬೆಳಗಿನ ಜಾವ ಆಂಧ್ರ ಕರಾವಳಿ ತೀರಕ್ಕೆ ಮೋಂಥಾ ಚಂಡಮಾರುತ ಅಪ್ಪಳಿಸಿದ್ದು, ಅದು ಈಗ ದುರ್ಬಲಗೊಂಡಿದೆ. 6 ಗಂಟೆಗಳಲ್ಲಿ ಚಂಡಮಾರುತ ದುರ್ಬಲಗೊಂಡು ವಾಯುವ್ಯ ದಿಕ್ಕಿನತ್ತ ಚಲಿಸಿತು ಎಂದು ಭಾರತೀಯ ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಮುಂದಿನ 6 ಗಂಟೆಗಳಲ್ಲಿ ಚಂಡಮಾರುತ ತೀವ್ರತೆಯನ್ನು ಕಾಯ್ದುಕೊಳ್ಳುವ ಸಾಧ್ಯತೆಯಿದ್ದು, 6 ಗಂಟೆಗಳಲ್ಲಿ ಆಳವಾದ ವಾಯುವ್ಯಕ್ಕೆ ಚಲಿಸಿ, ದುರ್ಬಲಗೊಳ್ಳುವ ಸಾಧ್ಯತೆಗಳು ಇವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಆಂಧ್ರಪ್ರದೇಶದ ಕೊನಸೀಮಾ ಜಿಲ್ಲೆಯ ಮಕನಗುಡೆಮ್ ಗ್ರಾಮದಲ್ಲಿ ಚಂಡಮಾರುತದಿಂದಾಗಿ ಮಹಿಳೆ ಮೇಲೆ ಮರ ಬಿದ್ದು ಮೃತಪಟ್ಟಿದ್ದಾರೆ. ಚಂಡಮಾರುತದ ರುದ್ರನರ್ತನಕ್ಕೆ ಆಂಧ್ರಪ್ರದೇಶದಲ್ಲಿ 38 ಸಾವಿರ ಹೆಕ್ಟೇರ್ ಪ್ರದೇಶಗಳಲ್ಲಿ ಬೆಳೆದು ನಿಂತಿದ್ದ ಬೆಳೆಗಳು ಮತ್ತು 1.38 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ತೋಟಗಾರಿಕೆ ಬೆಳೆ ನಾಶವಾಗಿದೆ ಎಂದು ಅಂದಾಜು ಮಾಡಲಾಗಿದೆ.

ಆಂಧ್ರಪ್ರದೇಶದ ನಲ್ಲೂರು ಜಿಲ್ಲೆಯಲ್ಲೂ ಭಾರೀ ಮಳೆ ಸುರಿದಿದ್ದು, 76 ಸಾವಿರ ಜನರನ್ನು ಪರಿಹಾರ ಶಿಬಿರಕ್ಕೆ ಸ್ಥಳಾಂತರಿಸಿ ರಾಜ್ಯ ಸರ್ಕಾರ 219 ವೈದ್ಯಕೀಯ ಶಿಬಿರಗಳನ್ನು ಸ್ಥಾಪಿಸಿದೆ.

ಕೃಷ್ಣ, ಎಲೂರು, ಮತ್ತು ಕಾಕಿನಾಡ ಸೇರಿದಂತೆ ಚಂಡಮಾರುತ ಬಾಧಿತ ಜಿಲ್ಲೆಗಳ ರಸ್ತೆಗಳಲ್ಲಿ ವಾಹನ ಸಂಚಾರ ಸ್ಥಗಿತಗೊಳಿಸಲು ಸರ್ಕಾರ ತೀರ್ಮಾನಿಸಿದೆ. ತುರ್ತುವೈದ್ಯಕೀಯ ಸೇವೆಗಳಿಗೆ ವಿನಾಯಿತಿ ನೀಡಲಾಗಿದೆ. ಪೂರ್ವ ಕರಾವಳಿ ರೈಲ್ವೆ ವಲಯದ ವಾಲ್ಟೇರ್ ವಿಭಾಗದಲ್ಲಿ ಭಾರತೀಯ ರೈಲ್ವೆ ಬಹುತರಬೇತಿ ರೈಲುಗಳನ್ನು ರದ್ದುಪಡಿಸಲಾಗಿದೆ. ಹಾಗೆಯೇ ಕೆಲವು ರೈಲುಗಳ ಸಂಚಾರವನ್ನು ಮರು ನಿಗದಿಮಾಡಿದೆ.

**ವಿಮಾನಗಳ ಹಾರಾಟ ರದ್ದು:** ವಿಶಾಖಪಟ್ಟಣ ವಿಮಾನನಿಲ್ದಾಣದಿಂದಕಾರ್ಯನಿರ್ವಹಿಸುತ್ತಿದ್ದ ಎಲ್ಲಾ 32 ವಿಮಾನಗಳ ಹಾರಾಟವನ್ನು ರದ್ದುಪಡಿಸಲಾಗಿದೆ. ಮತ್ತೊಂದೆಡೆ ವಿಜಯವಾಡ ವಿಮಾನ ನಿಲ್ದಾಣದಿಂದ ಕಾರ್ಯಾಚರಣೆ ನಡೆಸಬೇಕಾಗಿದ್ದ 16 ವಿಮಾನಗಳ ಹಾರಾಟವನ್ನು ರದ್ದುಪಡಿಸಲಾಗಿದೆ. 3778 ಗ್ರಾಮಗಳಲ್ಲಿ ಭಾರೀ ಮಳೆ ಅಸುರಿಯುವ ಸಾಧ್ಯತೆಯಿದೆ ಎಂದು ಮುಖ್ಯಮಂತ್ರಿ ಚಂದ್ರಬಾಬುನಾಯ್ಡು ತಿಳಿಸಿದ್ದಾರೆ. ಭಾರತೀಯ ಹವಾಮಾನ ಇಲಾಖೆ ನೀಡಿರುವ ಮಾಹಿತಿ ಆಧರಿಸಿ ಪ್ರಸ್ತುತ ಮಚಲಿಪಟ್ಟಣಂ ಮತ್ತು ವಿಶಾಖಪಟ್ಟಣದಲ್ಲಿರುವ ಡಾಪ್ಲರ್



ಹವಾಮಾನ ರಾಡರ್ ಜೊತೆಗೆ ಕರಾವಳಿ ವಿಕ್ಷಣಾಲಯಗಳು ಸ್ವಯಂಚಾಲಿತ ಹವಾಮಾನ ಕೇಂದ್ರಗಳು, ಹಡಗುಗಳು ಹಾಗೂ ಉಪಗ್ರಹಗಳು ನಿರಂತರವಾಗಿ ಮೇಲ್ವಿಚಾರಣೆ ನಡೆಸುತ್ತಿವೆ.

ಒಡಿಶಾ ಮತ್ತು ಕರಾವಳಿ ಮತ್ತು ದಕ್ಷಿಣ ಜಿಲ್ಲೆಗಳಲ್ಲಿ ಮೋಂಥಾ ಚಂಡಮಾರುತ ಪರಿಣಾಮ ಭಾರೀ ಮಳೆಯಾಗಿದೆ. ಭೂಕುಸಿತದಿಂದ ಮನೆಗಳಿಗೆ ಹಾನಿಯಾಗಿದ್ದು, ದಕ್ಷಿಣ ಒಡಿಶಾದ ಮಲ್ಕನ್ ಗಿರಿ, ಕೊರಾಪಟ್, ರಾಯಘಡ, ಗಜಪತಿ, ಗಂಜಾಂ, ಕಂಧಮಲ್, ಕಲಹಂಡಿ ಮತ್ತು ನಬರಂಗ್ ಜಿಲ್ಲೆಗಳಲ್ಲಿ ಹಾನಿಯಾಗಿದೆ. ಈ ಹಿನ್ನೆಲೆಯಲ್ಲಿ 15 ಜಿಲ್ಲೆಗಳಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಮಣ್ಣಿನ ಗೋಡೆ ಕುಸಿದು ಓರ್ವ ವ್ಯಕ್ತಿ ಗಾಯಗೊಂಡಿದ್ದಾನೆ. ಭಾರೀ ಗಾಳಿಯಿಂದಾಗಿ ಮನೆಯ ಮೇಲ್ಛಾವಣಿ ಹಾರಿಹೋಗಿದೆ.

ಮೋಂಥಾ ಚಂಡಮಾರುತ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಪರಿಸ್ಥಿತಿ ಅವಲೋಕನ ನಡೆಸಿ, ಪರಿಹಾರ ಕಾರ್ಯಾಚರಣೆಗಾಗಿ ಎನ್‌ಡಿಆರ್‌ಎಫ್, ಒಡಿಆರ್‌ಎಫ್ ಹಾಗೂ ಅಗ್ನಿಶಾಮಕ ಸಿಬ್ಬಂದಿ ಸೇವೆಯನ್ನು ನಿಯೋಜಿಸಲಾಗಿದೆ.

ಚಂಡಮಾರುತ ದುರ್ಬಲ

ಆಂಧ್ರ ಪ್ರದೇಶದ ಕರಾವಳಿ ತೀರಕ್ಕೆ ನಿನ್ನೆ ರಾತ್ರಿ ಮೋಂಥಾ ಅಪ್ಪಳಿಸಿದ ನಂತರ ಚಂಡಮಾರುತ ದುರ್ಬಲವಾಗಿದ್ದು ತೀವ್ರ ವಾಯುಭಾರ ಕುಸಿತಗೊಂಡಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ವಾಯುಭಾರ ಕುಸಿತದ ಪರಿಣಾಮವಾಗಿ ಭಾರೀ ಮಳೆ ಮತ್ತು ಬಲವಾದ ಗಾಳಿ ಕಡಿಮೆಯಾಗಿದ್ದು ಮೋಂಥಾ ಅಬ್ಬರ ಕಡಿಮೆಯಾಗಿದೆ. ನಿನ್ನೆ ಸಂಜೆ ಕರಾವಳಿ ರಾಜ್ಯಗಳ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆ ಮತ್ತು ಬಲವಾದ ಗಾಳಿ ಬೀಸಿದ ಹಿನ್ನೆಲೆಯಲ್ಲಿ ತೀವ್ರ ಪರಿಣಾಮ ಎದುರಿಸಿದ ಜನತೆ ನಿಟ್ಟಿಸಿರು ಬಿಡುವಂತಾಗಿದೆ.

ಆಂಧ್ರಪ್ರದೇಶದ ಕರಾವಳಿಯಲ್ಲಿ ಆರ್ಭಟಿಸಿದ್ದ ಮೋಂಥಾ ಚಂಡಮಾರುತ ವಾಯುವ್ಯ ದಿಕ್ಕಿಗೆ ಸುಮಾರು 10 ಕಿ.ಮೀ ವೇಗದಲ್ಲಿ ಚಲಿಸಿ ದುರ್ಬಲಗೊಂಡಿದೆ. ಸಂಜೆ ವೇಳೆಗೆ ಮತ್ತಷ್ಟು ದುರ್ಬಲಗೊಳ್ಳುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಚಂಡಮಾರುತದ ಕೇಂದ್ರ ನರಸಾಪುರದ ಪಶ್ಚಿಮ-ವಾಯುವ್ಯಕ್ಕೆ ಸುಮಾರು 20 ಕಿಮೀ, ಮಚಲಿಪಟ್ಟಣಂನಿಂದ 50 ಕಿಮೀ ಈಶಾನ್ಯಕ್ಕೆ ಮತ್ತು ಕಾಕಿನಾಡದಿಂದ 90 ಕಿಮೀ ಪಶ್ಚಿಮ-ನೈರುತ್ಯದಲ್ಲಿದೆ. ಮಚಲಿಪಟ್ಟಣಂ ಮತ್ತು ವಿಶಾಖಪಟ್ಟಣಂನಲ್ಲಿರುವ ಡಾಪ್ಲರ್ ರಾಡಾರ್‌ಗಳ ಮೂಲಕ ವ್ಯವಸ್ಥೆಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ.

ಒಳನಾಡಿನಲ್ಲಿ ಚಲಿಸಿ ಶಕ್ತಿ ಕಳೆದುಕೊಳ್ಳಲು ಪ್ರಾರಂಭಿಸಿದ ಕಾರಣ ಚಂಡಮಾರುತದ ದುರ್ಬಲಗೊಳ್ಳುವ ನಿರೀಕ್ಷೆಯಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪಶ್ಚಿಮ ಗೋದಾವರಿ, ಕೃಷ್ಣ ಮತ್ತು ಪೂರ್ವ ಗೋದಾವರಿ ಜಿಲ್ಲೆಗಳಲ್ಲಿ ಭಾರೀ ಮಳೆ ಮತ್ತು ಬಿರುಗಾಳಿ ಬೀಸುತ್ತಲೇ ಇತ್ತು, ತಗ್ಗು ಪ್ರದೇಶಗಳಲ್ಲಿ ಪ್ರವಾಹ ಉಂಟಾಗುವ ಎಚ್ಚರಿಕೆ ನೀಡಲಾಗಿದೆ.

## ನ.7 ರಿಂದ 10 ರವರೆಗೆ ಕೃಷಿ ತೋಟಗಾರಿಕೆ ಮೇಳ-2025

**ಶಿವಮೊಗ್ಗ :** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ಮತ್ತು ಕೃಷಿ ಸಂಬಂಧಿತ ಅಭಿವೃದ್ಧಿ ಇಲಾಖೆಗಳು, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಬಿ.ಸಿ. ಟ್ರಸ್ಟ್ ಇವರ ಸಹಯೋಗದೊಂದಿಗೆ ನ.7 ರಿಂದ 10 ರವರೆಗೆ ಕೃಷಿ ಮಹಾವಿದ್ಯಾಲಯ ನವಲೆ ಆವರಣದಲ್ಲಿ ಕೃಷಿ-ತೋಟಗಾರಿಕೆ ಮೇಳ-2025 ಕಾರ್ಯಕ್ರಮವನ್ನು "ಸಹಕಾರ ಕೃಷಿಯಿಂದ ಸುಸ್ಥಿರ ಕೃಷಿ" ಶೀರ್ಷಿಕೆ ಅಡಿಯಲ್ಲಿ ಆಯೋಜಿಸಲಾಗಿದೆ.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ನ.8 ಬೆಳಿಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೆರವೇರಿಸುವರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ಪುಸ್ತಕ/ತಾಂತ್ರಿಕ ಕೈಪಿಡಿಗಳನ್ನು ಬಿಡುಗಡೆ ಮಾಡುವರು. ಕೃಷಿ ಸಚಿವ ಹಾಗೂ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹ ಕುಲಾಧಿಪತಿ ಎನ್.ಚೆಲುವರಾಯಸ್ವಾಮಿ ವಸ್ತು ಪ್ರದರ್ಶನವನ್ನು ಹಾಗೂ ಗಣಿ, ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವ ಎಸ್.ಎಸ್ ಮಲ್ಲಿಕಾರ್ಜುನ ತಂತ್ರಜ್ಞಾನ ಉದ್ಯಾನವನ್ನು ಉದ್ಘಾಟಿಸುವರು.

ಗ್ರಾಮಾಂತರ ಶಾಸಕರಾದ ಶಾರದಾ ಪರ್ಯಾನಾಯ್ಕ ಕಾರ್ಯಕ್ರಮ ಅಧ್ಯಕ್ಷತೆ ವಹಿಸಲಿದ್ದು, ಇಂಧನ ಸಚಿವ ಕೆ.ಜೆ. ಜಾರ್ಜ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್, ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವೆ ಲಕ್ಷ್ಮೀ ಆರ್.ಹೆಬ್ಬಾಳ್‌ಕರ್ ಮತ್ತಿತರರು ಭಾವಹಿಸುವರು.

## ಧೂಮಪಾನ ನಿಷೇಧ ಕಾಯಿದೆ ಉಲ್ಲಂಘನೆ:

# 1.82 ಲಕ್ಷ ಜನರಿಗೆ ದಂಡ : ವಿ.ಎಸ್. ಉಗ್ರಪ್ಪ

**ಚಿಕ್ಕಮಗಳೂರು :** ರಾಜ್ಯದಲ್ಲಿ "ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ನಿಯಂತ್ರಣ ಕಾಯ್ದೆ, 2003 ಅಡಿಯಲ್ಲಿ 2025ರ ಏಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಕಾಯಿದೆಯನ್ನು ಉಲ್ಲಂಘನೆ ಮಾಡಿರುವ ಸುಮಾರು 1,82,000 ಜನರ ವಿರುದ್ಧ ಕ್ರಮ ಕೈಗೊಂಡು ದಂಡ ವಿಧಿಸಲಾಗಿದೆ ಎಂದು ಮಹಿಳೆ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಅಧ್ಯಕ್ಷರಾದ ವಿ.ಎಸ್. ಉಗ್ರಪ್ಪ ತಿಳಿಸಿದ್ದಾರೆ.

ಮಹಿಳೆ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಕುರಿತು ಇತ್ತೀಚೆಗೆ ಬೆಂಗಳೂರಿನಲ್ಲಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದ ಅವರು, ಶಾಲಾ, ಕಾಲೇಜುಗಳಲ್ಲಿ 100 ಮೀ. ವ್ಯಾಪ್ತಿಯಲ್ಲಿ ಧೂಮಪಾನ ನಿಷೇಧ ಕಾಯಿದೆ ಉಲ್ಲಂಘನೆ ಮಾಡಿದ 2470 ಜನರಿಗೆ ದಂಡ ವಿಧಿಸಲಾಗಿದೆ. ಈ ರೀತಿ ಪ್ರತಿ ವರ್ಷ ರೂ. 45 ಲಕ್ಷ ದಂಡ ಸಂಗ್ರಹವಾಗುತ್ತಿದೆ. ಈ ಪೈಕಿ 21 ವರ್ಷದೊಳಗಿನ ಯುವಜನರ ದತ್ತಾಂಶವನ್ನು ನೀಡಲು ಆರೋಗ್ಯ ಇಲಾಖೆಗೆ ಸೂಚಿಸಿದರು.



21 ವರ್ಷದೊಳಗಿನ ಯುವಜನರನ್ನು ಧೂಮಪಾನ, ಮದ್ಯಪಾನ, ತಂಬಾಕು ಸೇವನೆ, ಡ್ರಗ್ಸ್‌ನಂತಹ ಮಾದಕ ವಸ್ತುಗಳ ಸೇವನೆಯಂತಹ ವ್ಯಸನಗಳಿಂದ ಮುಕ್ತರನ್ನಾಗಿಸಲು ಮಾದಕ ವಸ್ತು ವ್ಯಸನ ಮುಕ್ತ ಕೇಂದ್ರಗಳ ಮೂಲಕ ಈ ವರ್ಷದ ಏಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ ಸುಮಾರು 1 ಲಕ್ಷ ಯುವಜನರನ್ನು ಸಮಾಲೋಚನೆಗೆ ಒಳಪಡಿಸಲಾಗಿದೆ. ಆರೋಗ್ಯ ಇಲಾಖೆ ಮತ್ತು ನಿಮ್ಹಾನ್ಸ್ ಸಹಯೋಗದಲ್ಲಿ ಟೆಲಿಮಾನಸ್ 14416 ಸಹಾಯವಾಣಿಯನ್ನು ತೆರೆಯಲಾಗಿದೆ. ಈ ಸಹಾಯವಾಣಿ ಮೂಲಕ ಮಾದಕ ವ್ಯಸನ ಪೀಡಿತ ಮಕ್ಕಳ ಮುಂದಿನ ಭವಿಷ್ಯವನ್ನು ಈ ಸುಧಾರಿಸಲು ಅಗತ್ಯ ಸಹಾಯ ಮತ್ತು ಸಮಾಲೋಚನೆ ಪಡೆಯಬಹುದು.

ದೃಶ್ಯ ಮಾಧ್ಯಮಗಳು ಅತ್ಯಾಚಾರ, ಮಹಿಳಾ ದೌರ್ಜನ್ಯ ಆತ್ಮಹತ್ಯೆ ಮತ್ತು ಇತರ ಪ್ರಕರಣಗಳನ್ನು ವೈಭವೀಕರಿಸಿ ಭಯಗೊಳ್ಳುವಂತೆ ಪ್ರಸಾರ ಮಾಡುವುದನ್ನು ನಿಯಂತ್ರಿಸಬೇಕು. ಪ್ರೆಸ್ ಕೌನ್ಸಿಲ್ ಮಾರ್ಗಸೂಚಿಗಳನ್ನು ದೃಶ್ಯ ಮಾಧ್ಯಮಗಳು ಅಳವಡಿಸಿಕೊಳ್ಳಬೇಕು. ಯಾರು ಈ ರೀತಿಯ ಪ್ರಕರಣಗಳಿಗೆ ಪ್ರಚಾರ ನೀಡುತ್ತಾರೋ ಅವರ ಮೇಲೆ ಮಹಿಳೆಯರ ಅಸಭ್ಯ ಪ್ರಾತಿನಿಧ್ಯ(ನಿಷೇಧ) ಕಾಯ್ದೆ-1986 (ಖಟಿಜಥಿಜಟಿಣ ಖಜರಿಡಿಜ-ಜಟಿಣಚಿಣುಟಿ ಠಜಿ ಫಠಟಜಟಿ (ಕಡಿಖುಭುಣುಟಿ) ಂಭಿಣ-1986) ರಡಿಯಲ್ಲಿ ಸ್ವಯಂ ಪ್ರೇರಿತವಾಗಿ ಕ್ರಮವನ್ನು ದೃಶ್ಯ ಮಾಧ್ಯಮಗಳು ತೆಗೆದುಕೊಳ್ಳಬೇಕು. ಅಥವಾ ಕೇಬಲ್ ಆ್ಯಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮ ವಹಿಸಲು ಅಥವಾ ಫಿಲ್ಮ್ ಆ್ಯಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮ ವಹಿಸಲು, ಪತ್ರಿಕೋದ್ಯಮಕ್ಕೆ ಸಂಬಂಧಿಸಿದ್ದರೆ ಪತ್ರಿಕೋದ್ಯಮ ಕಾಯಿದೆಯಡಿ ಕ್ರಮ ವಹಿಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದರು.

## ನ.4 ರಂದು ಜಿಲ್ಲಾ ಯುವಜನೋತ್ಸವ ಸ್ಪರ್ಧೆ

**ಚಿಕ್ಕಮಗಳೂರು, ಅ.29:** ಯುವಜನರಲ್ಲಿ ಶಾಸ್ತ್ರೀಯ ಕಲೆ, ಜಾನಪದ ಕಲೆ, ಸಂಗೀತ ಮತ್ತು ಸಂಸ್ಕೃತಿಯ ಬಗೆಗಿನ ಕಾಳಜಿ ಹೆಚ್ಚಿಸಲು, ಉತ್ತೇಜನ ನೀಡಲು ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳ ವತಿಯಿಂದ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಅಂಗವಾಗಿ ಪ್ರತೀ ವರ್ಷ ಜನವರಿ 12 ರಂದು ರಾಷ್ಟ್ರೀಯ ಯುವ ದಿನಾಚರಣೆಯನ್ನು ಸಂಘಟಿಸಲಾಗುತ್ತಿದೆ. ಈ ಪ್ರಯುಕ್ತ ರಾಷ್ಟ್ರ, ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಯುವಜನೋತ್ಸವ ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ.

ನವೆಂಬರ್ 4 ರಂದು ನಗರದ ಕುವೆಂಪು ಕಲಾಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ ಮತ್ತು ಜಿಲ್ಲಾ ಎನ್‌ಎಸ್‌ಎಸ್ ಘಟಕದ ಆಶ್ರಯದಲ್ಲಿ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, 15 ರಿಂದ 29 ವಯೋಮಿತಿಯ ಈ ಜಿಲ್ಲೆಯ ಸ್ಪರ್ಧಾಕಾಂಕ್ಷಿ ಯುವಕ, ಯುವತಿಯರು, ಸಂಘ-ಸಂಸ್ಥೆಗಳ ಪ್ರತಿನಿಧಿಗಳು, ಶಾಲಾ ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಅಂದು ಬೆಳಿಗ್ಗೆ 9.30 ಗಂಟೆಗೆ ಕಲಾಮಂದಿರದಲ್ಲಿ ವರದಿ ಮಾಡಿಕೊಳ್ಳುವಂತೆ ತಿಳಿಸಲಾಗಿದೆ. ಸ್ಪರ್ಧೆಗಳಲ್ಲಿ ಜನಪದ ಗೀತೆ (ಗುಂಪು), ಜಾನಪದ ನೃತ್ಯ(ಗುಂಪು), ಕಥೆ ಬರೆಯುವುದು (ವೈಯಕ್ತಿಕ), ಕವಿತೆ ಬರೆಯುವುದು (ವೈಯಕ್ತಿಕ), ಭಾಷಣ (ವೈಯಕ್ತಿಕ), ಚಿತ್ರಕಲೆ, ವಿಜ್ಞಾನ ಮೇಳ ನಡೆಯಲಿವೆ. ಹೆಚ್ಚಿನ ಮಾಹಿತಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಚೇರಿ(08262-295724)ಯನ್ನು ಸಂಪರ್ಕಿಸಬಹುದು.

## ಸಿ.ಟಿ.ರವಿ ಹೇಳಿಕೆಗೆ ಬಿಜೆಪಿ ಸಮರ್ಥನೆ



**ಚಿಕ್ಕಮಗಳೂರು:** ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರು ಮೆಡಿಕಲ್ ಕಾಲೇಜಿಗೆ ಭೇಟಿನೀಡಿದ್ದ ಸಂದರ್ಭದಲ್ಲಿ ಡೀನ್ ಗೈರು ಹಾಜರಾಗಿದ್ದಕ್ಕೆ ಅಸಮಾಧಾನಗೊಂಡು ಮಾತನಾಡಿದ್ದಾರೆ. ಆದರೆ, ಕಾಂಗ್ರೆಸ್ ಪಕ್ಷ ಸಿ.ಟಿ.ರವಿ ಅವರ ಮಾತನ್ನು ತಿರುಚಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿರುವುದು ಖಂಡನೀಯ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ದೇವರಾಜ್ ಶೆಟ್ಟಿ ಸಮರ್ಥಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸಿ.ಟಿ.ರವಿ ಅವರ ಜನಪ್ರಿಯತೆ ಸಹಿಸದ ಕಾಂಗ್ರೆಸ್‌ನವರು ಕುತಂತ್ರದಿಂದ ಈ ರೀತಿ ವಿಡಿಯೋ ಹರಿಬಿಡುವ ಮೂಲಕ ತೇಜೋವಧೆಗೆ ಯತ್ನಿಸಿರುವುದು ಖಂಡನೀಯ ಎಂದರು.ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಜಸಂತಾಅನಿಲ್‌ಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿದೆ. ಕಡೂರಿನಲ್ಲಿ ಶಾಸಕ ಸಂಬಂಧಿಕರ ಮೇಲೆ ಹಲ್ಲೆ, ಬಸರೀಕಟ್ಟೆಯಲ್ಲಿ ಮಹಿಳೆ ಮೇಲೆ ದೌರ್ಜನ್ಯ, ರಾಜ್ಯದಲ್ಲಿ ಮಹಿಳೆಯರ ಮೇಲಿನ ಅತ್ಯಾಚಾರ ಪ್ರಕರಣಗಳು ಹೆಚ್ಚಾಗಿದ್ದು, ಗೃಹ ಸಚಿವರು ಕಣ್ಣುಮುಚ್ಚಿ ಕುಳಿತಿದ್ದಾರೆ ಎಂದು ಟೀಕಿಸಿದರು.

ರಾಜ್ಯ ಸರಕಾರದ ಕಮಿಷನ್ ಕಾಟಕ್ಕೆ 7 ಅಧಿಕಾರಿಗಳು, 20 ನೌಕರರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಾಜ್ಯದಲ್ಲಿ ಭ್ರೂಣಹತ್ಯೆ ಪ್ರಕರಣ ಹೆಚ್ಚಾಗಿವೆ. ಸೈಬರ್ ವಂಚನೆ ಪ್ರಕರಣಗಳು ಮಿತಿಮೀರಿವೆ. ಸೈಬರ್ ಕ್ರೈಂನಲ್ಲಿ ರಾಜ್ಯ ಪ್ರಥಮ ಸ್ಥಾನದಲ್ಲಿದೆ. ಸಚಿವ ಪ್ರಿಯಾಂಕ ಖರ್ಗೆ ಆಪ್ತ ನಿಷೇಧಿತ ಡ್ರಗ್ ಪ್ರಕರಣದಲ್ಲಿ ಸಿಲುಕಿದ್ದು, ಈ ಬಗ್ಗೆ ಸಚಿವರು ಬಾಯಿ ಬಿಡಲಿಲ್ಲ. ಕಾಂಗ್ರೆಸ್ ಶಾಸಕರು ಜೈಲಿನಲ್ಲಿರುವುದೇ ಈ ಸರಕಾರದ ಭ್ರಷ್ಟಾಚಾರಕ್ಕೆ ಪುಷ್ಟಿ ನೀಡುತ್ತಿದೆ ಎಂದರು.

## ಕನ್ನಡ ರಾಜೋತ್ಸವ

**ಶಿವಮೊಗ್ಗ :** ಜಿಲ್ಲಾ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನ.01 ರಂದು ಬೆಳಿಗ್ಗೆ 9 ಗಂಟೆಗೆ ನಗರದ ನೆಹರು ಕ್ರೀಡಾಂಗಣದಲ್ಲಿ ಕನ್ನಡ ರಾಜೋತ್ಸವ ದಿನಾಚರಣೆ-2025 ರ ಕಾರ್ಯಕ್ರಮವನ್ನು ಏರ್ಪಡಿಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ಧ್ವಜಾರೋಹಣ ನೆರವೇರಿಸುವರು. ಭದ್ರಾವತಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ಕೆ.ಸಂಗಮೇಶ್ವರ, ಸಾಗರ ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತದ ಅಧ್ಯಕ್ಷ ಗೋಪಾಲಕೃಷ್ಣ ಬೇಳೂರು ಗೌರವಾನ್ವಿತ ಉಪಸ್ಥಿತಿ ವಹಿಸಲಿದ್ದು,

ಮುಖ್ಯ ಅತಿಥಿಗಳಾಗಿ ಸಂಸದರು, ವಿಧಾನ ಸಭೆ ಹಾಗೂ ವಿಧಾನ ಪರಿಷತ್ ಶಾಸಕರುಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರಿ ಅಧ್ಯಕ್ಷರುಗಳು, ಜಿಲ್ಲಾಧಿಕಾರಿಗಳು, ಜಿ.ಪಂ ಸಿಇಓ, ಪೊಲೀಸ್ ಅಧೀಕ್ಷಕರು, ಮಹಾನಗರ ಪಾಲಿಕೆಯ ಆಯುಕ್ತರು , ಜಿಲ್ಲೆಯ ಜನಪ್ರತಿನಿಧಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಕನ್ನಡ ಸಂಘಟನೆಗಳು ಪಾಲ್ಗೊಳ್ಳುವರು.

ಬೆಳಿಗ್ಗೆ 8 ಗಂಟೆಗೆ ಸೈನ್ಸ್ ಮೈದಾನದಿಂದ ನೆಹರು ಕ್ರೀಡಾಂಗಣದವರೆಗೆ ಶ್ರೀಭುವನೇಶ್ವರಿ ದೇವಿಯ ಮೆರವಣಗೆ ಹೊರಡಲಿದೆ. ಬೆಳಿಗ್ಗೆ 9 ಗಂಟೆಗೆ ನೆಹರು ಕ್ರೀಡಾಂಗಣದಲ್ಲಿ ರಾಷ್ಟ್ರ ಧ್ವಜಾರೋಹಣ, ರಾಷ್ಟ್ರಗೀತೆ, ನಾಡಗೀತೆ, ಕನ್ನಡ ರಾಜ್ಯೋತ್ಸವ ಸಂದೇಶ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಯುವಜನ ಹಾಗೂ ಕ್ರೀಡೆ ಇಲಾಖೆ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಸಂಜೆ 5 ಗಂಟೆಗೆ ನಗರದ ಕುವೆಂಪು ರಂಗಮಂದಿರದಲ್ಲಿ ಪೊಲೀಸ್ ಬ್ಯಾಂಡ್ ಹಾಗೂ ಶಿವಮೊಗ್ಗ ನಗರದ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

# ಸರ್ಕಾರಿ ನೌಕರಿ ಅಧಿಕಾರ ಸಾಧಿಸುವ ವೇದಿಕೆ ಅಲ್ಲ

## ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮದಲ್ಲಿ ನ್ಯಾ.ಮಂಜುನಾಥ ನಾಯಕ್

**ಶಿವಮೊಗ್ಗ :** ಸರ್ಕಾರಿ ನೌಕರಿ ಎಂದ-ರೆ ಜನಸೇವೆ ಮಾಡಲು ಸಿಕ್ಕ ಅವಕಾಶವೇ ಹೊರತು ಅಧಿಕಾರ ಸಾಧಿಸುವ ವೇದಿಕೆ ಅಲ್ಲ. ಈ ನಿಟ್ಟಿನಲ್ಲಿ ಸರ್ಕಾರಿ ನೌಕರರ ಮನೋಭಾವ ಬದಲಾಗಬೇಕು. ಆಗ ಮಾತ್ರ ಸರ್ಕಾರಿ ಇಲಾಖೆಗಳಲ್ಲಿ ಶೇ.50 ರಷ್ಟಾದರು ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಲು ಸಾಧ್ಯವಾಗುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಮಂಜುನಾಥ ನಾಯಕ್ ರವರು ಹೇಳಿದರು.

ಅವರು ಇಂದು ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ಲೋಕಾಯುಕ್ತ ಇವರ ಸಂಯುಕ್ತಾಶ್ರಯದಲ್ಲಿ ಜಿ.ಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಿದ್ದ "ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ-2025" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬಡತನ, ನಿರುದ್ಯೋಗ ಹಾಗೂ ಭ್ರಷ್ಟಾಚಾರದ ಅಂಶಗಳು ನಮ್ಮ ದೇಶದ ಅಭಿವೃದ್ಧಿಗೆ ಕಂಟಕವಾಗಿದೆ. ದೇಶದಲ್ಲಿ ಜನಸಂಖ್ಯೆ ಹೆಚ್ಚಾದಂತೆ ಅದರ ಅನುಗುಣವಾಗಿ



ಉದ್ಯೋಗದ ಅವಕಾಶ ಹಾಗೂ ಅದ-ಕ್ಕೆ ಬೇಕಾದ ಸಂಪನ್ಮೂಲಗಳ ಕೊರತೆಯು ಉಂಟಾಗುತ್ತಿದ್ದು, ಅದಕ್ಕಾಗಿ ಪೈಪೋಟಿ ನಡೆಯುತ್ತಿದೆ. ಈ ಕಾರಣದಿಂದಲೇ ಅಧಿಕಾರಿಗಳಲ್ಲಿ ಭ್ರಷ್ಟಾಚಾರದಲ್ಲಿ ತೊಡಗುತ್ತಾರೆ ಎಂದರು.

ಭ್ರಷ್ಟಾಚಾರ ನಿಗ್ರಹ ಕಾನೂನುಗಳಲ್ಲೆ ಬಹಳಷ್ಟು ಲೋಪಗಳಿದ್ದು, ಕಾನೂನು ಮೂಲಕ ಭ್ರಷ್ಟಾಚಾರವನ್ನು ತಡೆಯಲು ಸಾಧ್ಯವಾಗುತ್ತಿಲ್ಲ. ಇದರ ಉಪಯೋಗವನ್ನು ಭ್ರಷ್ಟಾಚಾರದಲ್ಲಿ ತೊಡಗಿರುವವರೇ ಹೆಚ್ಚಾಗಿ ಪಡೆಯುತ್ತಿದ್ದಾರೆ. ನಮ್ಮ ದೇಶದಲ್ಲಿ ಶೇ.90 ರಷ್ಟು ಸರ್ಕಾರ ಮತ್ತು ಸರ್ಕಾರಿ ಅಧಿಕಾರಿಗಳು ಪಕ್ಷಗಾರರಾಗಿದ್ದು, ಭ್ರಷ್ಟಾಚಾರಕ್ಕೆ ಇದು ಕೂಡ ಕಾರಣವಾಗಿದೆ. ಹಾಗಾಗಿ ಇದರ ಸಂಪೂರ್ಣ ನಿರ್ಮೂಲನೆ ಅಸಾಧ್ಯವಾಗಿದೆ. ಆದರಿಂದ ಸರ್ಕಾರಿ ನೌಕರರಿಗೆ ಭ್ರಷ್ಟಾಚಾರ ಕುರಿತು ಜಾಗೃತಿ ಮೂಡಿಸುವುದು ಮುಖ್ಯವಾಗಿದೆ ಎಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ್.ಎಂ.ಎಸ್ ಮಾತನಾಡಿ, ಸರ್ಕಾರಿ ನೌಕರರ ನಗದು ವ್ಯವಹಾರ ಪ್ರಶ್ನಾರ್ಥವಾಗಿದೆ. ಹಾಗಾಗಿ ಸರ್ಕಾರಿ ನೌಕರರು 20 ಸಾವಿರಕ್ಕಿಂತ ಅಧಿಕವಾಗಿ ಖರ್ಚು ಮಾಡುವುದಾದರೆ ಅದನ್ನು ಬ್ಯಾಂಕ್ ಮೂಲಕ ಮಾಡಬೇಕು. ಇತ್ತೀಚೆಗೆ ಸರ್ವೋಚ್ಚ ನ್ಯಾಯಾಲಯವು ಕೂಡ ಸರ್ಕಾರಿ ನೌಕರರು 20 ಸಾವಿರಕ್ಕಿಂತ ಅಧಿಕ ನಗದು ವ್ಯವಹಾರ ಮಾಡಿದರೆ ಅದನ್ನು ಆದಾಯ ತೆರಿಗೆ ಇಲಾಖೆಯ ತನಿಖೆ ಒಳಪಡಿಸಬೇಕೆಂದು ತಿಳಿಸಿದೆ ಎಂದರು.

ಸರ್ಕಾರಿ ನೌಕರರು ತಮ್ಮ ಹೆಂಡತಿ, ಮಕ್ಕಳ ಆದಾಯ ಇದ್ದರೆ ಅದನ್ನು ವರದಿ ಮಾಡಿ. ಹೊಸದಾಗಿ ಅಧಿಕಾರ ವಹಿಸಿಕೊಳ್ಳುವ ಇಲಾಖೆಯಲ್ಲಿ ಹಿಂದಿನ ಅಧಿಕಾರದ ಅವಧಿಯಲ್ಲಿ ಮಾಡಿದ ಲೋಪದ ಬಗ್ಗೆ ಲೋಕಾಯುಕ್ತರು ನಿಮ್ಮನ್ನು ಪ್ರಶ್ನಿಸಿದರೆ ಅದಕ್ಕೆ ಹಾರಿಕೆ ಉತ್ತರ ನೀಡದೆ ಹಿಂದಿನ ಅಧಿಕಾರದಲ್ಲಿದ್ದ ಅಧಿಕಾರಿಯ ಸಂಕ್ಷಿಪ್ತ ಮಾಹಿತಿಯನ್ನು ಲೋಕಾಯುಕ್ತರಿಗೆ ಒದಗಿಸಿ ಹಾಗೂ ನೀವು ಯಾವಾಗ ಅಧಿಕಾರ ವಹಿಸಿಕೊಂಡಿದ್ದಿರಾ ಎಂಬ ಮಾಹಿತಿಯನ್ನು ಕೂಡ ನೀಡಿ ಎಂದು ಹೇಳಿದರು.

ಅಧಿಕಾರಿಗಳು ತಮ್ಮ ಖಾಸಗಿ ಜೀವನದಲ್ಲಿ ಬೇರೆ ಇಲಾಖೆಯ ಬಗ್ಗೆ ನಕರಾತ್ಮಕವಾಗಿ ಮಾತನಾಡಬಾರದು. ಇದರಿಂದ ಸರ್ಕಾರಿ ಅಧಿಕಾರಿಗಳ ಬಗ್ಗೆ ಕೆಟ್ಟ ಅಭಿಪ್ರಾಯ ಮೂಡುತ್ತದೆ. ಅಧಿಕಾರಿಗಳು ತಮ್ಮ ಖಾಸಗಿ ಜೀವನದಲ್ಲಿ ಹಾಗೂ ಸಾರ್ವಜನಿಕ ಕ್ಷೇತ್ರದಲ್ಲಿ ಪಾರದರ್ಶಕವಾಗಿ ಸೇವೆ ಸಲ್ಲಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಗುರುದತ್ತ ಹೆಗಡೆರವರ ಅಧ್ಯಕ್ಷ ಭಾಷಣದಲ್ಲಿ ಭ್ರಷ್ಟಾಚಾರದ ನಿರ್ಮೂಲನೆ ಆರಂಭವಾಗಬೇಕಿರುವುದು ಉನ್ನತ ಅಧಿಕಾರಿಗಳ ಖರ್ಚಿಯಿಂದ. ಸರ್ಕಾರಿ ವ್ಯವಸ್ಥೆ ಹಾಗೂ ಸರ್ಕಾರಿ ನೌಕರರ ತಮ್ಮ ಖರ್ಚಿಯನ್ನು ಶುದ್ಧವಾಗಿಕೊಟ್ಟುಕೊಳ್ಳಬೇಕು. ಆಗ ಮಾತ್ರ ಭ್ರಷ್ಟಾಚಾರ ನಿರ್ಮೂಲನೆ ಮಾಡಲು ಸಾಧ್ಯವಾಗುತ್ತದೆ. ಅಧಿಕಾರಿಗಳು ಶುದ್ಧವಾಗಿದ್ದರೆ ವ್ಯವಸ್ಥೆಯು ಶುದ್ಧವಾಗಿರುತ್ತದೆ ಎಂದು ಸಲಹೆ ನೀಡಿದರು.

ಹಣ ಹಾಗೂ ಅಧಿಕಾರದ ಪ್ರಭಾವದಿಂದ ಭ್ರಷ್ಟಾಚಾರ ಆರಂಭವಾಗುತ್ತದೆ. ಇದ-ರಿಂದ ಬಡವರಿಗೆ ಹಾಗೂ ದುರ್ಬಲರಿಗೆ ಅನ್ಯಾಯವಾಗುತ್ತದೆ. ಹಾಗಾಗಿ ಅಧಿಕಾರಿಗಳು ಯಾರ ಪ್ರಭಾವಕ್ಕೆ ಒಳಗಾಗದೆ ಕಾನೂನು ಹಾಗೂ ಕಾಯ್ದೆಯ ಅಡಿಯಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದು ಸೂಚಿಸಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಸಿಇಓ ಹೇಮಂತ್.ಎನ್. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಾ.ಹನುಮಂತಪ್ಪ ಕೆ.ಟಿ, ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಮಂಜುನಾಥ ಚೌದರಿ ಎಂ.ಹೆಚ್, ಹಾಗೂ ಉಪಾಧೀಕ್ಷರಾದ ಬಿ.ಪಿ.ಚಂದ್ರಶೇಖರ್, ಪೊಲೀಸ್ ಅಧೀಕ್ಷಕ ಜಿ.ಕೆ.ಮಿಥುನ್ ಕುಮಾರ್, ಲೋಕಾಯುಕ್ತ ಪೊಲೀಸ್ ನಿರೀಕ್ಷಕ ರುದ್ರೇಶ್.ಕೆ.ಪಿ. ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**